ಸಂಪುಟ: ೦೭/ ಸಂಚಿಕೆ: ೨೦೫/ ರವಿವಾರ ದಿನಾಂಕ : ೦೫-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 205/SUNDAY Date : 05-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಗಣತಿದಾರರ ಪ್ರತಿಭಟನೆ ಸಮೀಕ್ಷೆಗೆ ಅಡ್ಡಿ

**ಬೆಂಗಳೂರು:** ಜಾತಿ ಸಮೀಕ್ಷೆ ಎನ್ನಲಾದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಬೆಂಗಳೂರಿನಲ್ಲಿ ಮೊದಲ ದಿನವಾದ ಶನಿವಾರ ಅಡೆತಡೆಗಳು ಎದುರಾಗಿದ್ದು, ತಮ್ಮ ಕುಂದುಕೊರತೆಗಳನ್ನು ಪರಿಹರಿಸುವಂತೆ ಒತ್ತಾಯಿಸಿ ಗಣತಿದಾರರು ಪ್ರತಿಭಟನೆ ನಡೆಸಿದರು. ಸುಮಾರು 100 ಗಣತಿದಾರರು ಮಲ್ಲೇಶ್ವರಂ ನಗರಸಭೆ ಕಚೇರಿ ಎದುರು ಧರಣಿ ನಡೆಸಿದರು. ಸೆಪ್ಟೆಂಬರ್ 22 ರಂದು ಕರ್ನಾಟಕದಾದ್ಯಂತ ಪ್ರಾರಂಭವಾದ ಸಮೀಕ್ಷೆಯು ಅಕ್ಟೋಬರ್ 7 ರವರೆಗೆ ಮುಂದುವರಿಯುತ್ತದೆ. ಬೆಂಗಳೂರಿನಲ್ಲಿ ಇದನ್ನು ಎರಡು ದಿನಗಳ ಕಾಲ ಹೆಚ್ಚಿಗೆ ನಡೆಸಲು ನಿರ್ಧರಿಸಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮೂಲಗಳ ಪ್ರಕಾರ, ಪ್ರತಿಭಟನಾ ನಿರತ ಗಣತಿದಾರರು ಅನಾರೋಗ್ಯದ ಕುಟುಂಬ ಸದಸ್ಯರನ್ನು ನೋಡಿಕೊಳ್ಳುವುದು ಮತ್ತು ಆರೋಗ್ಯದ ತೊಂದರೆಗಳು ಸೇರಿದಂತೆ ವೈಯಕ್ತಿಕ ಸವಾಲುಗಳನ್ನು ಉಲ್ಲೇಖಿಸಿದ್ದಾರೆ ಎನ್ನಲಾಗಿದೆ. ಮಹಿಳೆಯೊಬ್ಬರು ತನ್ನ ವಿಶೇಷ ಮಗುವನ್ನು ಪ್ರತಿಭಟನಾ ಸ್ಥಳಕ್ಕೆ ಕರೆತಂದಿದ್ದು ಏಕೆ ಸಮೀಕ್ಷೆ ಕಾರ್ಯದಲ್ಲಿ ಭಾಗವಹಿಸಲು ಸಾಧ್ಯವಾಗಲಿಲ್ಲ ಎಂಬುದನ್ನು ತೋರಿಸಿದ್ದಾರೆ. ನಂತರ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಪ್ರತಿಭಟನಾಕಾರರನ್ನು ಭೇಟಿಯಾದರು. ಅವರಲ್ಲಿ ಬಹುತೇಕರು ಸರ್ಕಾರಿ ಶಿಕ್ಷಕರಾಗಿದ್ದಾರೆ. ಸಮೀಕ್ಷೆಯಲ್ಲಿ ಪಾಲ್ಗೊಳ್ಳುವಂತೆ ಜನರಲ್ಲಿ ಮನವಿ ಮಾಡುತ್ತೇನೆ ಎಂದು ಅವರು ತಿಳಿಸಿದರು. ರಾಜ್ಯ ಸರಕಾರ ಅಂದಾಜು ರೂ. 420 ಕೋಟಿ ವೆಚ್ಚದಲ್ಲಿ ಸಮೀಕ್ಷೆ ನಡೆಸುತ್ತಿದೆ.

## ಪ್ರವಾಸಿಗ ಸಮುದ್ರಪಾಲು

**ಕಾರವಾರ:** ಸೆಲ್ಫೀ ತೆಗೆಯಲು ಹೋಗಿ ಸಮುದ್ರದಲ್ಲಿ ಮುಳುಗಿ ಶಿವಮೊಗ್ಗ ಮೂಲದ ಪ್ರವಾಸಿಗ ದಾರುಣ ಸಾವನ್ನಪಪಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಗೋಕರ್ಣದ ಓಂ ಕಡಲ ತೀರದಲ್ಲಿ ನಡೆದಿದೆ.ಶಿವಮೊಗ್ಗ ಮೂಲದ ಅಸ್ಲಾಂ (45) ಮೃತ ವ್ಯಕ್ತಿ. ಅಸ್ಲಾಂ ಶಿವಮೊಗ್ಗ ದಿಂದ 10ಜನರ ಜೊತೆಯಲ್ಲಿ ಗೋಕರ್ಣಕ್ಕೆ ಪ್ರವಾಸಕ್ಕೆ ಬಂದಿದ್ದರು. ಈ ವೇಳೆ ಓಂ ಬೀಚ್ ನಲ್ಲಿ ಕಲ್ಲುಬಂಡೆಯ ಮೇಲೆ ಸೆಲ್ಫೀ ತೆಗೆಯುವಾಗ ಕಾಲುಜಾರಿ ಸಮುದ್ರಪಾಲಾಗಿದ್ದಾರೆ.ಮೃತದೇಹವನ್ನು ಗೋಕರ್ಣದ ಪೊಲೀಸರು, ಲೈಫ್ ಗಾರ್ಡ ಸಿಬ್ಬಂದಿ ಸಮುದ್ರದ ಮೇಲೆ ತಂದಿದ್ದು, ಶವವನ್ನು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರವಾನೆ ಮಾಡಿದ್ದಾರೆ. ಗೋಕರ್ಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಬೆಳಗಾವಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

# ಪ್ರತಿ ಜಿಲ್ಲೆಗೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ

**ಬೆಳಗಾವಿ:** "ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಒಂದು ವೈದ್ಯಕೀಯ ಕಾಲೇಜು ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸುವುದು ನಮ್ಮ ಸರ್ಕಾರದ ಗುರಿ. ಆ ನಿಟ್ಟಿನಲ್ಲಿ ಈಗಾಗಲೇ 22 ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸಲಾಗಿದೆ. ಉಳಿದ ಕಡೆಗಳಲ್ಲೂ ಶೀಘ್ರವೇ ಆರಂಭಿಸಲಾಗುವುದು" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಕಟ್ಟಡ ಉದ್ಘಾಟನೆ, ಗೃಹವೈದ್ಯರ ವಸತಿ ನಿಲಯ ನಿರ್ಮಾಣಕ್ಕೆ ಶಿಲಾನ್ಯಾಸ, ಸ್ಮಾರ್ಟ್ ಸಿಟಿ ಯೋಜನೆಯಡಿ ನಿರ್ಮಿಸಲಾಗಿರುವ ನಗರ ಬಸ್ ನಿಲ್ದಾಣ ಉದ್ಘಾಟನೆ ಹಾಗೂ ರಾಣಿ ಚೆನ್ನಮ್ಮ ವಿಶ್ವವಿದ್ಯಾನಿಲಯದ ಪಿಎಂ-ಉಷಾ(ಮೇರು) ಕಟ್ಟಡ ಕಾಮಗಾರಿಗಳು ಮತ್ತು ಹೆದ್ದಾರಿಯಿಂದ ವಿಶ್ವವಿದ್ಯಾನಿಲಯದ ರಸ್ತೆ ನಿರ್ಮಾಣ ಕಾಮಗಾರಿಗೆ ಶುಕ್ರವಾರ ಬಿಮ್ಸ್ ಆವರಣದಲ್ಲಿ ಶಿಲಾನ್ಯಾಸ ನೆರವೇರಿಸಿ ಸಿಎಂ ಮಾತನಾಡಿದರು.

"ನಾನೇ ಸೂಪರ್ ಸ್ಪೆಷಾಲಿಟಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದ್ದೆ. ಬಳಿಕ ಕಾರಣಾಂತರಗಳಿಂದ ಕುಂಟುತ್ತಾ ಸಾಗಿದ್ದ ಆಸ್ಪತ್ರೆಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಿ ಇದೀಗ ಆರಂಭಿಸಲಾಗಿದೆ. ಹಂತ ಹಂತವಾಗಿ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಲಾಗುವುದು. ಸರ್ಕಾರಿ ಆಸ್ಪತ್ರೆಗೆ ಬರುವವರೆಲ್ಲಾ ಬಡ-ಮಧ್ಯಮ ವರ್ಗದವರು. ಇವರಿಗೂ ಅತ್ಯುತ್ತಮ ಆರೋಗ್ಯ ಸೇವೆ ಒದಗಿಸುವುದು ನಮ್ಮ ಉದ್ದೇಶ. ಕೆ.ಎಲ್.ಇ. ಸಂಸ್ಥೆಯಿಂದ ವೈದ್ಯರನ್ನು ನಿಯೋಜಿಸಿ ಉಚಿತ ಸೇವೆ ಒದಗಿಸಿರುವುದರಿಂದ ಸರ್ಕಾರದ ವತಿಯಿಂದ ಡಾ.ಪ್ರಭಾಕರ ಕೋರೆ ಅವರಿಗೆ ಧನ್ಯವಾದ ಸಲ್ಲಿಸುತ್ತೇನೆ" ಎಂದರು.

"ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಲಕ್ಷಾಂತರ ಜನರಿಗೆ ನೆರವು ನೀಡಲಾಗುತ್ತಿದ್ದು, ಇಂತಹ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪನೆಯಿಂದ ಉಚಿತವಾಗಿ ಉತ್ತಮ ಚಿಕಿತ್ಸೆ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು. ಬಡವರಿಗೆ ಅತ್ಯುತ್ತಮ ವೈದ್ಯಕೀಯ ಸೌಲಭ್ಯ ಒದಗಿಸುವುದು ಸರಕಾರದ ಜವಾಬ್ದಾರಿ ಮತ್ತು ಕರ್ತವ್ಯವಾಗಿದೆ" ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಬಳಿಕ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ಮಾತನಾಡಿ, "ಅತ್ಯಾಧುನಿಕ ಸೌಲಭ್ಯ ಹೊಂದಿರುವ ಬಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯು ಬಡವರ ಕಾಮಧೇನು. ಖಾಸಗಿ ಆಸ್ಪತ್ರೆಗಳಲ್ಲಿ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಚಿಕಿತ್ಸೆ ಪಡೆಯುವುದು ಬಡವರಿಗೆ ಸಾಧ್ಯವಿಲ್ಲ. ಆದ್ದರಿಂದ ಅವರಿಗಾಗಿ ಸೂಪರ್ ಸ್ಪೆಷಾಲಿಟಿ ಸ್ಥಾಪಿಸಲಾಗಿದೆ. ಕೆ.ಎಲ್.ಇ. ಸಂಸ್ಥೆಯು 20 ವೈದ್ಯರನ್ನು ಸರದಿಯಂತೆ ನಿಯೋಜಿಸುವ ಮೂಲಕ ಬಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಜತೆಗೆ ಕೈಜೋಡಿಸಿದೆ. 50 ಕೋಟಿ ರೂಪಾಯಿ ವೆಚ್ಚದಲ್ಲಿ ಬಿಮ್ಸ್ ಆಸ್ಪತ್ರೆ ಆವರಣದಲ್ಲಿಯೇ ಕ್ಯಾನ್ಸರ್ ಆಸ್ಪತ್ರೆ ಸ್ಥಾಪಿಸಲಾಗುವುದು" ಎಂದರು.ಪ್ರತಿ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸುವ ಗುರಿ ಹೊಂದಲಾಗಿತ್ತು. ಇದುವರೆಗೆ 22 ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸಲಾಗಿದ್ದು, ಶೀಘ್ರದಲ್ಲಿಯೇ ಬಾಗಲಕೋಟೆ ಮತ್ತು ಕನಕಪುರದಲ್ಲೂ ವೈದ್ಯಕೀಯ ಕಾಲೇಜು ಆರಂಭಿಸುವ ಮೂಲಕ ಬಡವರ ಮಕ್ಕಳಿಗೆ ವೈದ್ಯಕೀಯ ಶಿಕ್ಷಣ ಪಡೆಯಲು ಅನುಕೂಲವಾಗಲಿದೆ. ಜನರಿಗೆ ಗುಣಮಟ್ಟದ ಚಿಕಿತ್ಸೆ ಕೂಡ ಇದರಿಂದ ಲಭಿಸಲಿದೆ. ಇಡೀ ದೇಶದಲ್ಲಿ ಅತೀ ಹೆಚ್ಚು ವೈದ್ಯಕೀಯ ಸೀಟುಗಳನ್ನು ಹೊಂದಿರುವ ಹೆಗ್ಗಳಿಕೆಯನ್ನು ಕರ್ನಾಟಕ ರಾಜ್ಯ ಹೊಂದಿದೆ. ಮುಂದಿನ ಐದು ವರ್ಷಗಳಲ್ಲಿ ಪ್ರತಿ ಜಿಲ್ಲೆಯಲ್ಲಿ ಸರಕಾರಿ ವೈದ್ಯಕೀಯ ಕಾಲೇಜು, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ಪ್ರತಿ ಜಿಲ್ಲೆಯಲ್ಲಿ ಕ್ಯಾನ್ಸರ್ ಆಸ್ಪತ್ರೆ ಹಾಗೂ ಟ್ರಾಮಾ ಕೇಂದ್ರಗಳನ್ನು ಆರಂಭಿಸುವ ಯೋಜನೆ ರೂಪಿಸಲಾಗಿದೆ" ಎಂದು ಸಚಿವ ಡಾ. ಶರಣ ಪ್ರಕಾಶ್ ಪಾಟೀಲ ತಿಳಿಸಿದರು.ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮಾತನಾಡಿ, ಸರ್ಕಾರ ಜಾರಿಗೆ ತಂದಿರುವ ಮಹಿಳೆಯರ ಉಚಿತ ಪ್ರಯಾಣದ ಶಕ್ತಿ ಯೋಜನೆಯಡಿ ಇದುವರೆಗೆ 565 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿರುತ್ತಾರೆ. ನಮ್ಮ ಸರಕಾರದ ಅವಧಿಯಲ್ಲಿಯೇ ಬೆಳಗಾವಿ ನಗರ ಬಸ್ ನಿಲ್ದಾಣ ಕಾಮಗಾರಿ ಆರಂಭಿಸಲಾಗಿತ್ತು. ನಂತರ ನಮ್ಮ ಅವಧಿಯಲ್ಲಿಯೇ ಲೋಕಾರ್ಪಣೆಗೊಳಿಸಲಾಗಿದೆ" ಎಂದರು.

ಕಾರ್ಯಕ್ರಮದಲ್ಲಿ ಸಚಿವರಾದ ಸತೀಶ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್, ಅಧ್ಯಕ್ಷತೆ ವಹಿಸಿದ್ದ ಶಾಸಕ ಆಸಿಫ್ ಸೇಠ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಕೆಎಲ್ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ.ಪ್ರಭಾಕರ ಕೋರೆ, ಸರ್ಕಾರದ ಮುಖ್ಯ ಸಚೇತಕ ಅಶೋಕ ಪಟ್ಟಣ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಅಧ್ಯಕ್ಷ ಮಹಾಂತೇಶ ಕೌಜಲಗಿ, ವಾಯವ್ಯ ಸಾರಿಗೆ ಸಂಸ್ಥೆಯ ಅಧ್ಯಕ್ಷ ಭರಮಗೌಡ ಕಾಗೆ, ಶಾಸಕರಾದ ಬಾಬಾಸಾಹೇಬ ಪಾಟೀಲ, ಮಹೇಂದ್ರ ತಮ್ಮನ್ನವರ, ವಿಧಾನಪರಿಷತ್ ಸದಸ್ಯರಾದ ನಾಗರಾಜ ಯಾದವ, ಚನ್ನರಾಜ ಹಟ್ಟಿಹೊಳಿ, ಲಕ್ಷ್ಮಣರಾವ್ ಚಿಂಗಳೆ ಪ್ರಾದೇಶಿಕ ಆಯುಕ್ತೆ ಜಾನಕಿ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಕುಲಪತಿ ಪ್ರೊ. ತ್ಯಾಗರಾಜ್, ನಗರ ಪೊಲೀಸ್ ಆಯುಕ್ತ ಭೂಷಣ ಬೊರಸೆ, ಸಿಇಒ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಬಿಮ್ಸ್ ನಿರ್ದೇಶಕ ಅಶೋಕ ಶೆಟ್ಟಿ ಸೇರಿ ಮತ್ತಿತರರು ಇದ್ದರು.



## ಬೆಳಗಾವಿ ನಗರಕ್ಕೆ ನೂರು ಎಲೆಕ್ಟ್ರಿಕ್ ಬಸ್

ಸ್ಮಾರ್ಟ್ ಸಿಟಿ ಯೋಜನೆಯಡಿ ಬೆಳಗಾವಿ ನಗರ ಬಸ್ ನಿಲ್ದಾಣ ನಿರ್ಮಿಸಲಾಗಿದೆ. ಶೀಘ್ರದಲ್ಲಿಯೇ ಒಂದು ನೂರು ಎಲೆಕ್ಟ್ರಿಕ್ ಬಸ್ ಗಳನ್ನು ಬೆಳಗಾವಿ ನಗರಕ್ಕೆ ಬರಲಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಶಿಕ್ಷಣವೇ ಶಕ್ತಿ. ಶಿಕ್ಷಣದಿಂದ ಸ್ವತಂತ್ರರಾಗಲು ಸಾಧ್ಯ. ಆದ್ದರಿಂದ ದಲಿತರು, ಹಿಂದುಳಿದವರು ಉನ್ನತ ಶಿಕ್ಷಣ ಪಡೆದುಕೊಳ್ಳಬೇಕು ಎಂಬುದು ಸರಕಾರದ ಆಶಯವಾಗಿದೆ. ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳಿಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಈ ಬಾರಿ ಗ್ಯಾರಂಟಿ ಯೋಜನೆಗಳ ಮೂಲಕ ಬಡವರ ಸ್ವಾವಲಂಬನೆ ಮತ್ತು ಆರ್ಥಿಕಾಭಿವೃದ್ಧಿಗೆ ಅವಕಾಶ ಕಲ್ಪಿಸಲಾಗಿದೆ. ಶಕ್ತಿ ಯೋಜನೆಯಡಿ ಇದುವರೆಗೆ 565 ಕೋಟಿ ಮಹಿಳೆಯರು ಶೂನ್ಯ ಮೊತ್ತದ ಟಿಕೆಟ್ ಪಡೆದು ಉಚಿತ ಪ್ರಯಾಣ ಮಾಡಿರುವುದು ದಾಖಲೆಯಾಗಿದೆ. 1.25 ಲಕ್ಷ ಕುಟುಂಬಗಳ ಯಜಮಾನಿಯರಿಗೆ ಪ್ರತಿ ತಿಂಗಳು ತಲಾ ಎರಡು ಸಾವಿರ ರೂಪಾಯಿ ನೀಡಲಾಗುತ್ತಿದೆ. ಇದಲ್ಲದೇ ಅನ್ನಭಾಗ್ಯ, ಗೃಹಜ್ಯೋತಿ, ಯುವನಿಧಿ ಯೋಜನೆಗಳ ಮೂಲಕ ಜನರ ಬದುಕು ಉತ್ತಮಪಡಿಸಿ ತನ್ಮೂಲಕ ಸಮಾಜದಲ್ಲಿನ ಅಸಮಾನತೆ ತೊಡೆದುಹಾಕಲು ಶ್ರಮಿಸಲಾಗುತ್ತಿದೆ.

## ಕರ್ನಾಟಕ ರಾಜ್ಯೋತ್ಸವಕ್ಕಾಗಿ 2ಕೋಟಿ ಅನುದಾನಕ್ಕೆ ಬೇಡಿಕೆ

ಬೆಳಗಾವಿ ಜಿಲ್ಲೆಯು ಭೌಗೋಳಿಕವಾಗಿ ಹದಿನೆಂಟು ವಿಧಾನಸಭಾ ಕ್ಷೇತ್ರಗಳನ್ನು ಹೊಂದಿರುವ ದೊಡ್ಡ ಜಿಲ್ಲೆಯಾಗಿದ್ದು. ಈ ಜಿಲ್ಲೆಗೆ ವಿವಿಧ ಬೇಡಿಕೆಗಳು ಇವೆ, ಅವುಗಳನ್ನು ಈಡೇರಿಸುವಂತೆ ಆಗ್ರಹಿಸಿ, ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಅಧ್ಯಕ್ಷ ದೀಪಕ ಗುಡಗನಟ್ಟಿ ಬೆಂಬಲಿಗರಿಂದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು. ಬೇಡಿಕೆಗಳು: ಅದ್ದೂರಿ ರಾಜ್ಯೋತ್ಸವಕ್ಕೆ ಪ್ರತಿವರ್ಷ ಎರಡುಕೋಟಿ ರೂ ಅನುದಾನಕ್ಕೆ ಆಗ್ರಹ. ರಾಜ್ಯೋತ್ಸವದ ವೇಳೆಗೆ ಪತ್ರಿ ವರ್ಷ ಒಬ್ಬರಿಗೆ ಪ್ರಶಸ್ತಿ ನೀಡಬೇಕು. ಹೋರಾಟಗಾರರ ಮೇಲೆ ದಾಖಲಾದ ಪ್ರಕರಣಗಳನ್ನು ಹಿಂದಕ್ಕೆ ಪಡೆದುಕೊಳ್ಳುವುದು, ಚಿಕ್ಕೋಡಿ ತಾಲೂಕಿನಲ್ಲಿ ವೈದ್ಯಕೀಯ ಕಾಲೇಜು ಮಂಜೂರಿಗಾಗಿ ಬೇಡಿಕೆ. 500 ರೂ ಹಾಸಿಗೆವುಳ್ಳ ಹೈಟೆಕ್ ಹೆರಿಗೆ ಆಸ್ಪತ್ರೆಯ ಬೇಡಿಕೆ. ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ಹಾಸ್ಟೆಲ್ ವ್ಯವಸ್ಥೆ, ಕರ್ನಾಟಕ-ಮಹಾರಾಷ್ಟ್ರದ ಗಡಿಯಲ್ಲಿರುವ ಕನ್ನಡ ಶಾಲೆಗಳಿಗೆ ವಿಶೇಷ ಅನುದಾನ, ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಕಿತ್ತೂರು ರಾಣಿ ಚೆನ್ನಮ್ಮ ಹೆಸರು ನಾಮಕರಣವಾಗಬೇಕು. ಕೈಗಾರಿಕಾ ಉದ್ಯಮ ನೀತಿಯನ್ನು ಆಕರ್ಷಿಸುವ ನೀತಿಜಾರಿಯಾಗಬೇಕು, ರಕ್ಷಣಾ ಇಲಾಖೆಯಲ್ಲಿ ಡಿಫೆನ್ಸ್ ಬೇಸ್ಡ್ ಕಾರ್ಖಾನೆ ಸ್ಥಾಪನೆಗೆ ಆಗ್ರಹ. ಹೀಗೆ ಕರ್ನಾಟಕ ರಕ್ಷಣೆ ವೇದಿಕೆ ಮುಖ್ಯಮಂತ್ರಿಗಳಿಗೆ ಮನವಿಯನ್ನು ಮಾಡಿಕೊಂಡಿದ್ದಾರೆ, ಮನವಿಯನ್ನು ಸ್ಪಂದಿಸಿದ ಅವರು ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದಾರೆ.



### ಗಾಝಾ ಶಾಂತಿ ಒಪ್ಪಂದ

## ಟ್ರಂಪ್ ಮುಂದಾಳತ್ವ ಶ್ಲಾಘಿಸಿದ ಮೋದಿ

**ಹೊಸದಿಲ್ಲಿ:** ಗಾಝಾ ಶಾಂತಿ ಒಪ್ಪಂದದ ಕುರಿತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮುಂದಾಳತ್ವವನ್ನು ಸ್ವಾಗತಿಸುವುದಾಗಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಒತ್ತೆಯಾಳುಗಳ ಬಿಡುಗಡೆ ಮತ್ತು ಟ್ರಂಪ್ ಅವರ ಶಾಂತಿ ಯೋಜನೆಯ ಕೆಲವು ಪ್ರಸ್ತಾಪಗಳಿಗೆ ಹಮಾಸ್ ಒಪ್ಪಿಗೆ ಹಿನ್ನೆಲೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, ಗಾಝಾದಲ್ಲಿ ಶಾಂತಿ ಒಪ್ಪಂದಗಳು ನಿರ್ಣಾಯಕ ಪ್ರಗತಿ ಸಾಧಿಸುತ್ತಿರುವುದರಿಂದ ನಾವು ಅಮೆರಿಕ ಅಧ್ಯಕ್ಷ ಟ್ರಂಪ್ ಅವರ ಮುಂದಾಳತ್ವವನ್ನು ಸ್ವಾಗತಿಸುತ್ತೇವೆ. ಒತ್ತೆಯಾಳುಗಳ ಬಿಡುಗಡೆಗೆ ಹಮಾಸ್ ಒಪ್ಪಿಗೆ ನೀಡಿರುವುದು ಒಂದು ಮಹತ್ವದ ಹೆಜ್ಜೆಯಾಗಿದೆ ಎಂದು ಪ್ರಧಾನಿ ಮೋದಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಭಾರತದ ದೀರ್ಘಕಾಲೀನ ನಿಲುವನ್ನು ಪುನರುಚ್ಚರಿಸಿದ ಪ್ರಧಾನಿ ಮೋದಿ, ಮಧ್ಯಪ್ರಾಚ್ಯದಲ್ಲಿ ಶಾಶ್ವತ ಶಾಂತಿಗಾಗಿ ನಡೆಸುವ ಎಲ್ಲಾ ಪ್ರಯತ್ನಗಳನ್ನು ಭಾರತವು ಬಲವಾಗಿ ಬೆಂಬಲಿಸುವುದನ್ನು ಮುಂದುವರಿಸುತ್ತದೆ ಎಂದು ಹೇಳಿದರು.

ಗಾಝಾ ಯುದ್ಧ ಅಂತ್ಯಗೊಳಿಸಲು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮಂಡಿಸಿದ 20 ಅಂಶಗಳ ಯೋಜನೆಗೆ ಹಮಾಸ್ ಪ್ರತಿಕ್ರಿಯೆಯನ್ನು ನೀಡಿದೆ. ಒತ್ತೆಯಾಳುಗಳ ಬಿಡುಗಡೆ ಮತ್ತು ಗಾಝಾದ ಆಡಳಿತ ಹಸ್ತಾಂತರಿಸುವಂತಹ ಕೆಲವು ಅಂಶಗಳಿಗೆ ಒಪ್ಪಿಗೆ ಸೂಚಿಸಿದೆ. ಉಳಿದ ಪ್ರಮುಖ ಷರತ್ತುಗಳ ಕುರಿತು ಮಾತುಕತೆ ನಡೆಸಬೇಕಿದೆ ಎಂದು ಸ್ಪಷ್ಟಪಡಿಸಿದೆ. ಇದರ ಬೆನ್ನಲ್ಲೇ ತಕ್ಷಣವೇ ಗಾಝಾ ಮೇಳಿನ ಬಾಂಬ್ ದಾಳಿಯನ್ನು ಸ್ಥಗಿತಗೊಳಿಸುವಂತೆ ಟ್ರಂಪ್ ಇಸ್ರೇಲ್ ಗೆ ಸೂಚನೆ ನೀಡಿದ್ದಾರೆ.



ಗಾಝಾದಲ್ಲಿ ಯುದ್ಧ ಕೊನೆಗೊಳಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಯೋಜನೆಯ ಮೊದಲ ಹಂತವನ್ನು ಜಾರಿಗೆ ತರಲು ಇಸ್ರೇಲ್ ಸಿದ್ಧತೆ ನಡೆಸುತ್ತಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಕೂಡ ಹೇಳಿದ್ದಾರೆ.

## 'ಗ್ರಾಮದನಿ' ಪಾಡ್‌ಕಾಸ್ಟ್ ಲೋಕಾರ್ಪಣೆ

**ಬೆಂಗಳೂರ:** ಗ್ರಾಮೀಣಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ಮಹತ್ವದ ವಿಷಯಗಳನ್ನು, ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಪಾರದರ್ಶಕತೆ, ಆಡಳಿತವನ್ನು ಜನಸ್ನೇಹಿಯಾಗಿಸುವ ನಿಟ್ಟಿನಲ್ಲಿ, ಇಲಾಖೆಯ ಎಲ್ಲ ಪತ್ರಗಳನ್ನು ಸರಳೀಕರಣ ಮಾಡಿ ಜನಸಾಮಾನ್ಯರಿಗೆ ಅರ್ಥೈಸುವ ನಿಟ್ಟಿನಲ್ಲಿ 'ಗ್ರಾಮದನಿ' ಪಾಡ್‌ಕಾಸ್ಟ್ ಕಾರ್ಯನಿರ್ವಹಿಸುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.



ಶನಿವಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ಹೊಸಹೆಜ್ಜೆ ಇಡುವುದರೊಂದಿಗೆ ಆರಂಭಿಸಿರುವ ಸಾಮಾಜಿಕ ಮಾಧ್ಯಮಗಳ ಮೂಲಕ ಜನರನ್ನು ತಲುಪಲಿರುವ 'ಗ್ರಾಮದನಿ' ಸರಣಿ ಪಾಡ್‌ಕಾಸ್ಟ್ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು. ಇಂದಿನ ಮಾಧ್ಯಮದ ಯುಗದಲ್ಲಿ, ಸಮುದಾಯಕ್ಕೆ ಮಾಹಿತಿ ಮತ್ತು ಅರಿವು ಮೂಡಿಸುವುದು ಅತ್ಯಂತ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಗ್ರಾಮೀಣಾಭಿವೃದ್ಧಿ ಕ್ಷೇತ್ರದಲ್ಲಿ ಮಾಹಿತಿ ಕೊರತೆಯನ್ನು ನೀಗಿಸಲು ತಂತ್ರಜ್ಞಾನದ ಸಮರ್ಪಕ ಬಳಕೆ ನೆರವಾಗಬಲ್ಲದು. 'ಗ್ರಾಮದನಿ' ಅಕ್ಷರಶಃ 'ಗ್ರಾಮೀಣ ಕರ್ನಾಟಕದ ಧ್ವನಿ'ಯಾಗಲಿದ್ದು, ಇದು ಕೇವಲ ಮಾಹಿತಿ ನೀಡುವ ವೇದಿಕೆಯಾಗಿರದೆ ಶಕ್ತಿಯುತ ಅರಿವಿನ ಮಾಧ್ಯಮವಾಗಲಿದೆ ಎಂದು ಅವರು ತಿಳಿಸಿದರು. ಸಾಮರ್ಥ್ಯಾಭಿವೃದ್ಧಿ ಮತ್ತು ಜ್ಞಾನಾರ್ಜನೆ ಈ ಪಾಡ್‌ಕಾಸ್ಟ್‌ನ ಉದ್ದೇಶವಾಗಿದ್ದು, ಚುನಾಯಿತ ಪ್ರತಿನಿಧಿಗಳು, ಕ್ಷೇತ್ರ ಸಿಬ್ಬಂದಿಗಳು/ಅಧಿಕಾರಿಗಳು ಹಾಗೂ ಜನಸಾಮಾನ್ಯರ ಸಾಮರ್ಥ್ಯವನ್ನು ವೃದ್ಧಿಸಲು ಮತ್ತು ಅವರಿಗೆ ಅಗತ್ಯವಾದ ಜ್ಞಾನವನ್ನು ತಲುಪಿಸಲು ಇದು ಸೂಕ್ತ ವೇದಿಕೆಯಾಗಲಿದೆ. ಗ್ರಾಮ ಪಂಚಾಯತಿಗಳ ತೆರಿಗೆ, ದರ ಮತ್ತು ಶುಲ್ಕಗಳಿಗೆ ಸಂಬಂಧಿಸಿದ ನಿಯಮಗಳು, ಪಂಚಾಯತ್ ವ್ಯವಸ್ಥೆಯ ಡಿಜಿಟಲೀಕರಣ ಕುರಿತ ಮಾರ್ಗಸೂಚಿಗಳು, ಪಂಚತಂತ್ರ 2.0 ತಂತ್ರಾಂಶದಲ್ಲಿ ಇಂಡೀಕರಿಸುವ ವಿಧಾನ ಮುಂತಾದ ಹಲವು ಉಪಯುಕ್ತ ಸುತ್ತೋಲೆಗಳು ಮತ್ತು ಮಾರ್ಗಸೂಚಿಗಳನ್ನು ಇಲ್ಲಿ ಪ್ರಸಾರ ಮಾಡಲಾಗುತ್ತದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. 'ಗ್ರಾಮದನಿ' ಪಾಡ್‌ಕಾಸ್ಟ್ ಸರಣಿಯು ಗ್ರಾಮೀಣಾಭಿವೃದ್ಧಿ ಕ್ಷೇತ್ರದಲ್ಲಿ ಮಾಹಿತಿ ಪ್ರಸಾರ ಮಾಡುವ ಮತ್ತು ಆಡಳಿತ ಸುಧಾರಣೆಗೆ ಸಹಾಯ ಮಾಡುವ ನಿಟ್ಟಿನಲ್ಲಿ ದೊಡ್ಡ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು. ಈ ವೇಳೆ ಗ್ರಾಮೀಣಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಡಿ. ರಣದೀಪ್, ಆಯುಕ್ತೆ ಡಾ.ಅರುಂಧತಿ ಚಂದ್ರಶೇಖರ್ ಹಾಜರಿದ್ದರು.

## ಬೆಳಗಾವಿ ಸ್ತಬ್ಧಚಿತ್ರಕ್ಕೆ 3ನೇ ಸ್ಥಾನ



**ಬೆಳಗಾವಿ:** ಮೈಸೂರು ಜಿಲ್ಲೆಯಲ್ಲಿ ಜಂಬೂ ಸವಾರಿಯಲ್ಲಿ 31 ಜಿಲ್ಲೆ, ರಾಜ್ಯ ಸರ್ಕಾರದ 8, ವಿವಿಧ ನಿಗಮ ಮಂಡಳಿಯ 13 ಸೇರಿ ಇತರೆ 6 ಸ್ತಬ್ಧ ಚಿತ್ರಗಳು ಸೇರಿ ಒಟ್ಟು ಬರೋಬ್ಬರಿ 58 ಸ್ತಬ್ಧ ಚಿತ್ರಗಳು ಮೆರವಣಿಗೆಯಲ್ಲಿ ಸಾಗಿ ಹೊಸ ಸಂದೇಶ ನೀಡಿದವಲ್ಲದೆ, ಇದೇ ಮೊದಲ ಬಾರಿಗೆ ಇಷ್ಟೊಂದು ಸಂಖ್ಯೆಯ ಪ್ರದರ್ಶನ ಹೊಸ ದಾಖಲೆ ಬರೆಯಿತು. ಅದರಲ್ಲಿ ಬೆಳಗಾವಿ ಜಿಲ್ಲೆಯ ಶ್ರೀ ಮಹಾಕಾಳಿ ಮಾಯಕ್ಕಾದೇವಿ ದೇವಸ್ಥಾನ ಚಿಂಚಲಿಯ ವಿಶೇಷತೆ ಸಾರುವ ಸ್ತಬ್ಧಚಿತ್ರವೂ ಒಂದಾಗಿದ್ದು, ಜನಮನರ ಗಮನ ಸೆಳೆದು ಶನಿವಾರ (ಅ.04) ರಂದು ಮೂರನೆ ಸ್ಥಾನ ಪಡೆದುಕೊಂಡಿದೆ. ಮಾಯಕ್ಕ ದೇವಸ್ಥಾನದ ಇತಿಹಾಸ, ದೇವಿಯ ಮಹತ್ವ ಹಾಗೂ ದೇವತೆ ನಿದ್ರಿಸುತ್ತಿರುವ ತೇವಭೂಮಿಯ ಚಿತ್ರಣವನ್ನು ಸ್ಥಬ್ಧಚಿತ್ರದಲ್ಲಿ ತೋರಿಸಲಾಗಿದೆ. ಬಿ.ಎಸ್.ಗಸ್ತಿ ಕಲಾವಿದರ ತಂಡದಿಂದ ಈ ಸ್ತಬ್ಧ ಚಿತ್ರವನ್ನು ನಿರ್ಮಿಸಲಾಗಿದೆ ಎಂದು ಸ್ತಬ್ಧಚಿತ್ರ ನೊಡಲ್ ಅಧಿಕಾರಿ ರವಿ. ಎನ್. ಬಂಗಾರೆಪ್ಪನವರ ತಿಳಿಸಿದ್ದಾರೆ.

> ಐತಿಹಾಸಿಕ ಧಾರ್ಮಿಕ ಹಿನ್ನೆಲೆ ಹೊಂದಿರುವ ಚಿಂಚಲಿ ಗ್ರಾದಮ ಮಾಯಕ್ಕಾದೇವಿ ದೇವಸ್ಥಾನ ಇತಿಹಾಸ ಸಾರುವ ಮಾಯಕ್ಕಾದೇವಿ ಸ್ತಬ್ದ ಚಿತ್ರವು ಮೈಸೂರು ದಸರಾ ಮೆರವಣಿಗೆಯ ವಿಶೇಷ ಆಕರ್ಷಣೆಯಾಗಿತ್ತು. ಒಟ್ಟು 58 ಸ್ತಬ್ದಚಿತ್ರಗಳಲ್ಲಿ ಬೆಳಗಾವಿ ಸ್ತಬ್ದ ಚಿತ್ರಕ್ಕೆ ಮೂರನೇ ಸ್ಥಾನ ದೊರಕಿರುವುದು ಹೆಮ್ಮೆಯ ವಿಷಯವಾಗಿದೆ.
>
> **ರಾಹುಲ ಶಿಂಧೆ, ಜಿಪಂ ಸಿಇಒ**

### ಗಡಿಯಲ್ಲಿ ಪಾಕ್ ಡ್ರೋನ್ ಪತ್ತೆ

## ಭದ್ರತಾ ಪಡೆಗಳಿಂದ ಶೋಧ



**ಸಾಂಬಾ:** ಜಮ್ಮುಕಾಶ್ಮೀರದ ಸಾಂಬಾ ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಗಡಿ ಸಮೀಪದ ಮುಂಚೂಣಿ ಪ್ರದೇಶದ ಗ್ರಾಮವೊಂದರಲ್ಲಿ ಪಾಕಿಸ್ತಾನಿ ಡ್ರೋನ್ ಕಂಡುಬಂದ ಬಳಿಕ ಭದ್ರತಾ ಪಡೆಗಳು ಶೋಧ ಕಾರ್ಯಾಚರಣೆಯನ್ನು ನಡೆಸುತ್ತಿವೆ ಎಂದು ಅಧಿಕಾರಿಗಳು ಶನಿವಾರ ತಿಳಿಸಿದರು.

ಶುಕ್ರವಾರ ತಡರಾತ್ರಿ ಪಾಕಿಸ್ತಾನದಿಂದ ಬಂದಿದ್ದ ಡ್ರೋನ್ ರೀತಿಯ ವಸ್ತುವೊಂದು ರಾಮಘಡ ವಿಭಾಗದ ನಂಗಾ ಗ್ರಾಮದ ಮೇಲೆ ಹಾರಾಡುತ್ತಿದ್ದು ಕಂಡು ಬಂದಿದ್ದು, ಇದು ಗಡಿ ಪ್ರದೇಶದಲ್ಲಿ ಆತಂಕವನ್ನು ಸೃಷ್ಟಿಸಿದೆ ಎಂದರು.

ಗಡಿಯಾಚೆಯಿಂದ ಮಾದಕ ದ್ರವ್ಯಗಳು ಅಥವಾ ಶಸ್ತ್ರಾಸ್ತ್ರಗಳನ್ನು ಕೆಳಕ್ಕೆ ಬೀಳಿಸಿಲ್ಲ ಎನ್ನುವುದನ್ನು ಖಚಿತಪಡಿಸಿಕೊಳ್ಳಲು ಭದ್ರತಾ ಪಡೆಗಳು ಮತ್ತು ಪೊಲೀಸರನ್ನು ಪ್ರದೇಶದಲ್ಲಿ ಶೋಧ ಕಾರ್ಯಾಚರಣೆಗೆ ನಿಯೋಜಿಸಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಆಸುಪಾಸಿನ ಗ್ರಾಮಗಳಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದರು.

### ತಕ್ಷಣವೇ ಪಾವತಿಸಲು ವಿದ್ಯುತ್ ಸರಬರಾಜು ಕಂಪನಿಗಳಿಗೆ ಸಚಿವ ಎಂ.ಬಿ.ಪಾಟೀಲ್ ಸೂಚನೆ

## ಎನ್‌ಜಿಇಎಫ್‌ಗೆ ಎಸ್ಕಾಂಗಳಿಂದ 8 ಕೋಟಿ ರೂ.ಬಾಕಿ

**ಬೆಂಗಳೂರು:** ಹುಬ್ಬಳ್ಳಿಯಲ್ಲಿರುವ ಸರಕಾರಿ ಸ್ವಾಮ್ಯದ ಎನ್‌ಜಿಇಎಫ್ ಕಾರ್ಖಾನೆಯಿಂದ ರಾಜ್ಯದ ವಿದ್ಯುತ್ ನಿಗಮಗಳು ಟ್ರಾನ್ಸ ಫಾರ್ಮರ್‌ಗಳನ್ನು ಖರೀದಿಸಿವೆ. ಈ ಬಾಬ್ತಿನಲ್ಲಿ 8ಕೋಟಿ ರೂ.ಬಾಕಿಯಾಗಿ ಉಳಿದುಕೊಂಡಿದ್ದು ತೊಂದರೆಯಾಗಿದೆ. ವಿದ್ಯುತ್ ಸರಬರಾಜು ಕಂಪೆನಿಗಳು ಈ ಹಣವನ್ನು ಶೀಘ್ರವೇ ಪಾವತಿಸಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸೂಚಿಸಿದ್ದಾರೆ.

ಶನಿವಾರ ಇಲ್ಲಿನ ಖನಿಜ ಭವನದಲ್ಲಿ ನಡೆದ ಎನ್‌ಜಿಇಎಫ್ ಕಾರ್ಖಾನೆಯ ಆಡಳಿತ ಮಂಡಳಿ ಸಭೆಯಲ್ಲಿ ಮಾತನಾಡಿದ ಅವರು, ವಿದ್ಯುತ್ ವಿತರಣಾ ಕಂಪೆನಿಗಳ ವ್ಯವಸ್ಥಾಪಕ ನಿರ್ದೇಶಕರು ಈ ಸಭೆಗೆ ವರ್ಚುಯಲ್ ರೂಪದಲ್ಲಿ ಭಾಗವಹಿಸಿದ್ದರು. ಹುಬ್ಬಳ್ಳಿ ಎನ್‌ಜಿಇಎಫ್‌ಗೆ ಬೆಸ್ಕಾಂ, ಹೆಸ್ಕಾಂ, ಮೆಸ್ಕಾಂ, ಜೆಸ್ಕಾಂ ಮುಂತಾದ ವಿದ್ಯುತ್ ನಿಗಮಗಳು ತಲಾ 2ಕೋಟಿ ರೂ.ಆಸುಪಾಸಿನಲ್ಲಿ ಹಣವನ್ನು ಬಾಕಿ ಉಳಿಸಿಕೊಂಡಿವೆ. ಸರಕಾರವು ಎನ್‌ಜಿಇಎಫ್ ಪುನಶ್ಚೇತನಕ್ಕೆ ತೀರ್ಮಾನಿಸಿದೆ. ಆದರೆ, ಬಾಕಿ ವಸೂಲಾತಿಯೇ ಸಮಸ್ಯೆಯಾಗಿ ಪರಿಣಮಿಸಿದೆ ಎಂದು ವಿವರಿಸಿದರು.



ಎನ್‌ಜಿಇಎಫ್ ಅತ್ಯುತ್ಕೃಷ್ಟ ಗುಣಮಟ್ಟದ ವಿದ್ಯುತ್ ಪರಿವರ್ತಕಗಳ ತಯಾರಿಕೆಗೆ ಹೆಸರುವಾಸಿಯಾಗಿದೆ. ನೂತನ ಸಂಸತ್ ಭವನದಲ್ಲಿ ಇಲ್ಲಿಯ ಪರಿವರ್ತಕಗಳೇ ಇವೆ. ರೈಲ್ವೆ ಇಲಾಖೆ ಇಲ್ಲಿಂದಲೇ ವಿದ್ಯುತ್ ಪರಿವರ್ತಕಗಳನ್ನು ಖರೀದಿಸುತ್ತದೆ. ಆಫ್ರಿಕಾ ಖಂಡದ ಉಗಾಂಡಾ ಸೇರಿದಂತೆ ಹಲವು ದೇಶಗಳಿಗೆ ಎನ್‌ಜಿಇಎಫ್ ಪರಿವರ್ತಕಗಳನ್ನು ರಫ್ತು ಮಾಡುತ್ತಿದೆ ಎಂದು ಅವರು ಹೇಳಿದರು.

ವಿಜಯಪುರ ಕೈಗಾರಿಕಾ ಪ್ರದೇಶಕ್ಕೆ ನೀರು ಪೂರೈಸುವ ಕಾಮಗಾರಿ ಶೇ 95ರಷ್ಟು ಮತ್ತು ಧಾರವಾಡ ಕೈಗಾರಿಕಾ ಪ್ರದೇಶದಲ್ಲಿ ಶೇ 80ರಷ್ಟು ಮುಗಿದಿದೆ. ಕೈಗಾರಿಕಾ ಪ್ರದೇಶಗಳಲ್ಲಿ ಎಸ್‌ಸಿ/ಎಸ್‌ಟಿ ಉದ್ಯಮಿಗಳಿಗೆ ಶೇ.75ರಷ್ಟು ಸಬ್ಸಿಡಿ ದರದಲ್ಲಿ ನಿವೇಶನ ನೀಡಲಾಗುತ್ತದೆ. ಈ ಸಂಬಂಧ 938ಕೋಟಿ ರೂ.ಇಲಾಖೆಗೆ ಬರಬೇಕಾಗಿದೆ. ಇದನ್ನು ಆದಷ್ಟು ಬೇಗ ಬಿಡುಗಡೆ ಮಾಡುವ ಸಂಬಂಧ ಹಣಕಾಸು ಇಲಾಖೆ ಜತೆ ಚರ್ಚಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಕೈಗಾರಿಕಾ ಪ್ರದೇಶಗಳಲ್ಲಿ ನಿವೇಶನ ಪಡೆದುಕೊಂಡವರು ಕಟ್ಟಡದ ಸುತ್ತ ಸುರಕ್ಷತಾ ದೃಷ್ಟಿಯಿಂದ 6-7 ಮೀಟರ್ ಜಾಗ ಬಿಡಬೇಕು ಎಂಬ ನಿಯಮವನ್ನು ಸಡಿಲಿಸುವ ಚಿಂತನೆ ಇದೆ. ಏಕೆಂದರೆ, ಇಷ್ಟು ಜಾಗ ಬಿಟ್ಟರೆ ಉದ್ಯಮಿಗಳಿಗೆ ತುಂಬಾ ನಷ್ಟವಾಗುತ್ತದೆ. ಈ ದೃಷ್ಟಿಯಿಂದ ಬೇರೆಬೇರೆ ರಾಜ್ಯಗಳು ಮತ್ತು ವಿದೇಶಗಳಲ್ಲಿ ಇರುವ ನೀತಿ ನಿಯಮಗಳನ್ನು ನೋಡಿ, ತೀರ್ಮಾನಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ವಿಜಯಪುರ ಜಿಲ್ಲೆಗೆ ಸಂಬಂಧಿಸಿದ ಹಲವು ಕೈಗಾರಿಕಾ ಯೋಜನೆಗಳು ಮತ್ತು ಕ್ವಿನ್ ಸಿಟಿ ಪ್ರಗತಿ ಕುರಿತೂ ಪರಾಮರ್ಶಿಸಲಾಯಿತು. ಸಭೆಯಲ್ಲಿ ಕೈಗಾರಿಕಾ ಇಲಾಖೆಯ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತೆ ಗುಂಜನ್ ಕೃಷ್ಣ, ಕೆಐಎಡಿಬಿ ಸಿಇಒ ಡಾ.ಮಹೇಶ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ನ.15ರಿಂದ ಹೊಸ ಟೋಲ್ ನಿಯಮ

### ಫಾಸ್ಟ್‌ಟ್ಯಾಗ್ ಇಲ್ಲದವರಿಗೆ ಕೇಂದ್ರದಿಂದ ಗುಡ್ ನ್ಯೂಸ್

**ನವದೆಹಲಿ:** ಕೇಂದ್ರ ಸರ್ಕಾರ ಫಾಸ್ಟ್‌ಟ್ಯಾಗ್ ಇಲ್ಲದವರಿಗೆ ಗುಡ್ ನ್ಯೂಸ್ ನೀಡಿದ್ದು, ನವೆಂಬರ್ 15 ರಿಂದ, ಫಾಸ್ಟ್‌ಟ್ಯಾಗ್ ಇಲ್ಲದ ವಾಹನಗಳ ಮಾಲೀಕರು ದುಪ್ಪಟ್ಟು ಹಣ ಪಾವತಿಸಬೇಕಾಗಿಲ್ಲ.

ಕೇಂದ್ರ ಸರ್ಕಾರ ಫಾಸ್ಟ್‌ಟ್ಯಾಗ್ ಇಲ್ಲದವರು ದುಪ್ಪಟ್ಟು ಹಣ ಪಾವತಿಸಬೇಕು ಎಂಬ ನಿಯಮವನ್ನು ಸಡಿಲಿಸಿದ್ದು, ನಗದು ರೂಪದಲ್ಲಿ ಪಾವತಿ ಆಯ್ಕೆ ಮಾಡಿಕೊಂಡರೆ ಟೋಲ್ ಶುಲ್ಕವನ್ನು ದುಪ್ಪಟ್ಟು ಪಾವತಿಸಬೇಕಾಗುತ್ತದೆ. ಆದರೆ ಗಕಖ ಮೂಲಕ ಪಾವತಿ ಮಾಡಿದರೆ ಶುಲ್ಕದ 1.25 ಪಟ್ಟು ಟೋಲ್ ಪಾವತಿಸಬೇಕಾಗುತ್ತದೆ.

ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ರಾಷ್ಟ್ರೀಯ ಹೆದ್ದಾರಿ ಶುಲ್ಕ(ದರಗಳು ಮತ್ತು ಸಂಗ್ರಹದ ನಿರ್ಣಯ) ನಿಯಮಗಳು, 2008 ಅನ್ನು ತಿದ್ದುಪಡಿ ಮಾಡಿದ್ದು, ಈಂಖಖಿಚಿರ ಇಲ್ಲದ ಬಳಕೆದಾರರಿಗೆ ಅವರ ಪಾವತಿ ವಿಧಾನವನ್ನು ಆಧರಿಸಿ ವಿಭಿನ್ನ ಶುಲ್ಕ ಪರಿಚಯಿಸಿದೆ. ಈ ಕ್ರಮವು ಡಿಜಿಟಲ್ ವಹಿವಾಟುಗಳನ್ನು ಉತ್ತೇಜಿಸುವ ಮತ್ತು ಟೋಲ್ ಪ್ಲಾಜಾಗಳಲ್ಲಿ ನಗದು ಬಳಕೆಯನ್ನು ಕಡಿಮೆ ಮಾಡುವ ಗುರಿ ಹೊಂದಿದೆ.

ಹೊಸ ನಿಯಮದ ಪ್ರಕಾರ, ಫಾಸ್ಟ್‌ಟ್ಯಾಗ್ ಇಲ್ಲದ ಅಥವಾ ದೋಷಯುಕ್ತ ಫಾಸ್ಟ್‌ಟ್ಯಾಗ್ ಹೊಂದಿರುವ ವಾಹನಗಳು ಈಗ UPI ಬಳಸಿ ಪಾವತಿಸಿದರೆ ಟೋಲ್ ಪ್ಲಾಜಾಗಳಲ್ಲಿ ದುಪ್ಪಟ್ಟು ಬದಲು 1.25 ಪಟ್ಟು ಟೋಲ್ ಪಾವತಿಸಬೇಕಾಗುತ್ತದೆ.




# ಮಹಾತ್ಮ ಗಾಂಧೀಜಿ ಜಯಂತ್ಯೋತ್ಸವ

**ಬಸವನಬಾಗೇವಾಡಿ:** ಪಟ್ಟಣದ ಪೊಲೀಸ್ ಠಾಣೆಯ ಆವರಣದಲ್ಲಿ ಮಹಾತ್ಮ ಗಾಂಧಿ ಹಾಗೂ ಲಾಲ ಬಹಾದ್ದೂರ್ ಶಾಸ್ತ್ರೀ ಅವರ ಜಯಂತಿಯಂಗವಾಗಿ ಗುರುವಾರ ಬಸವನಬಾಗೇವಾಡಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಪೊಲೀಸ್ ಠಾಣೆ ಆವರಣದಲ್ಲಿರುವ ಮಹಾತ್ಮ ಗಾಂಧೀಜಿಯವರ ಮೂರ್ತಿಗೆ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಸುರೇಶ ಹಾರಿವಾಳ ಅವರು ಮಾಲಾರ್ಪಣೆ ಮಾಡಿ, ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರವಿ ರಾಠೋಡ, ನಗರ ಘಟಕ ಅಧ್ಯಕ್ಷ ಸುರೇಶಗೌಡ ಪಾಟೀಲ, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಮುಖಂಡರಾದ ಎಂ.ಜಿ.ಆದಿಗೊಂಡ, ಸಂಕನಗೌಡ ಪಾಟೀಲ, ಮುತ್ತು ಗುಂಡಳ್ಳಿ, ಸಂಗಮೇಶ ಓಲೇಕಾರ, ಅಜೀಜ್ ಬಾಗವಾನ, ಪರಶುರಾಮ ಜಮಖಂಡಿ ಇತರರಿದ್ದರು.

# ಗಾಂಧೀಜಿ-ಶಾಸ್ತ್ರಿ ಜಯಂತಿ ಆಚರಣೆ



**ತಾಳಿಕೋಟೆ:** ಪಟ್ಟಣದ ಶ್ರೀ ಎಸ್ ಎಸ್ ವಿದ್ಯಾ ಸಂಸ್ಥೆಯಲ್ಲಿ ಗುರುವಾರರಂದು ಮಹಾತ್ಮ ಗಾಂಧಿಜಿ ಹಾಗೂ ಲಾಲ ಬಹಾದ್ದೂರ ಶಾಸ್ತ್ರಿಜಿಯವರ ದಿನಾಚರಣೆ ಆಚರಿಸಲಾಯಿತು.

ಮಹಾತ್ಮರ ಭಾವಚಿತ್ರಕ್ಕೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಎಚ್.ಎಸ್.ಪಾಟೀಲ ಅವರು ಪೂಜೆ ಸಲ್ಲಿಸಿದರು. ಆಡಳಿತಾಧಿಕಾರಿಗಳಾದ ಕಿರಣ.ಎಚ್.ಪಾಟೀಲ, ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಅಶೋಕ ಕಟ್ಟಿ, ಬಿಪಿಎಡ್ ಕಾಲೇಜಿನ ಪ್ರಾಚಾರ್ಯ ಶಿವಕುಮಾರ ನಾಯಕ, ಪದವಿ ಕಾಲೇಜಿನ ಸುರೇಶ ಪಾಟೀಲ, ಸಿಬ್ಬಂದಿಗಳಾದ ಎಸ್.ವಿ.ಜಾಮಗೊಂಡಿ, ಬಿ.ಐ.ಹಿರೇಹೊಳಿ, ಎಸ್.ಸಿ.ಗುಡಗುಂಟಿ, ಎಚ್.ಬಿ.ಪಾಟೀಲ, ಎಮ್.ಎಸ್.ರಾಯಗೊಂಡ, ಯು.ಎಚ್.ಗಟನೂರ, ಎಸ್.ಬಿ.ಸಾಸನೂರ. ಬಿ.ಪಿ ಕೊಣ್ಣೂರ. ಕೆ.ಎನ್.ನಾಲತವಾಡ. ಉಪಸ್ಥಿತರಿದ್ದರು.

### ಶ್ರೀದೇವಿ ಪುರಾಣ-ಪ್ರವಚನ ಕಾರ್ಯಕ್ರಮ

# ಮಾನವರಲ್ಲಿ ರಾಕ್ಷಸ ಗುಣಗಳಿವೆ




**ಜಮಖಂಡಿ:** ಇಂದಿನ ಪ್ರಪಂಚದಲ್ಲಿ ಮಹಿಷಾಸುರಂತಹ ರಾಕ್ಷಸರಿಲ್ಲ ಆದರೆ ಮಾನವರಲ್ಲಿ ರಾಕ್ಷಸ ಗುಣಗಳಿವೆ ಎಂದ ಮಾಜಿ ಶಾಸಕ ಆನಂದ ನ್ಯಾಮಗೌಡ ಹೇಳಿದರು.

ನಗರದ ಮುತ್ತಿನಕಂತಿ ಹಿರೇಮಠದಲ್ಲಿ ಶ್ರೀ ಮಹಾಲಕ್ಷ್ಮೀ ಮಹಿಳಾ ಮಂಡಳ ಸಹಯೋಗದಲ್ಲಿ ಶ್ರೀದೇವಿ ಪುರಾಣ ಮತ್ತು ಪ್ರವಚನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯುವಕರಲ್ಲಿ ಧೂಮಪಾನ, ಮದ್ಯಪಾನ, ಗುಟಕಾ ಸೇವನೆಯಂತಹ ದುಶ್ಚಟಗಳ ರಾಕ್ಷಸಗಳಿವೆ. ಇದರಿಂದ ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಆದ್ದರಿಂದ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಆಧ್ಯಾತ್ಮತೆ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು. ಪೀಳಿಗೆಯಿಂದ ಪೀಳಿಗೆಗೆ ಶ್ರೀದೇವಿಯ ಆರಾಧನೆಯ ವಿಧಾನಗಳು ಬದಲಾಗುತ್ತಿದೆ ಎಂದರು.

ಪ್ರವಚಣ ಕೇಸರಿ ನಾವಲಗಿಯ ಶ್ರೀಶೈಲ ಶ್ರೀಗಳು ಮಾತನಾಡಿ, ಶ್ರೀದೇವಿ ಪುರಾಣದಲ್ಲಿ ಕುಲ,ಧನ, ವಿದ್ಯೆ, ರೂಪ, ಜನ, ಅಧಿಕಾರ, ಬಲ, ಯವ್ವನ ಎಂಬ ಮಧಗಳಿಂದ ಆವರಿಸಿಕೊಂಡಿದ್ದ ಅಹಂಕಾರಿ ದೈತ್ಯ ಮಹಿಷಾಸುರನ ವಧೆ ಬಗ್ಗೆ ವಿವರಿಸಿದರು. ಜ್ಞಾನದ ಉಗಮವಾದರೆ ಅಹಂಕಾರ ತೊರೆಯುತ್ತದೆ ಎಂದರು.

ಮುತ್ತಿನಕಂತಿ ಹಿರೇಮಠದ ಪಂಡಿತಾರಾಧ್ಯ ಶಿವಲಿಂಗ ಪಂಡಿತಾರಾಧ್ಯ ಶಿವಾಚಾರ್ಯರು ಆರ್ಶಿವಚನ ನೀಡಿದರು. ವೇದಿಕೆಯಲ್ಲಿ ನ್ಯಾಯವಾದಿ ರವಿ ಯಡಹಳ್ಳಿ, ಈರಣ್ಣ ಬಂಡಿಗೇಣಿ, ಡಾ.ಪ್ರಭಯ ಗುರುಮಠ, ಡಾ. ವಿಜಯ ಮೈತ್ರಿ, ಎಸ್.ವೈ.ಪಾಟೀಲ, ಮಲ್ಲು ಇಂಗಳಗಾವಿ, ಶಾಮ ಘಾಟಗೆ ವಿಜಯಲಕ್ಷ್ಮೀ ದುದಗಿ, ಮಹಾದೇವ ಪಾಟೀಲ ಸಹಿತ ಹಲವರು ಇದ್ದರು. ಶಾಲಾಮಕ್ಕಳಾದ ಸಿಂಧು ನ್ಯಾಮಗೌಡ, ನಂದಿತಾ ಭಜಂತ್ರಿ ಭರತನಾಟ್ಯ ಪ್ರದರ್ಶಿಸಿ ಗಮನ ಸೆಳೆದರು.

### ಇದು ಬೈಲವಾಡ ಕ್ರಾಸ್-ನೇಸರಗಿ ರಸ್ತೆಯ ಕಥೆಯ ಅಳಲು

# ತಗ್ಗು ಬಿದ್ದರೂ ತಿದ್ದದ ಲೋಕೋಪಯೋಗಿ ಅಧಿಕಾರಿ

**ವರದಿ: ಮಹಾಂತೇಶ ರಾಜಗೋಳಿ**

**ಬೈಲಹೊಂಗಲ:** ಒಂದು ಕಡೆ ನಮ್ಮನಾಳುವ ಸರಕಾರಗಳು ಜನತೆಗೆ ಉಚಿತ ಗ್ಯಾರಂಟಿ ಯೋಜನೆಗಳೇ ನೀಡಿದ್ದೇ ದೊಡ್ಡ ಸಾಧನೆ ಎಂದೇ ಬಿಂಬಿಸಿಕೊಳ್ಳುತ್ತಿದ್ದು ಇತ್ತ ನೋಡಿದರೆ ರಾಜ್ಯ ಹೆದ್ದಾರಿ, ರಸ್ತೆಗಳು ಸಂಪೂರ್ಣವಾಗಿ ಹಾಳಾಗಿ ಹೋಗಿ ನಿತ್ಯ ಸಂಚಾರ ಮಾಡುತ್ತಿರುವ ಪ್ರಯಾಣಿಕರ, ಚಾಲಕರ ಗೋಳು ಕೇಳುವವರು ಯಾರು ಎನ್ನುವಂತಾಗಿದೆ ಎಂದು ನಾಗರಿಕರು ಅಪಾದನೆ ಮಾಡುತ್ತಿದ್ದಾರೆ.

ಬೈಲಹೊಂಗಲ ತಾಲೂಕಿನ ಬೈಲವಾಡ ಕ್ರಾಸ್‌ದಿಂದ ಬೈಲವಾಡ ಹೈಸ್ಕೂಲ್‌ವರೆಗಿನ ಜತ್ತ ಜಾಂಬೋಟಿ ರಾಜ್ಯ ಹೆದ್ದಾರಿ ತೀರಾ ಹದಗೆಟ್ಟಿದ್ದು ಕಳಪೆ ಕಾಮಗಾರಿ, ಅಧಿಕಾರಿಗಳ ತೀವ್ರ ನಿರ್ಲಕ್ಷ್ಯದಿಂದ ಪ್ರಯಾಣಿಕರು, ನಾಗರಿಕರು ಕೈಯಲ್ಲಿ ಜೀವ ಹಿಡಿದು ಸಾಗಬೇಕಾದ ಅನಿವಾರ್ಯತೆ ಈ ಮಾರ್ಗದಲ್ಲಿ ಎದುರಾಗಿದೆ. ರಸ್ತೆಯಲ್ಲಿ ತಗ್ಗುಗಳು ಇದಿಯೋ ಇಲ್ಲವೇ ತಗ್ಗು-ಗುಂಡಿಗಳಲ್ಲಿ ರಸ್ತೆ ಇದೆಯೋ ಎಂಬುದು ಗೋತ್ತಾಗುತ್ತಿಲ್ಲ. ಸುಮಾರು 2 ಕೀ.ಮೀ ಅಂತರದ ಬೈಲಹೊಂಗಲ ಮತಕ್ಷೇತ್ರಕ್ಕೆ ಒಳಪಡುವ ಈ ಮಾರ್ಗದಲ್ಲಿ ಹಳ್ಳದ ಸೇತುವೆ ಇದ್ದು ತೀರಾ ಶೀಥಿಲಗೊಂಡಿದ್ದು ಯಾವದೇ ಸಂದರ್ಭದಲ್ಲಿ ಅನಾಹುತಗಳಾಗುವ ಸಂಭವವಿದೆ.

ಹಳ್ಳದ ಸೇತುವೆ ಮೇಲೆ ಬೃಹದಾಕಾರದ ಗುಂಡಿ ಬಿದ್ದಿದ್ದರೂ ಸಹ ಅಧಿಕಾರಿಗಳ ಕಣ್ಣಿಗೆ ರಸ್ತೆಯ ಅನಾವಸ್ಥೆ ಕಾಣುತ್ತಿಲ್ಲ. ಸಂಚಾರದ ಸಮಯದಲ್ಲಿ ದಿನನಿತ್ಯ ನಾಗರಿಕರು ಹಲವಾರು ಸಮಸ್ಯೆಗಳಿನ್ನು ಎದುರಿಸುತ್ತಿದ್ದು ಕೆಲವೊಂದು ಬಾರಿ ವಾಹನ ಸವಾರರು ನೇಸರಗಿ ಕಡೆಗೆ ಹೋಗಬೇಕಾದರೆ ಮಾರ್ಗ ಬದಲಾವಣೆ ಮಾಡಿ ಊರುಗಳನ್ನು ಮುಟ್ಟುತ್ತಿದ್ದಾರೆ.

ಕೆಲವು ದಿನಗಳ ಹಿಂದೆ ಸುರಿದ ಬಾರಿ ಮಳೆಗೆ ಈ ಮಾರ್ಗದ ಸೇತುವೆ ಮೇಲೆ ಬಾರೀ ಪ್ರಮಾಣದ ಪ್ರವಾಹ ಬಂದು ಮಾರ್ಗವೇ ಬಂದಾಗುವ ಅಸ್ಥಿತಿ ಎದುರಾಗಿತ್ತು. ನೇಸರಗಿ, ದೇಶನೂರ, ಗೋಕಾಕ, ಪಾಶ್ಚಾಪೂರ, ಹುಕ್ಕೇರಿ, ಅಂಕಲಗಿ, ಖನಗಾಂವ, ವನ್ನೂರು, ಕರಡಿಗುದ್ದಿ ಮುಂತಾದ ಊರುಗಳಿಗೆ ತೆರಳಲು ಈ ಮಾರ್ಗವೇ ಅತ್ಯವಶ್ಯವಾಗಿದೆ. ಹೊಂಡಗಳಲ್ಲಿ ನೀರು ನಿಂತಿದ್ದರಿಂದ ಜನರು ಸಂಕಷ್ಟಕ್ಕೆ ಈಡಾಗುತಿದ್ದು ಈ ಕುರಿತು ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದರೂ ಯಾವದೇ ಪ್ರಯೋಜನ ಆಗಿಲ್ಲ ಎಂದು ನಾಗರಿಕರು ಕಿಡಿ ಕಾರುತ್ತಿದ್ದು ಕೇವಲ ಸಂಬಳಕ್ಕೆ ಸೇವೆ ಮಾಡುತ್ತಿದ್ದಾರೆಂದು ಆರೋಪಿಸುತಿದ್ದಾರೆ. ಈಗಾಗಿ ಕೂಡಲೇ ರಸ್ತೆ ರಿಪೇರಿ ಮಾಡಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ನಾಗರಿಕರು ಒತ್ತಾಯಿಸಿದ್ದಾರೆ.



ಬೈಲವಾಡ ಹೊರ ವಲಯದಿಂದ ನೇಸರಗಿ ಗ್ರಾಮದವರೆಗೆ ಚನ್ನಮ್ಮನ ಕಿತ್ತೂರು ವ್ಯಾಪ್ತಿಯ ರಸ್ತೆ ಕಾಮಗಾರಿ ಈಗಾಗಲೆ ಪ್ರಾರಂಭವಾಗಿದೆ. ಈ ಮಾರ್ಗವು ಎರಡು ಮತ ಕ್ಷೇತ್ರಗಳಿಗೆ ಒಳಪಡುವ ಕಾರಣ ಮುಂಬರುವ ದಿನಗಳಲ್ಲಿ ಬೈಲಹೊಂಗಲ ಕ್ಷೇತ್ರದ ವ್ಯಾಪ್ತಿಯ ಹದಗೆಟ್ಟ ರಸ್ತೆಯ ಕುರಿತು ಜನಪ್ರತಿನಿಧಿಗಳ ಗಮನಕ್ಕೆ ತಂದು ಸರಕಾರಕ್ಕೆ ಪ್ರಸ್ತಾವಣೆ ಸಲ್ಲಿಸಿದ್ದು ಅನುದಾನ ಬಂದ ನಂತರ ಸುಧಾರಣೆಗೆ ಕ್ರಮ ಕೈಗೊಳ್ಳಲಾಗುವದು.

**ಅನಿಲ ಎಂ.**
**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರು**
**ಲೋಕೋಪಯೋಗಿ ಇಲಾಖೆ ಉಪವಿಭಾಗ**
**ಬೈಲಹೊಂಗಲ**

ಮಳೆಗಾಲ ಬಂತೆದ್ದರೆ ಈ ಮಾರ್ಗದ ಸಮಸ್ಯೆಗಳು ವೀಪರೀತ ಆಗಲಿದ್ದು ರಾಜ್ಯ ಹೆದ್ದಾರಿಯ ಈ ಮಾರ್ಗದ ಹಳ್ಳದ ಸೇತುವೆ ಚಿಕ್ಕದಾಗಿದ್ದರಿಂದ ಬಾರೀ ವಾಹನಗಳ ಸಂಚಾರವು ಸಹ ಈ ಮಾರ್ಗದಲ್ಲಿದ್ದು ತಡೆಗೋಡೆ ಇಲ್ಲದ ಕಾರಣ ಅನಾಹುತ ಕಟ್ಟಿಟ್ಟ ಬುತ್ತಿ. ಆದರೆ ಜನಪ್ರತಿನಿಧಿಗಳ, ಅಧಿಕಾರಿಗಳ ನಿರ್ಲಕ್ಷ್ಯದಿಂದ ನಾಗರಿಕರು, ದ್ವಿಚಕ್ರ ವಾಹನ ಸವಾರರು ನರಕ ಯಾತನೆ ಅನುಭವಿಸುವಚಿತಾಗಿದೆ. ಸರಕಾರಕ್ಕೆ ಜನರು ಕಟ್ಟಿದ ತೆರಿಗೆ ಏನಾಗುತ್ತಿದೆ ಎಂಬುದು ಗೊತ್ತಾಗುತ್ತಿಲ್ಲ.

**ಶಿವನಗೌಡಾ ಪಾಟೀಲ**
**ಸಮಾಜ ಸೇವಕ, ಬೈಲವಾಡ**

# ಇಂದು ಆರ್‌ಎಸ್‌ಎಸ್ ಪಥಸಂಚಲನ

**ತೇರದಾಳ:** ಇಲ್ಲಿನ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಆಶ್ರಯದಲ್ಲಿ ಸಂಘದ ವಾರ್ಷಿಕೋತ್ಸವ ನಿಮಿತ್ತ ಭಾನುವಾರ ಅ.5ರಂದು ಪಟ್ಟಣದಲ್ಲಿ ಪಥಸಂಚಲನ ಹಮ್ಮಿಕೊಳ್ಳಲಾಗಿದೆ. ಮದ್ಯಾಹ್ನ 3.45ಕ್ಕೆ ಪ್ರಭುಲಿಂಗ ಪಪೂ ಕಾಲೇಜಿನಿಂದ ಪ್ರಾರಂಭಗೊಳ್ಳುವ ಸಂಚಲನ ಪಟ್ಟಣದ ಪ್ರಮುಖ ಬೀದಿಗಳಲ್ಲಿ 45 ನಿಮಿಷಗಳ ಕಾಲ ನಡೆಯುವುದು.

ಬಳಿಕ ಸ್ವಾಮಿ ವಿವೇಕಾನಂದ ಸಿಬಿಎಸ್‌ಇ ಶಾಲೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಕೇಂದ್ರದ ಕೃಷ್ಣಮೂರ್ತಿ ಬೌದ್ಧಿಕ ನೀಡುವರು. ತೇರದಾಳ ಸೇರಿದಂತೆ ಸುತ್ತಮುತ್ತ ಹಳ್ಳಿಗಳಿಂದ ಸುಮಾರು 800 ಗಣವೇಷಧಾರಿಗಳು ಸಂಚಲನದಲ್ಲಿ ಪಾಲ್ಗೊಳ್ಳಲಿದ್ದಾರೆ.

# ಮಹನೀಯರ ತತ್ವಾದರ್ಶಗಳು ನಮಗೆ ಪ್ರೇರಣೆ: ಜಿಲ್ಲಾಧಿಕಾರಿ

**ವಿಜಯಪುರ:** ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ತಮ್ಮ ಜೀವನದ ತತ್ವಗಳಂತೆ ನಡೆದು ಈ ದೇಶಕ್ಕೆ ಮಾದರಿಯಾಗಿದ್ದಾರೆ. ಅವರು ಈ ದೇಶಕ್ಕೆ ತಮ್ಮ ಸಂದೇಶದ ಮೂಲಕ ಅಮೂಲ್ಯವಾದ ಕೊಡುಗೆ ನೀಡಿದ್ದಾರೆ. ದೇಶದ ಈ ಮಹಾನ್ ವ್ಯಕ್ತಿಗಳ ತ್ಯಾಗ, ನಿಷ್ಠೆ, ಪ್ರಾಮಾಣಿಕತೆ, ಸತ್ಯ, ಅಹಿಂಸಾ, ಸರಳತೆಯ ತತ್ವಾದರ್ಶಗಳು ಹಾಗೂ ಅವರ ಜೀವನದ ಸಂದೇಶ ಮೌಲ್ಯಗಳು ನಮಗೆ ಪ್ರೇರಣೆಯಾಗಿವೆ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಗುರುವಾರ ನಗರದ ಜಿಲ್ಲಾ ಪಂಚಾಯತ್ ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಆಯೋಜಿಸಲಾದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಜಯಂತಿ ಕಾರ್ಯಕ್ರಮದಲ್ಲಿ ಚರಕ ನೇಯುವ ಮೂಲಕ ವಿಶಿಷ್ಠವಾಗಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಮಹನೀಯರ ಕುರಿತು ಇಂದಿನ ಯುವಕರು ಅಧ್ಯಯನ ಮಾಡುವ ಮೂಲಕ ಅವರ ಚಿಂತನೆಗಳನ್ನು ಹಾಗೂ ಅವರ ಬದುಕನ್ನು ಅರಿಯಬೇಕಾಗಿದೆ. ಎಂದೆಂದಿಗೂ ಅವರ ಕಾರ್ಯ ಸಾಧನೆಯ ಮೇರು ಆದರ್ಶ ವ್ಯಕ್ತಿತ್ವ, ಅವರ ಚಿಂತನೆ, ನಂಬಿದ್ದ ತತ್ವಾದರ್ಶಗಳು ದೇಶದ ನಾಗರಿಕರಿಗೆ ಅಚ್ಚಳಿಯದೇ ನೆನಪಿನಲ್ಲುಳಿದಿವೆ. ಗಾಂಧೀಜಿಯವರ ಸತ್ಯ, ಅಹಿಂಸೆ ಮೂಲಕ ಕೈಗೊಂಡ ಸತ್ಯಾಗ್ರಹ ಬಲಿಷ್ಠ ಮಾನವ ಸಂಪನ್ಮೂಲ ಹೊಂದಿದ್ದ ಬ್ರಿಟೀಷ ತಲೆಬಾಗಿತ್ತು. ದೇಶದ ಸ್ವಾತಂತ್ರ್ಯಕ್ಕಾಗಿ ಗಾಂಧೀಜಿಯವರು ಚಿಂತನೆಗಳ ಜೊತೆಗೆ ಸತ್ಯಾಗ್ರಹ ನಡೆಸಿದ್ದರು. ಸತ್ಯಾಗ್ರಹದ ಮೂಲಕ ಸ್ವದೇಶಿ ತತ್ವ ನೀಡಿದ್ದಾರೆ. ಸ್ವಾತಂತ್ರ್ಯ ಹೋರಾಟದಲ್ಲಿ ತತ್ವಗಳಿಂದ ಜನರಿಗೆ ತಿಳಿಯುವ ಹಾಗೂ ಜನರಿಗೆ ಮನಮುಟ್ಟುವ ವಿಚಾರಗಳನ್ನು ತಿಳಿಸುತ್ತಿದ್ದರು. ಅಸಹಕಾರ ಚಳುವಳಿ, ಸ್ವದೇಶಿ ಬಟ್ಟೆ, ಖಾದಿ ಬಟ್ಟೆ ದೇಶೀಯ ವಸ್ತುಗಳ ಮಹತ್ವವನ್ನು ಅವರು ಸಾರಿದರು ಎಂದು ಅವರು ಹೇಳಿದರು.

ಉಪನ್ಯಾಸ ನೀಡಿದ ಸಂಗಮೇಶ ಮೇತ್ರಿ ಅವರು ಮಾತನಾಡಿ, ಗಾಂಧಿಜಿಯವರ ಚಿಂತನೆಗಳನ್ನು ಅಳವಡಿಸಿಕೊಂಡರೆ ತಂಪೆರೆಯಬಹುದು. ಗಾಂಧಿಜಿಯವರ ಬದುಕನ್ನು ಅವರ ಚಿಂತನಗಳ ಓದಿನ ಅಗತ್ಯವಿದೆ.ಔದ್ಯೋಗಿಕರಣದಲ್ಲಿ ಗಾಂಧೀಜಿ ಚಿಂತನೆ ಬಹು ಪ್ರಸ್ತುತವಾಗಿವೆ. ಯುವಜನರು ದಾರ್ಶನಿಕರ ವಿಚಾರಗಳನ್ನು ತಿಳಿದುಕೊಳ್ಳಬೇಕು. ಗಾಂಧೀಜಿಯವರ ಸತ್ಯ ಮತ್ತು ಪ್ರೇಮ ಇವೆರಡು ವಿಚಾರ ಅನುಸರಿಸೋಣ, ಗಾಂಧಿಜಿಯವರು ಸತ್ಯ,ಪ್ರಾಮಾಣಿಕತೆಯನ್ನು ಬಾಲ್ಯದಲ್ಲಿಯೇ ಮೈಗೂಡಿಸಿಕೊಂಡಿದ್ದರು. ಗಾಂಧೀಜಿವರು ಬಹಳ ಸ್ವಾಭಿಮಾನಿಯಾಗಿದ್ದ ಅವರು, ಸ್ವಚ್ಛತೆಯನ್ನು ಬಹು ಅದ್ಯತೆಯನ್ನಾಗಿಸಿದ್ದ ಅವರು, ಸ್ವಚ್ಛತೆ ನಿರ್ಮಲ ಮನಸ್ಸನ್ನು ಕಟ್ಟಿಕೊಡುತ್ತದೆ ಎಂಬುದನ್ನು ಅವರು ನಂಬಿದ್ದರು ಸತ್ಯ ಹಾಗೂ ಪ್ರೇಮವನ್ನು ಬೋಧಿಸಿದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರ ನಾಯಕರ ವೇಷ ತೊಟ್ಟ ಚಿಕ್ಕ ಮಕ್ಕಳು ಪ್ರೇಕ್ಷಕರ ಕಣ್ಮನ ಸೆಳೆದರು. ರಘುಪತಿ ರಾಘವ ಹಾಗೂ ವೈಷ್ಣವ ಜನತೋ ಎಂಬ ಗಾಂಧಿಜಿಯವರ ಪ್ರಿಯ ಭಜನೆಗಳನ್ನು ವಿರೇಶ ವಾಲಿ ಹಾಗೂ ತಂಡದವರು ಅತ್ಯಂತ ಸುಶ್ರಾವ್ಯವಾಗಿ ಹಾಡಿದರು.

ಕಾರ್ಯಕ್ರಮಕ್ಕೂ ಮೊದಲು, ನಗರದ ಸೈನಿಕ ಶಾಲೆ ಹತ್ತಿರ ಇರುವ ಲಾಲಬಹಾದ್ದೂರ ಶಾಸ್ತ್ರೀಜಿಯವರ ಪುತ್ಥಳಿಗೆ ಹಾಗೂ ನಗರದ ಹೃದಯಭಾಗದ ಗಾಂಧಿವೃತ್ತದ ಗಾಂಧೀ ಪ್ರತಿಮೆಗೆ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.ನಗರದ ಜಲನಗರ ರಸ್ತೆಯಲ್ಲಿರುವ ಬುದ್ಧ ವಿಹಾರದಿಂದ ಗಾಂಧಿ ಭವನದವರೆಗೆ ಸ್ವಚ್ಛತಾ ನಡಿಗೆ ಜಾಥಾ ಮೂಲಕ ಸ್ವಚ್ಛತೆಯ ಮಹತ್ವದ ಕುರಿತು ಸಾರಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ರಾಜಶೇಖರ್ ಡಂಬಳ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬದ್ರುದ್ದಿನ್ ಸೌದಾಗರ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಚಂದ್ರಶೇಖರ್ ಹೊಸಮನಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಬಿ ಕುಂಬಾರ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಹೇಶ ಪೋತದಾರ,ವಿಜಯಪುರ ತಹಶೀಲ್ದಾರ ಪ್ರಶಾಂತ ಚನಗೊಂಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ, ಅಡಿವೆಪ್ಪ ಸಾಲಗಲ್, ವಿದ್ಯಾವತಿ ಅಂಕಲಗಿ, ಪೀಟರ್ ಅಲೆಕ್ಸಾಂಡರ್, ಸುರೇಶ ಘೋಣಸಗಿ, ಬಾಬುಗೌಡ ಪಾಟೀಲ್,ನಿಲೇಶ ಬೇನಾಳ, ನಾಗರಾಜ ಲಂಬೂ, ಭೀಮರಾಯ ಜಿಗಜಿಣಗಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿ, ವಿವಿಧ ಶಾಲಾ ಕಾಲೇಜಿನ ಉಪನ್ಯಾಸಕರು, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




## ಜಮೀನು ಮಂಜೂರು: ಆಕ್ಷೇಪಣೆ ಆಹ್ವಾನ

**ವಿಜಯಪುರ:** ಕೋಲ್ಹಾರ ತಾಲೂಕಿನ ಮಸೂತಿ ಗ್ರಾಮದಲ್ಲಿನ ರಿಸನಂ.447ರ ಪೈಕಿ 4 ಎಕರೆ ಗಾಯರಾಣ ಜಮೀನು ಮಸೂತಿ ಗ್ರಾಮದಲ್ಲಿ 110 ಕೆ.ವಿ. ವಿದ್ಯುತ್ ಉಪ ಕೇಂದ್ರ ಸ್ಥಾಪನೆ ಹಾಗೂ ವಸತಿ ಗೃಹ ನಿರ್ಮಾಣಕ್ಕಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಇಂಜನೀಯರ್ ಅವರಿಗೆ ಮಂಜೂರಿಸಲು ಉದ್ದೇಶಿಸಲಾಗಿದ್ದು, ಈ ಕುರಿತಾದ ಆಕ್ಷೇಪಣೆಗಳಿದ್ದಲ್ಲಿ ಈ ಅಧಿಸೂಚನೆಯ 30 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಜಮೀನು ಮಂಜೂರು: ಆಕ್ಷೇಪಣೆ ಆಹ್ವಾನ

**ವಿಜಯಪುರ:** ಬಸವನ ಬಾಗೇವಾಡಿ ತಾಲ್ಲೂಕಿನ ವಡವಡಗಿ ಗ್ರಾಮದಲ್ಲಿನ ರಿಸನಂ.369ರ 5 ಎಕರೆ ಹುಲ್ಲುಗಾವಲು ಜಮೀನನ್ನು 110 ಕೆ.ವಿ. ವಿದ್ಯುತ್ ಉಪ ಕೇಂದ್ರ ಸ್ಥಾಪನೆ ಹಾಗೂ ವಸತಿ ಗೃಹ ನಿರ್ಮಾಣಕ್ಕಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಇಂಜನೀಯರ ಅವರಿಗೆ ಮಂಜೂರಿಸಲು ಉದ್ದೇಶಿಸಲಾಗಿದ್ದು, ಆಕ್ಷೇಪಣೆಗಳಿದ್ದಲ್ಲಿ, ಈ ಅಧಿಸೂಚನೆಯ 30 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ಮಳೆ ಹಾನಿ ಪ್ರದೇಶಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಿ

**ವಿಜಯಪುರ:** ಪ್ರಸಕ್ತ ವರ್ಷದ ಮುಂಗಾರು ಹಂಗಾಮಿನಲ್ಲಿ ರಾಜ್ಯದಲ್ಲಿಯೇ ಅತೀ ಹೆಚ್ಚು ಮಳೆ ನಮ್ಮ ಜಿಲ್ಲೆಯಲ್ಲಿಯಾಗಿದ್ದು ಮಳೆಯಿಂದ ಹಾನಿಗೀಡಾದ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ತ್ವರಿತವಾಗಿ ಕಲ್ಪಿಸಲು ಕ್ರಮ ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ವಿಡಿಯೋ ಸಂವಾದ ಮೂಲಕ ಜಿಲ್ಲಾಧಿಕಾರಿಗಳೊಂದಿಗೆ ನಡೆಸಿದ ಸಭೆಯ ನಂತರ ಜಿಲ್ಲಾ ವಿಪತ್ತು ನಿರ್ವಹಣಾ ಸಭೆ ನಡೆಸಿದ ಜಿಲ್ಲಾಧಿಕಾರಿ ಡಾ.ಆನಂದ ಕೆ ಅವರು, ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ಮೂಲಭೂತ ಸೌಕರ್ಯಗಳಾದ ರಸ್ತೆ, ಶಾಲಾ ಕಟ್ಟಡ, ಅಂಗನವಾಡಿ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸೇರುದಂತೆ ಹಾನಿಗೀಡಾದ ಪ್ರದೇಶಗಳಿಗೆ ಅಧಿಕಾರಿಗಳು ತೆರಳಿ ಪ್ರಥಮ ಆದ್ಯತೆ ನೀಡಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ವಹಿಸಬೇಕು. ಹಾನಿಗೀಡಾದ ಕಟ್ಟಡಗಳ ಸಮೀಕ್ಷೆ ಕಾರ್ಯ ಕೈಗೊಂಡು ಜಿ.ಪಿ.ಎಸ್ ಫೋಟೊ ಸಮೇತ ವರದಿ ಸಲ್ಲಿಸಬೇಕು. ಚೆಕ್ ಡ್ಯಾಮ್‌ಗಳು, ಸಣ್ಣ ಸಣ್ಣ ಬಾಂದಾರಗಳು, ಕೆರೆ ಕಟ್ಟೆಗಳ ದುರಸ್ತಿಗೆ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನದಿ ತೀರದ ಗ್ರಾಮಗಳಲ್ಲಿ ಪ್ರವಾಹ ಉಂಟಾಗಿ ಸಾರ್ವಜನಿಕರಿಗೆ ತೊಂದರೆಯಾಗಿದ್ದು, ಹಾನಿಗೀಡಾದ ಮೂಲಭೂತ ಸೌಕರ್ಯಗಳನ್ನು ತ್ವರಿತ ಗತಿಯಲ್ಲಿ ಕೈಗೊಳ್ಳಲಾಗುತ್ತಿದೆ ಪ್ರವಾಹದಿಂದ ತೊಂದರೆಗೊಳಗಾದ ಗ್ರಾಮಗಳಲ್ಲಿ ಕಾಳಜಿ ಕೇಂದ್ರಗಳನ್ನು ತೆರೆಯಲಾಗಿದೆ. ಜಿಲ್ಲೆಯಲ್ಲಿ ಅಂದಾಜು 2ಲಕ್ಷದ 45 ಸಾವಿರ ಹೆಕ್ಟೆರೆಯಷ್ಟು ಬೆಳಹಾನಿದೆ ಅಂದಾಜಿಸಲಾಗಿದೆ. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಮೀಕ್ಷೆ ಕೈಗೊಂಡು ನಿಖರವಾದ ಬೆಳೆ ಹಾನಿಯ ಮಾಹಿತಿ ನೀಡುವಂತೆ ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ, ಅಪರ ಜಿಲ್ಲಾಧಿಕಾರಿಗಳಾದ ಸೋಮಲಿಂಗ ಗೆಣ್ಣೂರ, ಮಹಾನಗರ ಪಾಲಿಕೆ ಆಯುಕ್ತರಾದ ವಿಜಯಕುಮಾರ ಮೆಕ್ಕಳಕಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬದ್ರುದ್ದೀನ ಸೌದಾಗರ, ಇತರರು ಉಪಸ್ಥಿತರಿದ್ದರು.



### ಬೈಲಹೊಂಗಲ ತಾಲೂಕಿನ ವಿವಿಧ ಗ್ರಾಮಗಳ ರೈತರ ಜಮೀನುಗಳಿಗೆ ರಾಜ್ಯ ಬಿಜೆಪಿ ನಾಯಕರ ತಂಡ ಭೇಟಿ ಪರಿಶೀಲನೆ

# ರಾಜ್ಯ ಸರ್ಕಾರ ರೈತರಿಗೆ ಯಾವ ಪರಿಹಾರವನ್ನು ನೀಡಿಲ್ಲ

**ಬೈಲಹೊಂಗಲ:** ರಾಜ್ಯದ ಮುಖ್ಯಮಂತ್ರಿ 5 ವರ್ಷ ನಾನೇ ಮುಖ್ಯಮಂತ್ರಿ ಎಂಬ ಮಾತನ್ನು ಹೇಳುವದೇ ಅವರ ಸಾಧನೆ ಆಗಿದೆ. ನಾಳೆ ಬೆಳಗಾವಿಗೆ ಬಂದು ರಿಬ್ಬನ್ ಕಟ್ ಮಾಡಿ ಬಿರಿಯಾನಿ ತಿಂದು ಹೋಗುವದು ಅಷ್ಟೇ ಅವರ ಕೆಲಸ, ಅಧಿಕಾರಿಗಳು ಅವರನ್ನು ಸ್ವಾಗತಿಸಿ ಐ ಬಿ ಗೆ ಕರಕೊಂಡು ಹೋಗಿ ಸಮಾರಂಭ ಮಾಡಿ ಬೀಳ್ಕೊಡುಗೆ ಮಾಡುವದಷ್ಟೇ ಅವರ ಕೆಲಸ ಆಗಿದೆ ಎಂದು ರಾಜ್ಯ ವಿರೋಧ ಪಕ್ಷದ ನಾಯಕ ಆರ್ ಅಶೋಕ ಕಿಡಿ ಕಾರಿದರು.

ಅವರು ಬೈಲಹೊಂಗಲ ತಾಲೂಕಿನ ನೇಸರಗಿ, ಮದನಬಾವಿ, ಮುರಕೀಬಾವಿ, ನಾಗನೂರ ಗ್ರಾಮಗಳಿಗೆ ಶುಕ್ರವಾರ ರೈತರ ಜಮೀನುಗಳಿಗೆ ಬೇಟಿ ನೀಡಿ, ಬೆಳೆ ಹಾನಿ ವೀಕ್ಷಣೆ ಮಾಡಿ ಮಾತನಾಡಿ, ಕೇಂದ್ರ ಸರ್ಕಾರ ಎನ್ ಡಿ ಆರ್ ಎಫ್ ಮೂಲಕ ಪರಿಹಾರ ದೇಶದ ಎಲ್ಲ ರಾಜ್ಯಗಳಿಗೆ ನೀಡಿದೆ ಆದರೆ ಸರ್ಕಾರ ರೈತರಿಗೆ ಯಾವ ಪರಿಹಾರವನ್ನು ನೀಡಿಲ್ಲ. ನಮ್ಮ ಸರ್ಕಾರದ ಅವಧಿಯಲ್ಲಿ ರೈತರಿಗೆ 25 ಸಾವಿರ ರೂಪಾಯಿಗಳನ್ನು ನೀಡಿದ್ದೇವೆ. ತಕ್ಷಣ ಮುಖ್ಯಮಂತ್ರಿ ಅವರು ಬೆಳೆ ವೀಕ್ಷಣೆ ಮಾಡಿ ಸಮೀಕ್ಷೆ ನಡೆಸಿ ಪರಿಹಾರ ನೀಡಬೇಕು, ನಮ್ಮ ಅಧಿಕಾರ ಅವಧಿಯಲ್ಲಿ 3 ಲಕ್ಷ ಕೋಟಿ ಬಜೆಟ್ ಇತ್ತು ಈಗ 4 ಲಕ್ಷ ಕೋಟಿ ಇದೆ ಆದರೂ ರೈತರಿಗೆ ಪರಿಹಾರ ನೀಡುತ್ತಿಲ್ಲ. ಅತಿಯಾದ ಮಳೆಯಿಂದ ಮನೆಗಳು ನೀರಿನಿಂದ ಮುಳುಗಿದರು ನಯಾ ಪೈಸೆ ಪರಿಹಾರ ನೀಡುತ್ತಿಲ್ಲ. ಕೂಡಲೇ ಸರ್ಕಾರ ರೈತರಿಗೆ ಪರಿಹಾರ ನೀಡಬೇಕು ಎಂದು ಅಗ್ರಹಿಸಿದರು.

ಇಲ್ಲಿಯವರೆಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಮಂತ್ರಿಗಳು ಬೆಳೆ ಸಮೀಕ್ಷೆ ಮಾಡಿಲ್ಲ, ರೈತರ ಗೋಳು ಕೇಳ್ಳಿಲ್ಲ, ಅದಕ್ಕಾಗಿ ಈ ಭಾಗದ ರೈತರ ಬೆಳೆ ಹಾನಿ ವೀಕ್ಷಣೆಗೆ ನಾವು ಬಂದಿದ್ದು, ರೈತರ 80% ಬೆಳೆ ಹಾನಿ ಅಗಿದ್ದು, ಅತಿಯಾದ ಮಳೆ, ಕಳಪೆ ಬೀಜ, ಕೀಟ ಭಾದೆಯಿಂದ ಹಾಳಾಗಿದೆ. ಕೂಡಲೇ ಸರ್ಕಾರ ಎಚ್ಚೆತ್ತುಕೊಂಡು ರೈತರಿಗೆ ಪರಿಹಾರ ನೀಡಬೇಕು. ಇಂದಿನಿಂದಲೇ ನಾವು ರಾಜ್ಯಾದ್ಯಂತ ಸುತ್ತಾಡಿ ಬೆಳೆ ಪರಿಹಾರ ನೀಡಲು ರಾಜ್ಯ ಸರಕಾರವನ್ನು ಅಗ್ರಹಿಸುತ್ತೇವೆ ಎಂದು ಅವರು ಈ ಸಂದರ್ಭದಲ್ಲಿ ರೈತರಿಗೆ ಭರವಸೆ ನೀಡಿದರು.


ಈ ಸಂದರ್ಭದಲ್ಲಿ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹಾಗೂ ವಿಧಾನ ಪರಿಷತ ಸದಸ್ಯ ಸಿ ಟಿ ರವಿ ಮಾತನಾಡಿ ರೈತರು ಒಬ್ಬೊಬ್ಬರಾಗಿ ತಮ್ಮ ಬೆಳೆಗಳಿಗೆ ಆದ ತೊಂದರೆ ಹೇಳಲು ವಿನಂತಿಸಿದರು. ಆಗ ರೈತರು ಮಾತನಾಡಿ ಕಳೆದ ವರ್ಷದ ಇಳುವರಿಯಲ್ಲಿ 80% ಬೆಳೆ ಹಾನಿಯಾಗಿದ್ದು ಏಕರಿಗೆ 2 ಕ್ವಿಂಟಲ್ ಮಾತ್ರ ಸೋಯಾಬಿನ್ ಬಂದಿದ್ದು, ಕಟ್ಟಾವು ಸಮಯದಲ್ಲಿ ಅತಿಯಾದ ಮಳೆ, ಕೀಟ ಭಾದೆ, ಕಳಪೆ ಬೀಜದಿಂದ ನಮ್ಮ ಬಾಳು ತೊಂದರೆ ಅಗಿದ್ದು ಇಂತಹ ಸಂದರ್ಭದಲ್ಲಿ ಯಾವ ಅಧಿಕಾರಿಗಳು, ಜಿಲ್ಲಾ ಮಂತ್ರಿಗಳು ಸಮೀಕ್ಷೆ, ವೀಕ್ಷಣೆಗೆ ಬಂದಿಲ್ಲಾ ಎಂದರು.

ಈ ಸಂದರ್ಭದಲ್ಲಿ ಸಂಸದ ರಮೇಶ ಜಿಗಜಿಣಗಿ, ಜಿಲ್ಲಾಧಿಕಾರಿ ಮೊಹಮ್ಮದ ರೋಷನ, ಎಮ್‌ಎಲ್ ಸಿ ರವಿಕುಮಾರ, ಶಾಸಕರಾದ ಸಿದ್ದು ಸವದಿ, ಅಭಯ ಪಾಟೀಲ,ಶಶಿಕಲಾ ಜೊಲ್ಲೆ, ದುರ್ಯೋಧನ ಐಹೋಳೆ, ಮಾಜಿ ಶಾಸಕರು, ಬಿಡಿಸಿಸಿ ಬ್ಯಾಂಕ ನಿರ್ದೇಶಕರಾದ ಮಹಾಂತೇಶ ದೊಡ್ಡಗೌಡರ, ಸಂಜಯ್ ಪಾಟೀಲ್, ರಾಯಬಾಗ್ ಶಾಸಕರಾದ ದುರ್ಯೋಧನ ಐಹೊಳೆ. ಜಗದೀಶ ಮೆಟಗುಡ, ಡಾ. ವಿ ಆಯ ಪಾಟೀಲ,ಮಾಜಿ ಎಮ್ ಎಲ್ ಸಿ ಮಹಾಂತೇಶ ಕವಟಗಿಮಠ, ಡಾ. ರವಿ ಪಾಟೀಲ, ಬೆಳಗಾವಿ ಮಹಾನಗರ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಮಹಾಂತೇಶ ವಕ್ಕುಂದ, ಉದ್ಯಮಿ ವಿಜಯ ಮೆಟಗುಡ. ಶ್ರೀಕರ್ ಕುಲಕರ್ಣಿ, ಬೆಳಗಾವಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಶುಭಾಷ ಪಾಟೀಲ, ಹಿರಿಯ ಮುಖಂಡ ಎಮ್ ಬಿ ಜಿರಲಿ, ಜಿಲ್ಲಾ ಬಿಜೆಪಿ ರೈತ ಮೋರ್ಚಾ ಖಜಾಂಚಿ ಮಹಾಂತೇಶ್ ಕೂಲಿನವರ, ಬೈಲಹೊಂಗಲ ಬಿಜೆಪಿ ಮಂಡಳ ಅಧ್ಯಕ್ಷ ಶುಭಾಷ ತುರಮರಿ, ಲಕ್ಷ್ಮೀ ಇನಾಮದಾರ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಮೆಟಗುಡ,

ಸಂತೋಷ್ ಹಡಪದ, ನೇಸರಗಿ ಗ್ರಾ ಪಂ ಅಧ್ಯಕ್ಷ ವೀರಭದ್ರ ಚೋಬಾರಿ, ತೇಜಪ್ಪಗೌಡ ಪಾಟೀಲ, ಸಂಜು ಪಾಟೀಲ, ಮಲ್ಲಿಕಾರ್ಜುನ್ ಸೋಮಣ್ಣವರ, ಮಲ್ಲಪ್ಪ ಮಾಳನ್ನವರ ಸೇರಿದಂತೆ ನೇಸರಗಿ ಭಾಗದ ಹಲವಾರು ರೈತ ಬಾಂಧವರು ಉಪಸ್ಥಿತರಿದ್ದರು.



# ಕೆಲಸದಲ್ಲಿ ಕೌಶಲ್ಯ ಪ್ರಾವಿಣ್ಯತೆ ಅಗತ್ಯ



**ಜಮಖಂಡಿ:** ಕೆಲಸದಲ್ಲಿ ಕೌಶಲ್ಯ, ಪ್ರಾವಿಣ್ಯತೆ ಅಗತ್ಯವಾಗಿದೆ. ಮೋಕ್ಷಗುಂಡುಂ ವಿಶ್ವೇಶರಯ್ಯನವರ ಬದುಕು, ಶ್ರಮ, ನಡೆದು ಬಂದ ದಾರಿ ಇಂದಿನ ಯುವ ಅಭಿಯಂತರರಿಗೆ ಮಾದರಿಯಾಗಿದೆ ಎಂದು ಪ್ರಭುಲಿಂಗೇಶ್ವರ ಸಕ್ಕರೆ ಕಾರ್ಖಾನೆ ಕಾರ್ಯನಿರ್ವಾಹಕ ನಿರ್ದೇಶಕ, ಯುವ ಉಧ್ಯಮಿ ವಿರುಪಾಕ್ಷಯ್ಯ ಗುಡುಗುಂಟಿಮಠ ಹೇಳಿದರು.

ನಗರದ ಮಾಳಿ ಸಮಾಜದ ಸಭಾಭವನದಲ್ಲಿ ಲಯನ್ಸ ಸಂಸ್ಥೆ ಹಮ್ಮಿಕೊಂಡಿದ್ದ ಅಭಿಯಂತರರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾರತರತ್ನ ಸರ್ ಎಂ.ವಿಶ್ವೇಶರಯ್ಯನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಅವರು ನಡೆದು ಬಂದ ದಾರಿಯಲ್ಲಿ ನಾವೆಲ್ಲರೂ ಸಾಗುವ ಮೂಲಕ ಸಮಾಜ ಮತ್ತು ದೇಶ ಸೇವೆಯಲ್ಲಿ ತೊಡಗಿಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ವಿವಿಧ ಇಲಾಖೆಗಳಲ್ಲಿ ಅಭಿಯಂತರರಾಗಿ ಸೇವೆ ಸಲ್ಲಿಸುತ್ತಿರುವ ಪ್ರಭುಸಿಂಗ ಬಲರಾಮಸಿಂಗ ರಜಪೂತ, ವಿಜಯ ಎಸ್. ಹಿರೇಮಠ, ವಿಠ್ಠಲ ಸಿದ್ದಪ್ಪ ನಾಯಿಕ, ವಾದಿರಾಜ ಗೋಪಾಲರಾವ ಗಲಗಲಿ, ಆನಂದ ಚೌಗಲಾ ಅವರನ್ನು ಲಯನ್ಸ ಸಂಸ್ಥೆ ವತಿಯಿಂದ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ನಾಡೋಜ ಡಾ.ಹೆಚ್.ಜಿ.ದಡ್ಡಿ, ಅಭಿಯಂತರ ವಿಜಯ ಕಟಗಿ, ನ್ಯಾಯವಾದಿ ಎನ್.ಸಿ.ನಾಯಿಕ, ಡಾ.ಸಿ.ಎಸ್.ಬಿರಾದಾರ, ನರೇಂದ್ರ ಮಾನೆ, ಶಿಕ್ಷಕ ಎಸ್.ಎ.ಕುಂಬಾರ ಸಹಿತ ಹಲವರು ಇದ್ದರು.

# ಅ.15ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ವಿಜಯಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಬಿ.ಎಲ್.ಡಿ.ಇ ಸಂಸ್ಥೆಯ ಎ.ವ್ಹಿ.ಎಸ್ ಆರ್ಯುವೇದ ಮಹಾವಿದ್ಯಾಲಯ ಇವರ ಸಹಯೋಗದಲ್ಲಿ 2025–26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವ್ಹಿ.ಎಸ್. ಆರ್ಯುವೇದ ಮಹಾವಿದ್ಯಾಲಯದ ವಾಗ್ಭಟ ಸಂಭಾಂಗಣದಲ್ಲಿ ಅಕ್ಟೋಬರ್ 15ರ ಬೆಳಿಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ.

15 ರಿಂದ 29 ವರ್ಷದೊಳಗಿನ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ ಜನಪದ ನೃತ್ಯ ಸ್ಪರ್ಧೆಯಲ್ಲಿ ಭಾಗವಹಿಸಲು ಒಂದು ತಂಡದಲ್ಲಿ 10 ಸ್ಪರ್ಧಿಗಳನ್ನು ಹಾಗೂ 15 ನಿಮಿಷ ಅವಧಿ ನಿಗದಿಪಡಿಸಲಾಗಿದ್ದು, ಕನ್ನಡ, ಆಂಗ್ಲ ಅಥವಾ ಹಿಂದಿ ಭಾಷೆಯನ್ನು ಆಯ್ದುಕೊಳ್ಳಬಹುದಾಗಿದೆ. ಜನಪದ ಗೀತೆಯಲ್ಲಿ ಭಾಗವಹಿಸಲು ಒಂದು ತಂಡದಲ್ಲಿ 10 ಸ್ಪರ್ಧಿಗಳನ್ನು ಹಾಗೂ 07 ನಿಮಿಷದ ಅವಧಿ ನಿಗದಿ ಪಡಿಸಲಾಗಿದ್ದು, ಕನ್ನಡ, ಆಂಗ್ಲ ಅಥವಾ ಹಿಂದಿ ಭಾಷೆಯನ್ನು ಆಯ್ದುಕೊಳ್ಳಬಹುದಾಗಿದೆ.

ಕಥೆ ಬರೆಯುವ ಸ್ಪರ್ಧೆಯಲ್ಲಿ ಭಾಗವಹಿಸುವವರು 60 ನಿಮಿಷಗಳಲ್ಲಿ 1000 ಪದಗಳಿಗೆ ಮೀರದಂತೆ ಕನ್ನಡ, ಆಂಗ್ಲ ಅಥವಾ ಹಿಂದಿ ಭಾಷೆಗಳಲ್ಲಿ ಕಥೆ ಬರೆಯಬಹುದಾಗಿದೆ. ಚಿತ್ರಕಲೆ ಸ್ಪರ್ಧೆಯಲ್ಲಿ ಭಾಗವಹಿಸುವರಿಗೆ 90 ನಿಮಿಷಗಳ ಕಾಲಮಿತಿ ನಿಗದಿ ಪಡಿಸಲಾಗಿದ್ದು, ಕನ್ನಡ, ಆಂಗ್ಲ ಅಥವಾ ಹಿಂದಿ ಭಾಷೆಗಳಲ್ಲಿ ಒಬ್ಬರು ಭಾಗವಹಿಸಬಹುದು. ಕವಿತೆ ಬರೆಯುವ ಸ್ಪರ್ಧೆಯಲ್ಲಿ ಭಾಗವಹಿಸುವವರು 90 ನಿಮಿಷಗಳ ಕಾಲ ಮಿತಿಯಲ್ಲಿ ಕನ್ನಡ, ಆಂಗ್ಲ ಅಥವಾ ಹಿಂದಿ ಭಾಷೆಗಳಲ್ಲಿ ಕವಿತೆ ಬರೆಯಬಹುದಾಗಿದ್ದು, ಒಬ್ಬರು ಭಾಗವಹಿಸಬಹುದು. ಸಾಯಿನ್ಸ್ ಮೇಳದ ಸ್ಪರ್ಧೆಯಲ್ಲಿ ಒಂದು ತಂಡದಲ್ಲಿ 5 ಜನ ಒಳಗೊಂಡಿರಬೇಕು.ಆಸಕ್ತ ವಿದ್ಯಾರ್ಥಿಗಳು ಹಾಗೂ ಯುವಜನ ಸಂಘಗಳ ಸದಸ್ಯರು ನಗರದ ಡಾ.ಬಿ.ಆರ್.ಅಂಬೇಡ್ಕರ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಅಕ್ಟೋಬರ್ 13ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ 08352–251085, 701900843 ಹಾಗೂ 9535501872 ಸಂಪರ್ಕಿಸಬಹುದಾಗಿದೆ ಎಂದು ಕ್ರೀಡಾಧಿಕಾರಿ ರಾಜಶೇಖರ ಧೈವಾಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರಗತಿ ಪರಿಶೀಲನಾ ಸಭೆ: ಜಿಲ್ಲೆಯಲ್ಲಿ 3.26 ಲಕ್ಷ ಕುಟುಂಬಗಳ ಸಮೀಕ್ಷೆ

# ಸಮೀಕ್ಷೆಯಲ್ಲಿ ಯಶಸ್ವಿಗೊಂಡ ಶಿಕ್ಷಕರಿಗೆ ಸನ್ಮಾನ

**ಬಾಗಲಕೋಟೆ:** ಜಿಲ್ಲೆಯಾದ್ಯಂತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗಿದ್ದು, ಕಡಿಮೆ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಿದ ಬಾಗಲಕೋಟೆ ತಾಲೂಕಿನ ಇಬ್ಬರು ಶಿಕ್ಷಕರನ್ನು ಹಿಂದುಳಿದ ವರ್ಗಗಳ ಆಯೋಗದ ಸದಸ್ಯರಾದ ಡಾ.ಸಿ.ಎಂ. ಕುಂದಗೋಳ ಸನ್ಮಾನಿಸಿ ಪ್ರಮಾಣ ಪತ್ರ ನೀಡಿದರು.



ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜರುಗಿದ ಸಾಮಾಜಿಕ ಮತ್ತು ಶೈಕ್ಷಣಿ ಸಮೀಕ್ಷೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸಮೀಕ್ಷೆಯಲ್ಲಿ ಪಾಲ್ಗೊಂಡ ತಾಲೂಕಾ ಅಧಿಕಾರಿಗಳಿಗೆ ಸಮೀಕ್ಷೆಯಲ್ಲಿ ಕಂಡು ಬರುವ ಸಮಸ್ಯೆಗಳನ್ನು ಆಲಿಸಿದರು. ನಂತರ ತಾಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಕಂಡು ಬರುವ ಸಮಸ್ಯೆ ಹಾಗೂ ಪರಿಹಾರಗಳ ಕುರಿತು ಚರ್ಚೆ ನಡೆಸಿದರು. ಕಡಿಮೆ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಿದ ತಾಲೂಕಿನ ಇಬ್ಬರ ಸಮೀಕ್ಷೆದಾರರಿಗೆ ಪ್ರಮಾಣ ಪತ್ರ ವಿತರಿಸಿ ಸನ್ಮಾನಿಸಲಾಯಿತು.

ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಮಾತನಾಡಿ ಜಿಲ್ಲೆಯಲ್ಲಿ ಒಟ್ಟು, 4,70,648 ಕುಟುಂಬಗಳಿದ್ದು, ಸಮೀಕ್ಷೆ ಕೈಗೊಳ್ಳಲು 4323 ಸಮೀಕ್ಷೆದಾರರನ್ನು ನೇಮಕ ಮಾಡಲಾಗಿದೆ.

ಇಲ್ಲಿಯವರೆಗೆ 3,26,081 ಕುಂಟುಂಬಗಳ ಸಮೀಕ್ಷೆ ಮಾಡಿ ಶೇ.69.28 ರಷ್ಟು ಪ್ರಗತಿ ಸಾಧಿಸಲಾಗಿದೆ. ಬೀಳಗಿ ತಾಲೂಕು ಶೇ.78.33 ಸಾಧನೆ ಮಾಡಿ ಪ್ರಥಮ ಸ್ಥಾನದಲ್ಲಿದ್ದರೆ, ಬಾಗಲಕೋಟೆ ತಾಲೂಕು ಶೇ. 54.67 ಸಾಧನೆ ಮಾಡಿ ಕೊನೆಯ ಸ್ಥಾನದಲ್ಲಿರುತ್ತದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಜಮಖಂಡಿ ಉಪ ವಿಬಾಗಾಧಿಕಾರಿ ಶ್ವೇತಾ ಬಿಡೇಕರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜಾ ಹಾಗೂ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



## ಗಾಂಧೀಜಿ-ಶಾಸ್ತ್ರಿ ಜಯಂತಿ ಆಚರಣೆ

**ತಾಳಿಕೋಟೆ:** ಪಟ್ಟಣದ ಶ್ರೀಘನಮಠೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಮಹಾತ್ಮಗಾಂಧಿಜಿ ಅವರ 156ನೇ ಮತ್ತು ಲಾಲ್ ಬಹುದ್ದೂರ ಶಾಸ್ತ್ರಿ ಅವರ 121ನೇ ಜಯಂತ್ಯೋತ್ಸವವನ್ನು ಆಚರಿಸಲಾಯಿತು.

ಈ ಸಮಯದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಎಸ್.ಎಂ.ಸಜ್ಜನ ಅವರು ಮಾತನಾಡಿ ರಾಷ್ಟ್ರಪಿತನಾದ ದೇಶದ ಸ್ವಾತಂತ್ರ ಹೊರಾಟಗಾರ ಅಹಿಂಶವಾದಿಯಾದ ಮಹಾತ್ಮಗಾಂಧೀಜಿ ಅವರ ಮತ್ತು ಸ್ವತಂತ್ರ ಭಾರತದ 2 ನೇ ಪ್ರಧಾನಮಂತ್ರಿಯಾಗಿದ್ದ ಲಾಲ್ ಬಹುದ್ದೂರ ಶಾಸ್ತ್ರಿ ಅವರ ಪ್ರಾಮಣಿಕ ಮತ್ತು ಶಾಂತಿಯ ಅವರ ಆದರ್ಶ ಮತ್ತು ಮೌಲ್ಯಗಳು ಇಂದಿನ ಸಮಾಜಕ್ಕೆ ಮತ್ತು ವಿದ್ಯಾಥಿಗಳಿಗೆ ಸ್ಪೂರ್ತಿದಾಯಕವಾಗಿದ್ದು ಅವರ ಆದರ್ಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಂಡು ಮುನ್ನಡೆಯಬೇಕೆಂದರು.

ಈ ಸಮಯದಲ್ಲಿ ಸಂಸ್ಥೆಯ ಕಾಯದರ್ಶಿ ವಿವೇಕಾನಂದ ಸಜ್ಜನ, ಮುಖ್ಯಗುರುಗಳಾದ ಬಿ.ಜಿ.ಸಜ್ಜನ, ಆರ್.ಎಸ್.ದೇಸಾಯಿ, ದೈಹಿಕ ಶಿಕ್ಷಕ ಶಿವಾನಂದ ಸುಣದಳ್ಳಿ, ಪಿಯು ಕಾಲೇಜ್ ಪ್ರಾಚಾರ್ಯ ಬಿ.ಎಸ್ ಮಾಲಿಪಾಟೀಲ್ ಸಿಬಿಎಸ್ಇ ಪ್ರಾಚಾರ್ಯ ಜಯಚಂದ್ರ, ಬಿಎಡ್ ಕಾಲೇಜ್ ಪ್ರಾಚಾರ್ಯ ಜಿ.ಎನ್.ಪಾಟೀಲ, ಸರ್ವ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಶಿಕ್ಷಣದಿಂದ ದೇಶದ ಅಭಿವೃದ್ಧಿ: ಶಾಸಕ ಸವದಿ

**ರಬಕವಿ–ಬನಹಟ್ಟಿ:** ಶಿಕ್ಷಣದಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ತಾಲ್ಲೂಕಿನಲ್ಲಿ ಶೈಕ್ಷಣಿಕ ಅಭಿವೃದ್ಧಿಗೆ ಸದಾ ಬದ್ಧನಾಗಿದ್ದೇನೆ. ಶೈಕ್ಷಣಿಕ ವಿಷಯಕ್ಕೆ ಸಂಬಂಧಪಟ್ಟಂತೆ ಯಾವುದೆ ಸಮಸ್ಯೆಗಳು ಇದ್ದರೆ ಶಾಸಕರ ಗಮನಕ್ಕೆ ತರಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಅವರು ಈಚೆಗೆ ರಬಕವಿಯ ವಿದ್ಯಾ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನ ಶಾಲಾ ವರ್ಗ ಕೋಣೆಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.ಸರ್ಕಾರ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗಾಗಿ ಹತ್ತಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ವಿದ್ಯಾರ್ಥಿಗಳು ಕೂಡಾ ಇವುಗಳ ಸದ್ಬಳಕೆ ಮಾಡಿಕೊಳ್ಳಬೇಕು. ಶಿಕ್ಷಕರು ಕೂಡಾ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಬೇಕು. ಕ್ಷೇತ್ರದಲ್ಲಿ ಉತ್ತಮ ಶೈಕ್ಷಣಿಕ ವಾತಾವರಣ ಇದೆ ಎಂದು ತಿಳಿಸಿದರು.

ಶಿವಾನಂದ ತಂಗಡಿ, ಮಾರುತಿ ಗಾಡಿವಡ್ಡರ, ಧರೆಪ್ಪ ಉಳ್ಳಾಗಡ್ಡಿ, ಮಹಾದೇವ ಕೊಟ್ಯಾಳ, ಬಸು ಮನ್ನಿ, ಸವಿತಾ ಹೊಸೂರ, ಶಿಕ್ಷಣ ಇಲಾಖೆಯ ಅಧಿಕಾರಿಗಳಾದ ಬಿ.ಎಂ.ಹಳೆಮನಿ, ಡಬ್ಲ್ಯು.ವೈ. ಭಜಂತ್ರಿ, ಮಲ್ಲಿಕಾರ್ಜುನ ಗಡೆನ್ನವರ ಸೇರಿದಂತೆ ಅನೇಕರು ಇದ್ದರು.




# ವಿಶೇಷ ಕಾರ್ಯಕ್ರಮಗಳೊಂದಿಗೆ ನವರಾತ್ರಿ ಆಚರಣೆ

**ಮುದ್ದೆಬಿಹಾಳ:** ಪಟ್ಟಣದ ಬಸವ ನಗರದಲ್ಲಿರುವ ಕ್ಷತ್ರೀಯ ಮರಾಠಾ ಕುಲದೇವತೆಯಾದ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ 9 ದಿನಗಳ ನವರಾತ್ರಿ ಹಬ್ಬ ವಿಶೇಷ ಕಾರ್ಯಕ್ರಮಗಳೊಂದಿಗೆ ಅತೀ ವಿಜೃಂಭಣೆಯಿಂದ ಆಚರಿಸಲಾಯಿತು.

9 ದಿನಗಳ ಕಾಲ ಶ್ರೀ ಅಂಬಾಭವಾನಿ ಮಂದಿರದಲ್ಲಿ ಎಲ್ಲ ಭಕ್ತರ ಸಮ್ಮುಖದಲ್ಲಿ ನವರಾತ್ರಿ ಅಂಗವಾಗಿ ವಿವಿಧ ಕಾರ್ಯಕ್ರಮಗಳು ಹಾಗೂ ವಿವಿಧ ಪೂಜಾ ವಿಧಿ ವಿಧಾನ ಹೋಮ ಹವನಗಳು ಅತೀ ವಿಜೃಂಭಣೆಯಿಂದ ಜರುಗಿದವು.

ನವರಾತ್ರಿ ಅಂಗವಾಗಿ ಪ್ರತೀದಿನ ಬೆಳಿಗ್ಗೆ ಹಾಗೂ ಸಾಯಂಕಾಲ ಶ್ರೀ ದೇವಿಗೆ ಮಹಾಪೂಜೆಗೈಯುವದರೊಂದಿಗೆ ಸಾಯಂಕಾಲ ಮಹಿಳೆಯರಿಂದ ಲಲಿತಾ ಸಹಸ್ರನಾಮ, ಶ್ರೀದೇವಿಯ ಭಕ್ತಿಗೀತೆ, ಮಹಿಳೆಯರಿಂದ ಕೋಲಾಟಗಳು ಜರುಗುತ್ತ ಸಾಗಿದವು. ಸ್ಥಳೀಯ ಮರಾಠಾ ಸಮಾಜ ಬಾಂಧವರಿಂದ ದುರ್ಗಾಷ್ಟಮಿ ದಿನದಂದು ಊರಿನ



ಎಲ್ಲ ಮಹಿಳೆಯರಿಗೆ ಉಡಿತುಂಬುವ ಕಾರ್ಯಕ್ರಮ ಜರುಗಿತಲ್ಲದೇ ಮಹಿಳಾ ಸದಸ್ಯರಿಂದ ವಿಶೇಷವಾಗಿ ಪಾಂಡುರಂಗ ರುಕ್ಮಿಣಿದೇವಿಯ ಭಜನಾ ಕಾರ್ಯಕ್ರಮ ಏರ್ಪಡಿಸಿ ಶ್ರೀ ವಿಠ್ಠಲನ ನಾಮಸ್ಮರಣೆ ಮಾಡಿ ಪುನೀತರಾದರು. ನಂತರ ಭಕ್ತರಿಗೆ ಮಹಾಪ್ರಸಾದ ಕಾರ್ಯಕ್ರಮ ಜರುಗಿತು.

ಈ ಸಮಯದಲ್ಲಿ ಎಲ್ಲಾ ಹಿಂದೂ ಸಮಾಜದ ಮಹಿಳೆಯರು ಭಾಗವಹಿಸಿ ಶ್ರೀ ದೇವಿಯ ದರ್ಶನ ಪಡೆದು ಪುನೀತರಾದರು.

# ಹೊಸ ಪೀಠವಿಲ್ಲ, ಮೂಲ ಪೀಠವೇ ನಿರ್ವಹಣೆ

**ರಬಕವಿ–ಬನಹಟ್ಟಿ:** ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಪ್ರಥಮ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮೀಜಿಯಿಂದ ಹೊಸ ಪೀಠ ಮಾಡುವದಿಲ್ಲ. ಬದಲಾಗಿ ಮೂಲಪೀಠವೇ ನಿರ್ವಹಣೆಯಾಗಲಿದ್ದು, ಇದಕ್ಕಾಗಿ ಕೂಡಲಸಂಗಮದಲ್ಲಿಯೇ ಭಕ್ತರಿಂದ ಸ್ಥಳಾವಕಾಶಕ್ಕೆ ಸಿದ್ಧತೆ ನಡೆಸಲಾಗುತ್ತಿಯೆಂದು ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಧರೆಪ್ಪ ಸಾಂಗ್ಲಿಕರ ತಿಳಿಸಿದರು.



ಬನಹಟ್ಟಿಯಲ್ಲಿ ಪತ್ರಿಕೆಯೊಂದಿಗೆ ಮಾತನಾಡಿದ ಅವರು, 4ನೇ ಪೀಠ ತಯಾರಿಯಲ್ಲಿರುವ ಬಗ್ಗೆ ನಡೆದಿರುವ ನಿರ್ಧಾರಗಳು ಕಪೋಲಕಲ್ಪಿತ. ಇದ್ದ ಪೀಠವೇ ಮೂಲವಾಗಿದ್ದು, ಟ್ರಸ್ಟ್‌ನಿಂದ ಪದಚ್ಯುತಿಯಾಗಿರುವ ಶ್ರೀಗಳು ಪೀಠದಿಂದಾಗಿಲ್ಲ. ಇಡೀ ಪಂಚಮಸಾಲಿ ಸಮುದಾಯವೆ ಇವರ ಬೆನ್ನಿಗೆ ನಿಂತಿದ್ದು, ಶೀಘ್ರವೇ ಹೊಸ ಜಾಗೆಯೊಂದಿಗೆ ಪ್ರಥಮ ಜಗದ್ಗುರುಗಳ ನಿರಂತರ ಕಾರ್ಯ ಮುನ್ನಡೆಯಲಿದೆಯೆಂದು ಸಾಂಗ್ಲಿಕರ ಸ್ಪಷ್ಟಪಡಿಸಿದರು.

**ಟ್ರಸ್ಟ್‌ನಿಂದ ಬೇಸರ:** ಕೂಡಲಸಂಗಮದಲ್ಲಿ ಮೊದಲು ಸೃಷ್ಟಿಯಾಗಿರುವದು ಪ್ರಥಮ ಜಗದ್ಗುರುಗಳಾಗಿ ಬವಸಜಯ ಮೃತ್ಯುಂಜಯ ಸ್ವಾಮೀಜಿಗಳ ಪೀಠ. ನಂತರ ಸೃಷ್ಟಿಯಾಗಿರುವದೇ ಟ್ರಸ್ಟ್. ಹೀಗಾಗಿ ಟ್ರಸ್ಟ್‌ಗೂ ಪೀಠಕ್ಕೂ ಯಾವದೇ ಸಂಬಂಧವಿಲ್ಲ. ಶ್ರೀಗಳನ್ನು ಅಧ್ಯಕ್ಷರನ್ನಾಗಿ ಮಾಡುವದಾಗಿ ತಿಳಿಸಿ, ಅದರಂತೆ ಜಾಗೆಯನ್ನೂ ಒದಗಿಸುವ ಬಗ್ಗೆ ಟ್ರಸ್ಟ್ ತಿಳಿಸಿತ್ತು. ಇದ್ಯಾವದಕ್ಕೂ ಸಹಕರಿಸದೆ ಕಳೆದ 4 ವರ್ಷಗಳ ಹಿಂದೆ ಸ್ವಾಮೀಜಿಗಳನ್ನು ಸದಸ್ಯರನ್ನಾಗಿ ಮಾಡಿಕೊಂಡು ಅದೇ ಸಂದರ್ಭ ಶಾಸಕ ವಿಜಯಾನಂದ ಕಾಶಪ್ಪನವರರನ್ನೂ ಸಹಿತ ಸದಸ್ಯರನ್ನಾಗಿ ಆಯ್ಕೆ ಮಾಡಿತ್ತು.

ಈಚೆಗೆ ಕಳೆದೆರಡು ತಿಂಗಳ ಹಿಂದೆ ಕಾಶಪ್ಪನವರ ಅಧ್ಯಕ್ಷರಾದ ನಂತರ ವ್ಯವಸ್ಥಿತ ಪಿತೂರಿಯಿಂದ ಟ್ರಸ್ಟ್‌ನಿಂದ ಹೊರ ಹಾಕುವ ವಿಚಾರ ಎಲ್ಲರಿಗೂ ತಿಳಿದ ವಿಷಯವಾಗಿದೆ.

ಟ್ರಸ್ಟ್‌ನ ನಡೆಯಿಂದ ಬಸವಯಜಯ ಮೃತ್ಯುಂಜಯಶ್ರೀಗಳ ಎಲ್ಲ ಭಕ್ತರಿಗೆ ನೋವಾಗಿದೆ. ಹೀಗಾಗಿ ಹೊಸ ಪೀಠ ಮಾಡುವ ಪ್ರಮೇಯವೇ ಇಲ್ಲ. ಬದಲಾಗಿ ಮೂಲಪೀಠದಿಂದಲೇ ಬಸವಜಯ ಮೃತ್ಯುಂಜಯಶ್ರೀಗಳು ತಮ್ಮ ಸೇವೆ ಮುನ್ನಡೆಸಲಿದ್ದಾರೆಂದು ಸಾಂಗ್ಲಿಕರ ಸ್ಪಷ್ಟಪಡಿಸಿದರು.

# ಗಾಂಧೀಜಿ, ಶಾಸ್ತ್ರೀ ಮಾದರಿ ನಾಯಕರು



ರಬಕವಿ ಬನಹಟ್ಟಿ ಬಿಜೆಪಿ ಕಾರ್ಯಾಲಯದಲ್ಲಿ ಮಹಾತ್ಮಾ ಗಾಂಧೀಜಿ ಮತ್ತು ಲಾಲ್ ಬಹಾದ್ದೂರ ಶಾಸ್ತ್ರಿಯವರ ಜಯಂತ್ಯುತ್ಸವದ ಸಂದರ್ಭದಲ್ಲಿ ಶಾಸಕ ಸಿದ್ದು ಸವದಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

**ರಬಕವಿ–ಬನಹಟ್ಟಿ:** ಸತ್ಯ ಅಹಿಂಸೆಯ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟ ಮಹಾತ್ಮಾ ಗಾಂಧೀಜಿಯವರ ನಡೆ ನುಡಿಗಳು, ಆದರ್ಶಗಳು ನಮಗೆ ಮಾದರಿಯಾಗಿವೆ. ಅವರ ಜೀವನವೇ ನಮಗೆ ಮಾರ್ಗದರ್ಶನವಾಗಿದೆ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಇಲ್ಲಿನ ಭಾರತೀಯ ಜನತಾ ಪಕ್ಷದ ಕಾರ್ಯಾಲಯದಲ್ಲಿ ನಡೆದ ಮಹಾತ್ಮಾ ಗಾಂಧೀಜಿ ಮತ್ತು ಲಾಲ್ ಬಹಾದ್ದೂರ ಶಾಸ್ತ್ರಿ ಅವರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ದೇಶದ ಪ್ರಧಾನಿಯಾಗಿದ್ದ ಲಾಲ್ ಬಹಾದ್ದೂರ ಶಾಸ್ತ್ರಿಯವರು ಅತ್ಯಂತ ಸರಳ ವ್ಯಕ್ತಿತ್ವ ಹೊಂದಿದವರಾಗಿದ್ದರು. ಜೈ ಜವಾನ್ ಮತ್ತು ಜೈ ಕಿಸಾನ್ ಎಂಬ ಘೋಷಣೆಯನ್ನು ಹೇಳುವುದರ ಮೂಲಕ ದೇಶದ ಗಡಿಗಳನ್ನು ರಕ್ಷಣೆ ಮಾಡುವ ಸೈನಿಕರೂ ಮತ್ತು ದೇಶದ ಜನರಿಗೆ ಅನ್ನವನ್ನು ನೀಡುವ ರೈತರನ್ನು ನಾವು ಗೌರವಿಸಬೇಕು ಎಂದು ಹೇಳಿದ್ದರು. ಅವರ ನೀಡಿದ ಕರೆಗಳಿಗೆ ದೇಶವೇ ಭಾಗಿಯಾಗುತ್ತಿತ್ತು.

ಗಾಂಧೀಜಿ ಮತ್ತು ಶಾಸ್ತ್ರಿಯವರು ದೇಶ ಕಂಡ ಶ್ರೇಷ್ಠ ನಾಯಕರು. ಅವರ ತತ್ವ ಸಿದ್ಧಾಂತಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಂಡು ದೇಶದ ಅಭಿವೃದ್ಧಿಯಲ್ಲಿ ಶ್ರುಮಿಸಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ನಗರಸಭೆಯ ಅಧ್ಯಕ್ಷೆ ವಿದ್ಯಾ ಧಬಾಡಿ, ಬಾಬಾಗೌಡ ಪಾಟೀಲ, ಆನಂದ ಕಂಪು, ಸುರೇಶ ಅಕ್ಕಿವಾಟ, ಜಯವಂತ ಮಿಳ್ಳಿ, ವರ್ಧಮಾನ ಕೋರಿ, ಸದಾಶಿವ ಪರೀಟ, ಸದಾಶಿವ ಸಂತಿ, ದುರ್ಗವ್ವ ಹರಿಜನ ಸೇರಿದಂತೆ ಅನೇಕರು ಇದ್ದರು.

## ಎಂ.ಎಸ್.ಎಂ.ಇ ಗಳಿಗೆ ಕಾರ್ಯಾಗಾರ

**ಬಾಗಲಕೋಟೆ:** ಉದ್ಯಮ ಪೋರ್ಟಲ್ ನೋಂದಾಯಿತ ಮೊದಲ 120 ಎಂ.ಎಸ್.ಎಂ.ಇ ಗಳಿಗೆ ಕೆ.ಎಸ್‌ಎಂಸಿ ಮತ್ತು ಎ ಬೆಂಗಳೂರು ಅವರ ಸಹಯೋಗದಲ್ಲಿ ಎಕ್ಸಪೋರ್ಟ ಪ್ರೊಮೋಷನ್ ಮತ್ತು ಫೆಸಿಲಿಟೀಸ್ ವಿಷಯದ ಕುರಿತು ಅಕ್ಟೋಬರ 9 ರಂದು ಇಲಕಲ್ಲ ಪಟ್ಟಣದ ಹೋಟಲ್ ಝೀಪ್ ಹಾಗೂ 10 ರಂದು ನವನಗರದ ಜಿಲ್ಲಾ ಪಂಚಾಯತ, ನೂತನ ಸಭಾಭವನದಲ್ಲಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಕೇವಲ 120 ಎಂ.ಎಸ್.ಎ.ಇ ಗಳಿಗೆ ಅವಕಾಶವಿರುವುದರಿಂದ ಕೂಡಲೇ ಆಸಕ್ತ ಉದ್ದಿಮೆದಾರನು, ಅಕ್ಟೋಬರ 7 ರಂದು ಸಂಜೆ 5 ಗಂಟೆಯೊಳಗಾಗಿ ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ ಬಾಗಲಕೋಟೆ ದೂಸಂ.08354–200294, 6361385459ಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಗೋಕಾಕ ಜಿಲ್ಲೆ ಮಾಡದಿದ್ದರೆ ನಿರಂತರ ಧರಣಿ ಸತ್ಯಾಗ್ರಹ

**ಗೋಕಾಕ:** ಬರುವ ನವೆಂಬರ್ 1ರ ಒಳಗೆ ಗೋಕಾಕ ನೂತನ ಜಿಲ್ಲೆ ಘೋಷಣೆ ಮಾಡದೆ ಹೋದರೆ ನವೆಂಬರ್ 2 ರಿಂದ ನಿರಂತರ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಕಾಂಗ್ರೆಸ್ ಮುಖಂಡ ಅಶೋಕ ಪೂಜಾರಿ ಹೇಳಿದರು.

ಅವರು, ಶುಕ್ರವಾರದಂದು ನಗರದ ಅವರ ಸ್ವ–ಗೃಹದಲ್ಲಿ ಕರೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

ಗೋಕಾಕ ನೂತನ ಜಿಲ್ಲೆಗೆ ಆಗ್ರಹಿಸಿ ಗೋಕಾಕ ಜಿಲ್ಲಾ ಚಾಲನಾ ಸಮಿತಿ ಹಾಗೂ ನ್ಯಾಯವಾದಿಗಳ ಸಂಘ ಮತ್ತು ತಾಲೂಕಿನ ಎಲ್ಲಾ ಸಂಘ, ಸಂಸ್ಥೆಗಳ ನೇತೃತ್ವದಲ್ಲಿ ಪಕ್ಷಾತೀತವಾಗಿ ಮುಂದಿನ ದಿನಗಳಲ್ಲಿ ನಿರಂತರ ಹೋರಾಟಗಳನ್ನು ಸಂಘಟಿಸಲಾಗುವುದು. ಸರಕಾರವೇ ರಚಿಸಿದ



ಆಯೋಗಗಳು ಈಗಾಗಲೇ ಗೋಕಾಕ ಜಿಲ್ಲೆಯಾಗಲು ಸೂಕ್ತ ಎಂದು ಹೇಳಿದರು ಸಹ ಇಲ್ಲಿಯವರೆಗೆ ಗೋಕಾಕ ಜಿಲ್ಲೆ ಆಗುವ ಯೋಗ ಕೂಡಿ ಬಂದಿಲ್ಲ ಇದಕ್ಕೆ ರಾಜಕೀಯ ಹಿತಾಸಕ್ತಿ ಇಲ್ಲದಿರುವುದು ದೊಡ್ಡ ದುರಂತ ಎಂದ ಅವರು. ಕೇಂದ್ರ ಸರಕಾರದ ನಿರ್ದೇಶನದಂತೆ ಬರುವ ಡಿಸೆಂಬರ್ 31ರ ಒಳಗೆ ರಾಜ್ಯ ಸರಕಾರಗಳು ಗಡಿ ಪ್ರದೇಶಗಳನ್ನು ವಿಗಂಡನೆ ಮಾಡಬೇಕು ಒಂದು ವೇಳೆ ಮಾಡದೇ ಹೋದರೆ ಮುಂದಿನ 3ವರ್ಷಗಳ ಕಾಲ ಯಾವುದೇ ಭೂ ಪ್ರದೇಶಗಳನ್ನು ವಿಭಜಿಸುವ ಹಾಗಿಲ್ಲ, ಹಾಗಾಗಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಮತ್ತು ಸಚಿವೆ ಶ್ರೀಮತಿ ಲಕ್ಷ್ಮೀ ಹೆಬ್ಬಾಳಕರ ಅವರು ಕೂಡಲೇ ಎಚ್ಚೆತ್ತುಕೊಂಡು ಜಿಲ್ಲೆಯ ಎಲ್ಲಾ ಶಾಸಕರನ್ನು ಸೇರಿಸಿ ಅವರ ಅಭಿಪ್ರಾಯ ಪಡೆದುಕೊಂಡು ಜಿಲ್ಲೆ ವಿಭಜನೆಗೆ ಚಾಲನೆ ನೀಡಬೇಕು ಎಂದು ಆಗ್ರಹಿಸಿದರು.

ಮಾಜಿ ಮುಖ್ಯಮಂತ್ರಿ ದಿವಗಂತ ಜೆ.ಎಚ್.ಪಟೇಲ್ ಅವರು ಮಾಡಿದ ಆದೇಶವೇ ಬದಲಾವಣೆ ಆಗಿರುವಾಗ ಕೂಡಲೇ ಸರಕಾರ ಎಚ್ಚರಗೊಂಡು ಗಡಿ ಪ್ರದೇಶ ಗುರುತಿಸುವ ಕಾರ್ಯಕ್ಕೆ ಚಾಲನೆ ನೀಡಬೇಕು. ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಜಿಲ್ಲೆಗೂ ನ್ಯಾಯ ಕೊಡಬೇಕು ಮತ್ತು ತಾವು ಹುಟ್ಟಿ ಬೆಳೆದ ಊರಿಗೂ ನ್ಯಾಯ ದೊರಕಿಸಬೇಕು ಎಂದರು. ಈ ಸಂದರ್ಭದಲ್ಲಿ ಪ್ರೋ. ಅರ್ಜುನ್ ಪಂಗಣ್ಣವರ, ಸಂಜೀವ ಪೂಜಾರಿ, ಬಾಳಯ್ಯ ಕಂಬಿ, ಸದಾಕತಅಲಿ ಮಕಾನದಾರ, ಪ್ರವೀಣ ನಾಯಿಕ, ಮಲ್ಲಪ್ಪ ಜಟ್ಟೆನ್ನವರ, ಲಿಂಗಪ್ಪ ಅಮಿನಭಾವಿ ಉಪಸ್ಥಿತರಿದ್ದರು.

# ಸಾಧನೆಗೆ ಸಂಘ-ಸಂಸ್ಥೆಗಳ ಅವಶ್ಯಕತೆಯಿದೆ: ಶಿವಲಿಂಗ ಶ್ರೀಗಳು

**ಜಮಖಂಡಿ:** ಕಲಿಯುಗದಲ್ಲಿ ಬದುಕು ಸುಂದರ ಸಾಧನೆಗೆ ಸಂಘ–ಸಂಸ್ಥೆಗಳ ಅವಶ್ಯಕತೆಯಿದೆ. ಸಂಘ–ಸಂಸ್ಥೆಗಳ ಮೂಲಕ ವಿವಿಧ ಸಾಮಾಜಿಕ ಸೇವೆ ಮಾಡಬಹುದು ಎಂದು ಮುತ್ತಿನಕಂತಿಹಿರೇಮಠದ ಶಿವಲಿಂಗ ಪಂಡಿತಾರಾಧ್ಯ ಶಿವಾಚಾರ್ಯರು ಹೇಳಿದರು.

ನಗರದ ಮುಧೋಳ ರಸ್ತೆಯ ಹತ್ತಿರವಿರುವ ಜೈನ ಅನಾಥಾಶ್ರಮ ಮತ್ತು ವೃದ್ಧಾಶ್ರಮದಲ್ಲಿ ಮಾತೋಶ್ರೀ ರಾಚಮ್ಮ ನೀಲಕಂಠ ಅಥರ್ಗಾ ಪ್ರತಿಷ್ಠಾನ, ವಿಜಯಪುರ ಸಮಾರಂಭದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದು ಬಡವರಮಕ್ಕಳು ಅನಾಥಶ್ರಮದಲ್ಲಿದ್ದರೆ, ಶ್ರೀಮಂತರ ತಂದೆ–ತಾಯಿ ವೃದ್ಧಾಶ್ರಮದಲ್ಲಿದ್ದಾರೆ. ಜೀವನದಲ್ಲಿ ಎಂದಿಗೂ ಛಲವನ್ನು ಬಿಡಬಾರದು. ಗುರಿಯನ್ನು ಮುಟ್ಟುವವರೆಗೆ ಪ್ರಯತ್ನ ಮಾಡಬೇಕು. ಧರ್ಮ ಮಾರ್ಗದಲ್ಲಿ ನಡೆಯಬೇಕು ಎಂದರು.

ಕೊಣ್ಣೂರ ಕಲ್ಯಾಣ ಹೊರಗಿನಮಠದ ಡಾ.ವಿಶ್ವಪ್ರಭುದೇವರು ಮಾತನಾಡಿ, ಅನಾಥಾಶ್ರಮ ಮತ್ತು ವೃದ್ಧಾಶ್ರಮಗಳು ಹೆಚ್ಚಾದಂತೆ ಮಕ್ಕಳ ಮನಸ್ಸಿನಲ್ಲಿ ತಂದೆ–ತಾಯಿಗಳನ್ನು ವೃದ್ಧಾಶ್ರಮಕ್ಕೆ



ಬಿಡಬೇಕು ಎಂಬ ಆಸೆ ಹುಟ್ಟುತ್ತದೆ. ಕಾರಣ ಅನಾಥಾಶ್ರಮ ಮತ್ತು ವೃದ್ಧಾಶ್ರಮಗಳು ಹೆಚ್ಚಾಗಬಾರದು. ಸಮಾಜವನ್ನು ತಿದ್ದುವರು ಸುಮ್ಮನೆ ಇದ್ದಾಗ ಸಮಾಜ ಹದಗೆಡುತ್ತದೆ. ತಾಯಿಯನ್ನು ಗುರುವಿಗೆ ಹೋಲಿಸಲಾಗಿದ್ದು, ತಾಯಿಯನ್ನು ಪ್ರೀತಿಸಿ, ಗೌರವಿಸಬೇಕು ಎಂದರು.

ಓಲೆಮಠದ ಪ.ಪೂ. ಆನಂದದೇವರು ಮಾತನಾಡಿ, ತಾಯಿಗಿಂತ ಜಗತ್ತಿನಲ್ಲಿ ದೊಡ್ಡವರಾರಿಲ್ಲ. ತಂದೆ–ತಾಯಿ ಪ್ರೀತಿಸಿದೇ ಗೌರವಿಸದೇ ಕಾಶಿ ಯಾತ್ರೆ ಮಾಡಿದರು ಯಾವುದೇ ಫಲವಿಲ್ಲ. ನಿಜವಾದ ದೇವರು ತಂದೆ–ತಾಯಿ ಪಾದಗಳಲ್ಲಿ ಇದ್ದಾನೆ. ಒಳ್ಳೆಯದನ್ನು ಮಾಡಿದವರಿಗೆ ಒಳ್ಳೆಯದೇ ಆಗುತ್ತೆ, ಕೆಟ್ಟದ್ದನ್ನು ಮಾಡಿದವರಿಗೆ ಕರ್ಮ ಅವರನ್ನು ಬಿಡುವುದಿಲ್ಲ ಎಂದರು.

ಓಂಶಾಂತಿ ಆಶ್ರಮದ ರಾಜಯೋಗಿನಿ ಜ್ಯೋತಿ ಅಕ್ಕನವರು ಮಾತನಾಡಿ, ತ್ಯಾಗ ಸಹನೆ ಎಂದರೆ ತಾಯಿ. ತಂದೆ–ತಾಯಿ ಮಕ್ಕಳಿಗೆ ಸಂಸ್ಕಾರ ಕೊಡದಿದ್ದರೆ ಜೀವನಪೂರ್ತಿ ಅಳಬೇಕಾಗುತ್ತದೆ. ತಾಯಿ ಪ್ರೀತಿಯನ್ನು ಹೋಲಿಕೆ ಮಾಡಲು ಸಾಧ್ಯವಿಲ್ಲ. ಮನುಷ್ಯ ಹುಟ್ಟಿದ ಮೇಲೆ ಹಿರಿಯರಿಗೆ ಗೌರವ ಕೊಡಬೇಕು. ಮನುಷ್ಯನ ಶರೀರದಿಂದ ಆಧ್ಯಾತ್ಮ ಬೇಕಾದ್ದನ್ನು ನೀಡುತ್ತದೆ, ಬೇಡವಾದದ್ದನ್ನು ತೆಗೆದುಹಾಕುತ್ತದೆ. ಚಿಂತನೆಯಿದ್ದಲ್ಲಿ ಚಿಂತೆಯಿಲ್ಲ, ಚಿಂತೆ ಇದ್ದವರಿಗೆ ಚಿಂತನೆ ಸಿಗುವುದಿಲ್ಲ ಎಂದರು.

ವಿಜಯಪುರದ ರಾಷ್ಟ್ರಪಿತ ಮಹಾತ್ಮ ಗಾಂಧಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ನೇತಾಜಿ ಗಾಂಧಿ ಉದ್ಘಾಟಿಸಿದರು. ನ್ಯಾಯವಾದಿ ಸಂಘದ ಮಾಜಿ ಅಧ್ಯಕ್ಷ ಎಸ್.ಆರ್.ಕಾಡಗಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ರಾಚಮ್ಮ ನೀಲಕಂಠ ಅಥರ್ಗಾ, ಮೇಘ ಮೈತ್ರಿ ಕನ್ನಡ ಸಂಘ ಕಮತಗಿ ಅಧ್ಯಕ್ಷ ರಮೇಶ ಕಮತಗಿ, ತಾಲೂಕು ಪತ್ರಕರ್ತರ ಸಾಂಸ್ಕೃತಿಕ ಬಳಗ ಅಧ್ಯಕ್ಷ ಮಲ್ಲೇಶ ಆಳಗಿ, ಉಮೇಶ ಅಥರ್ಗಾ, ಲಕ್ಷ್ಮಿಕಾಂತ ದುದಗಿ, ಶಶಿಕಾಂತ ತೇರದಾಳ, ಕೃಷ್ಣಾ ಕೊಹಳ್ಳಿ, ಜಯಶ್ರೀ ಅರಗೆ ಇದ್ದರು.

## ಉಚಿತ ತರಬೇತಿಗೆ ಅರ್ಜಿ ಆಹ್ವಾನ

**ಕಾರವಾರ:** ಕೆನರಾ ಬ್ಯಾಂಕ್ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಬ್ಯೂಟಿ ಪಾರ್ಲರ್ ಕುರಿತ 30 ದಿನಗಳ ಉಚಿತ ತರಬೇತಿಯು ನವೆಂಬರ್ 4 ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.


ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9481506564, 9113880324, 08027728166 ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲೂಕು ಮಟ್ಟದ ವಾಲ್ಮೀಕಿ ಜಯಂತಿ

**ಕಾರವಾರ:** ತಾಲೂಕಾ ಆಡಳಿತ, ತಾಲೂಕ ಪಂಚಾಯತ್, ಪುರಸಭೆ ಭಟ್ಕಳ, ಪಟ್ಟಣ ಪಂಚಾಯತ ಜಾಲಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಭಟ್ಕಳ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯನ್ನು ಅ.7 ರಂದು ಬೆಳಗ್ಗೆ 10.30 ಗಂಟೆಗೆ ಭಟ್ಕಳದ ಅರ್ಬನ್ ಬ್ಯಾಂಕ್ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಮೀನುಗಾರಿಕೆ ಮತ್ತು ಬಂದರು, ಒಳನಾಡು ಜಲಸಾರಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್.ವೈದ್ಯ ಉದ್ಘಾಟಿಸಲಿದ್ದು, ಭಟ್ಕಳ ಪುರಸಭೆ ಅಧ್ಯಕ್ಷ ಅಲ್ತಾಫ್ ಖರೂರಿ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ಭಟ್ಕಳ ಉಪವಿಭಾಗಾಧಿಕಾರಿ ಕಾವ್ಯಾರಾಣಿ ಕೆ.ವಿ, ಜಾಲಿ ಪಟ್ಟಣ ಪಂಚಾಯತಿ ಅಧ್ಯಕ್ಷೆ ಖಾಜೀಯಾ ಆಫ್ಸಾ ಹುಜೈಫಾ, ಭಟ್ಕಳ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ರಾಜು ಮಂಜಪ್ಪ ನಾಯ್ಕ, ಭಟ್ಕಳ ಉಪ ವಿಭಾಗದ ಪೋಲೀಸ್ ಉಪ ಅಧೀಕ್ಷಕ ಮಹೇಶ ಎಮ್. ಕೆ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.




## ಸಮೀಕ್ಷೆಯನ್ನು ವೇಗವಾಗಿ ಮುಗಿಸಿದ ಶಿಕ್ಷಕರಿಗೆ ಗೌರವ ಸನ್ಮಾನ

**ಮುದ್ದೇಬಿಹಾಳ:** ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ವೇಗವಾಗಿ ಮುಗಿಸಿದ ಪ್ರಯುಕ್ತ ಶಿಕ್ಷಕಿಯರುಗಳಾದ ನೇತ್ರಾವತಿ ಸಂತೋಷ ನಡಗೇರಿ (ನೇತ್ರಾವತಿ ಅವನಿ) ಮತ್ತು ಬಿ.ಜಿ.ಪಟ್ಟಣಶೆಟ್ಟಿ ಅವರನ್ನು ಇಲ್ಲಿನ ತಹಸೀಲ್ದಾರ ಕಚೇರಿಯಲ್ಲಿ ತಹಸೀಲ್ದಾರ ಕೀರ್ತಿ ಚಾಲಕ ಅವರು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಬಿ ಎಸ್ ಸಾವಳಗಿ, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಚ್. ಮುದ್ನೂರ, ಇಸಿಓ ಗಳಾದ ಪಿ.ಎ.ಬಾಳಿಕಾಯಿ, ಡಿ.ವಾಯ್.ಗುರಿಕಾರ, ಎ.ಬಿ.ಬಗಲಿ, ಎಂ,ಕೆ,ಬಾಗವಾನ, ಬಿಆರ್‌ಪಿಗಳಾದ ಎಸ್.ಎಸ್. ರಾಮಥಾಳ, ಎಂ.ಬಿ.ಗುಡಗುಂಟಿ, ಮೇಲ್ವಿಚಾರಕ ಆರ್.ಎಸ್.ಹಿರೇಮಠ, ವಿ.ಬಿ.ನಾಗೂರ, ಬಸವರಾಜ ಮಾದರ, ತಾಲೂಕು ಪಂಚಾಯತ್ ನ ಪ್ರಭಾರ ಇ.ಓ ವೆಂಕಟೇಶ ವಂದಾಲ, ಖೂಬಾಸಿಂಗ್ ಜಾಧವ, ಹಿಂದುಳಿದ ವರ್ಗಗಳ ಇಲಾಖೆಯ ಸಿಬ್ಬಂದಿಗಳಾದ ವೀರಭದ್ರಪ್ಪ ಮೋರ್ಕಿ, ಎ.ಡಿ.ಸಾಹುಕಾರ, ರಮೇಶ ಭಜಂತ್ರಿ, ಭೀಮಶಿ ಗುಂಡಿಮನಿ ಸೇರಿದಂತೆ ಉಪಸ್ಥಿತರಿದ್ದರು.

## 6ದಿನಗಳ ವಿಶೇಷ ತರಬೇತಿ

**ಧಾರವಾಡ:** ಕೃಷಿ ಯಂತ್ರೋಪಕರಣ ದುರಸ್ತಿ ಮತ್ತು ನಿರ್ವಹಣೆ ಕುರಿತು ಆರು ದಿನಗಳ ವಿಶೇಷ ತರಬೇತಿ ಕಾರ್ಯಕ್ರಮವನ್ನು ಸಪ್ಟೆಂಬರ 22, 2025 ರಿಂದ ಸಪ್ಟೆಂಬರ 27, 2025 ವರೆಗೆ ಧಾರವಾಡ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಧಾರವಾಡದ ಉಪ ಕೃಷಿ ನಿರ್ದೇಶಕಿ ಜಯಶ್ರೀ ಹಿರೇಮಠ ಅವರು ಮಾತನಾಡಿ, ಕೃಷಿ ಯಂತ್ರೋಪಕರಣಗಳು (ಟ್ರಾಕ್ಟರ್, ಪವರ್‌ಟಿಲ್ಲರ್, ಬೀಜ ಬಿತ್ತುವ ಯಂತ್ರ, ಪಂಪ್ಸೆಟ್, ಕೊಯ್ಲು ಯಂತ್ರ, ಡ್ರೋಣ್ ಇತ್ಯಾದಿ) ರೈತರ ದಿನನಿತ್ಯದ ಕೃಷಿ ಕಾರ್ಯಗಳಲ್ಲಿ ಪ್ರಮುಖ ಪಾತ್ರವಹಿಸುತ್ತವೆ. ಇವು ದೀರ್ಘಾವಧಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಸರಿಯಾದ ನಿರ್ವಹಣೆ ಮತ್ತು ನಿಯಮಿತ ದುರಸ್ತಿ ಅತ್ಯಗತ್ಯ ಎಂದು ಅವರು ಮಾಹಿತಿ ನೀಡಿದರು.

ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಮುಖ್ಯಸ್ಥೆ ಸುಷ್ಮಾ ಮಳಿಮಠ ಅವರು ಮಾತನಾಡಿ, ಕೃಷಿ ಯಂತ್ರೋಪಕರಣಗಳ ನಿಯಮಿತ ನಿರ್ವಹಣೆಯಿಂದ ಯಂತ್ರಗಳ ಆಯುಷ್ಯ ಹೆಚ್ಚಿಸಬಹುದು, ತುರ್ತು ಸಂದರ್ಭಗಳಲ್ಲಿ ಸಣ್ಣಪುಟ್ಟ ದುರಸ್ತಿ ತಾವು ಮಾಡಿಕೊಳ್ಳುವ ಸಾಮರ್ಥ್ಯ ಬೆಳೆಸಿ ಕೊಳ್ಳಬೇಕು ಹಾಗೂ ಯಂತ್ರಗಳ ಬಳಕೆ ವೇಳೆ ಸುರಕ್ಷತಾ ಕ್ರಮಗಳನ್ನು ಪಾಲಿಸಬೇಕು ಎಂದು ರೈತರಿಗೆ ಮನವರಿಕೆ ಮಾಡಿಕೊಟ್ಟರು.

ತರಬೇತಿ ಕಾರ್ಯಕ್ರಮದ ಅಂಗವಾಗಿ ಕೃಷಿ ವಿಶ್ವವಿದ್ಯಾಲಯದ ಮುಖ್ಯ ಕೃಷಿ ಸಂಶೋಧನಾ ಕೇಂದ್ರಕ್ಕೆ (ಒಂಖಖ) ಹಾಗೂ ಆಹಾರ ಸಂಸ್ಕರಣಾ ಘಟಕ್ಕೆ ಭೇಟಿ ನೀಡಿ, ವಿವಿಧ ಕೃಷಿ ಹಾಗೂ ಸಂಸ್ಕರಣಾ ಯಂತ್ರೋಪಕರಣಗಳ ಕಾರ್ಯ ವೈಖರಿ, ದುರಸ್ಥಿ ಹಾಗೂ ನಿರ್ವಹಣೆ ಕುರಿತು ಮಾಹಿತಿ ಪಡೆಯಲಾಯಿತು. ಸಪ್ಟೆಂಬರ 27, 2025 ರಂದು ಅಣ್ಣಿಗೇರಿಯ ನಡುಕಟ್ಟಿನ ಇವರ ವಿವಿಧ ಯಂತ್ರೋಪಕರಣಗಳ ತಯಾರಿಕಾ ಘಟಕ ಹಾಗೂ ಎಮ್.ಎಫ್.ದೇಸಾಯಿ ಕಂಪನಿ ಹುಬ್ಬಳ್ಳಿಗೆ ಭೇಟಿ ನೀಡಿ ಟ್ರಾಕ್ಟರ್‌ನ ವಿವಿಧ ಭಾಗಗಳ ದುರಸ್ಥಿ ಮತ್ತು ನಿರ್ವಹಣೆ ಕುರಿತು ಮಾಹಿತಿ ಪಡೆಯಲಾಯಿತು.

ತರಬೇತಿಯಲ್ಲಿ ಕೃಷಿ ಯಂತ್ರೋಪಕರಣಗಳ ದುರಸ್ತಿ ಮತ್ತು ನಿರ್ವಹಣೆಗೆ ನಿಯಮಿತ ಅಭ್ಯಾಸ ಮಾಡಿಕೊಂಡರೆ ಹೆಚ್ಚಿನಲಾಭವಾಗುತ್ತದೆ ಎಂಬುದನ್ನು ರೈತರು ಮನವರಿಕೆ ಮಾಡಿಕೊಂಡರು.

## ರಸ್ತೆಗಳಿಗೆ ಗುಂಡಿಗಳ ಕಾಟ: ವಾಹನ ಸವಾರರ ಪರದಾಟ

**ಯರಗಟ್ಟಿ:** ನಿರಂತರ ಹಿಂಗಾರು ಮಳೆಯ ಆರ್ಭಟ ತಾಲೂಕಿನಾದ್ಯಂತ ತುಂಬಾ ಅವಾಂತರಗಳನ್ನು ಸೃಷ್ಟಿಸಿದೆ. ಇಂಥಾ ಹೊತ್ತಲ್ಲಿ ರಸ್ತೆ ಗುಂಡಿಗಳ ಕಾಟವಂತೂ ವಿಪರೀತವಾಗಿದೆ. ರಸ್ತೆಯಲ್ಲಿ ಎಲ್ಲೆಂದರಲ್ಲಿ ನೀರು ನಿಲ್ಲುವ ಕಾರಣ, ರಸ್ತೆ ಎಲ್ಲಿದೆ? ಗುಂಡಿ ಎಲ್ಲಿದೆ ಅಂತಾ ಪತ್ತೆ ಮಾಡೋದೇ ದೊಡ್ಡ ಸಾಹಸ ಎಂಬಂತಾಗಿದೆ.

ಸವದತ್ತಿ ತಾಲೂಕಿನ (ಬೈಲಹೊಂಗಲ ವಿಧಾನ ಸಭಾ ಕ್ಷೇತ್ರದ) ಹಿರೇಬೂದನೂರ ಗ್ರಾಮದಿಂದ ಮಳಗಲಿ ಸಂಪರ್ಕಿಸುವ ತುಂಬಾ ಹದಗೆಟ್ಟಿದ್ದು ಗುಂಡಿಗಳ ಕಾಟ ದಿನನಿತ್ಯ ವಾಹನಗಳು ಸಂಚರಿಸುತ್ತವೆ ಆದರೆ ರಸ್ತೆ ಗುಂಡಿಗಳ ಕಾಟಕ್ಕೆ ವಾಹನ ಸವಾರರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

ದಿನನಿತ್ಯ ಸಾವಿರಾರು ವಿದ್ಯಾರ್ಥಿಗಳು ಹೆಚ್ಚಿನ ವಿದ್ಯಾಭ್ಯಾಸಕ್ಕಾ ಬೈಲಹೊಂಗಲ, ಮುರಗೋಡ, ಯರಗಟ್ಟಿ, ಸವದತ್ತಿಗೆ ಹೊಗಬೇಕಾದರೆ ಪರೆದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ವಾಹನ ಸವಾರರು ಹಾಗೂ ಗ್ರಾಮಸ್ಥರು ತಮ್ಮ ಅಳಲನ್ನು ತೋಡಿಕೊಂಡರು.



> ರಸ್ತೆ ದುರಸ್ತೆ ಮಾಡುವಂತೆ ಸಂಬಂಧ ಪಟ್ಟ ಅಧಿಕಾರಿಗಳಿಗೆ ಮತ್ತು ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಿದರು ಯಾವುದೇ ಪ್ರಯೋಜನವಾಗಿಲ್ಲ. ಲೋಕೋಪಯೋಗಿ ಇಲಾಖೆ ಸಚಿವರು ಕಣ್ಣು ಮುಚ್ಚಿ ಕುಳಿತಿದ್ದಾರೆ ತವರು ಜಿಲ್ಲೆಯಲ್ಲಿ ಪರಿಶಿಸ್ತಿ ಹಿಗಾದರೆ ರಾಜ್ಯದಲ್ಲಿ ಹೇಗೆ ಕಾಣಬಹುದು.
> 
> **ರಾಘವೇಂದ್ರ ರುದ್ರಪ್ಪನವರ, ಮಳಗಲಿ ಗ್ರಾಮದ ನಿವಾಸಿ**

ಹಲವಾರು ಬಾರಿ ಲೋಕೋಪಯೋಗಿ ಇಲಾಖೆ ಅಧಿಕಾರಿಗಳ ಮತ್ತು ಜನಪ್ರತಿನಿಧಿಗಳ ಗಮನಕ್ಕೆ ತಂದಿದ್ದರು ಕ್ಯಾರೇ ಎನ್ನದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ ಎಂದು ವಾಹನ ಸವಾರರು ಆಗ್ರಹಿಸಿದ್ದಾರೆ.

> ತಡಸಲೂರ ಗ್ರಾಮದಿಂದ ಮಳಗಲಿ ಗ್ರಾಮದವರೆ ರಸ್ತೆ ಕಾಮಗಾರಿಗೆ ಅನುಮೋದನೆ ಸಿಕ್ಕಿದ್ದು ಶೀಘ್ರದಲ್ಲಿ ಕಾಮಗಾರಿ ಪ್ರಾರಂಭಿಸಲಾಗುವುದು.
> 
> **ಮಹಾಂತೇಶ ಕೌಜಲಗಿ, ಶಾಸಕರು, ಬೈಲಹೊಂಗಲ.**

> ತಡಸಲೂರ ಗ್ರಾಮದಿಂದ ಮಳಗಲಿ ಗ್ರಾಮದವರೆ ರಸ್ತೆ ಕಾಮಗಾರಿಗೆ ಅನುಮೋದನೆ ಸಿಕ್ಕಿದ್ದು ಕಾಮಗಾರಿ ಅಂದಾಜು ಪತ್ರಿಕೆಯನ್ನ ತಯಾರಿಸಲಾಗುತ್ತದೆ ಹಾಗೂ ಹಿರೇಬೂನೂರ ಗ್ರಾಮದಿಂದ ಮಳಗಲಿ ಗ್ರಾಮದ ಗ್ರಾಮೀಣ ರಸ್ತೆಯಿಂದ ಜಿಲ್ಲಾ ಮುಖ್ಯ ರಸ್ತೆಯಾಗಿ ಮೇಲ್ದರ್ಜೆಗೆರಿಸಲ್ಲಾದ್ದು ಅನುದಾನ ಅವಶ್ಯಕತೆ ಇದ್ದು ಅನುದಾನ ಬಿಡುಗಡೆ ಹಂತದಲ್ಲಿದ್ದು ಕೂಡಲೇ ಕಾಮಗಾರಿ ಪ್ರಾರಂಭಿಸಲಾಗುವುದು.
> 
> **ಅನೀಲ ಎಂ. ಪಿಡಬ್ಲೂಡಿ ಎಇಇ, ಬೈಲಹೊಂಗಲ**

## ಡಾ.ದ.ರಾ.ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ್
## ಸಂಗೀತ, ನೃತ್ಯ ಕಾರ್ಯಕ್ರಮ

**ಧಾರವಾಡ:** ಧಾರವಾಡ ಡಾ.ದ.ರಾ.ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ್‌ವತಿಯಿಂದ ಅಕ್ಟೋಬರ್ 05, 2025 ರಂದು ಸಂಜೆ 5 ಗಂಟೆಗೆ ಧಾರವಾಡ ಸಾಧನಕೇರಿ ಹತ್ತಿರದ ಡಾ.ದ.ರಾ.ಬೇಂದ್ರೆ ಭವನದಲ್ಲಿ ವಿಶೇಷ ಉಪನ್ಯಾಸ, ಸಂಗೀತ ಮತ್ತು ನೃತ್ಯ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸಾಹಿತಿ ಡಾ. ಕೃಷ್ಣ ಕಟ್ಟಿ ಅವರು ಬೇಂದ್ರೆಯವರ ಕಾವ್ಯದಲ್ಲಿ ಮಾತೃಕೆಯರು ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡುವರು. ಟ್ರಸ್ಟ್ ಅಧ್ಯಕ್ಷ ಡಾ. ಸರಜೂ ಕಾಟ್ಕರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ನಾದಸುರಭಿ ಸಾಂಸ್ಕೃತಿಕ ಅಕಾಡೆಮಿಯ ಡಾ. ಜ್ಯೋತಿಲಕ್ಷ್ಮೀ ಕೂಡ್ಲಿಗಿ ಮತ್ತು ವೃಂದದವರು ಡಾ.ದ.ರಾ.ಬೇಂದ್ರೆಯವರ ಗೀತೆಗಳ ಗಾಯನ ಪ್ರಸ್ತುತ ಪಡಿಸುವರು. ಭರತ ನೃತ್ಯ ಅಕಾಡೆಮಿಯ ವಿದ್ವಾನ್ ರಾಜೇಂದ್ರ ಟೋಣಪಿ ಮತ್ತು ತಂಡದವರು ಬೇಂದ್ರೆಯವರ ಗೀತೆಗಳಿಗೆ ನೃತ್ಯ ಕಾರ್ಯಕ್ರಮ ನೀಡುವರು. ಕಾರ್ಯಕ್ರಮದಲ್ಲಿ ಟ್ರಸ್ಟ್ ಸದಸ್ಯರು ಹಾಗೂ ಹಿರಿಯ ಸಾಹಿತಿಗಳು ಭಾಗವಹಿಸುವರು ಎಂದು ಡಾ.ದ.ರಾ.ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ್‌ನ ಸದಸ್ಯ ಕಾರ್ಯದರ್ಶಿ ಕುಮಾರ ಬೆಕ್ಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮದ್ಯಮಾರಾಟ ನಿಷೇಧ ಆದೇಶ

**ಹಾವೇರಿ:** ಹಾವೇರಿ ಜಿಲ್ಲೆಯಲ್ಲಿ ಗಣೇಶ ಹಬ್ಬದ ನಿಮಿತ್ಯ ಶಾಂತಿ ಸುವ್ಯವಸ್ಥೆ ಸಲುವಾಗಿ ರಾಣೇಬೆನ್ನೂರ ಶಹರದಲ್ಲಿ ಅ.4ರ ಬೆಳಿಗ್ಗೆ 6 ರಿಂದ ಅ.5ರ ಬೆಳಿಗ್ಗೆ 6ರವರಗೆ ಹಾಗೂ ಅ.8ರ ಬೆಳಿಗ್ಗೆ 6 ರಿಂದ ಅ.9ರ ಬೆಳಿಗ್ಗೆ 6ರವರೆಗೆ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಆದೇಶ ಹೊರಿಡಿಸಿದ್ದಾರೆ.



## ತ್ಯಾಜ್ಯ ನಿರ್ವಹಣೆ ಉಪಕರಣ ಅನಾವರಣ

**ಯರಗಟ್ಟಿ:** ಸಮೀಪದ ಆಲದಕಟ್ಟಿ ಕೆ.ಎಂ. ಗ್ರಾಮದಲ್ಲಿ ಗುರುವಾರ ಅತ್ಯಾಧುನಿಕ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ಉಪಕರಣ ಅನಾವರಣಗೊಳಿಸಿ ಮಾತನಾಡಿ, ಸರ್ಕಾರ ವಿವಿಧ ಯೋಜನೆಗಳ ಮೂಲಕ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸುತ್ತಿದೆ ಎಂದರು.

ಸವದತ್ತಿ ವಿಧಾನಸಭಾ ಕ್ಷೇತ್ರದ ಜನತೆಗೆ ಕುಡಿಯುವ ನೀರು, ರಸ್ತೆ, ಮೂಲಸೌಕರ್ಯಗಳು ಸೇರಿ ವಿವಿಧ ಅಭಿವೃದ್ಧಿ ಕೆಲಸ ಕೈಗೊಳ್ಳುವ ಮೂಲಕ ರಾಜ್ಯದಲ್ಲೇ ಮಾದರಿ ಮಾಡಲಾಗುವುದು ಎಂದು ಶಾಸಕ ವಿಶ್ವಾಸ ವೈದ್ಯ ಹೇಳಿದರು.

ಅತ್ಯಾಧುನಿಕ ಪ್ಲಾಸ್ಟಿಕ್ ತ್ಯಾಜ್ಯ ಘಟಕ ಸದ್ಬಳಕೆಯಿಂದ ಗ್ರಾಪಂ ಆದಾಯವೂ ವೃದ್ಧಿಯಾಗಲಿದೆ. ಮುಂದೆ ಆಲದಕಟ್ಟಿ ಕೆ.ಎಂ. ಗ್ರಾಮವು ರಾಜ್ಯಕ್ಕೆ ಮಾದರಿಯಾದ ಸ್ವಚ್ಛ ಮತ್ತು ಸುಂದರ ಗ್ರಾಮವಾಗಿ ಹೊರಹೊಮ್ಮಲಿದೆ ಎಂದರು.

ಈ ವೇಳೆ ತಾ.ಪಂ. ಇಓ ಆನಂದ ಬಡಕುಂದ್ರಿ, ಆರ್. ಡೆಬ್ಲೂ. ಎಸ್. ಎಇಇ ಬಸವರಾಜ ಅಯ್ಯನಗೌಡ್ರ, ಗ್ರಾಪಂ ಅಧ್ಯಕ್ಷೆ ಪ್ರೇಮಾ ಢಮ್ಮಣಗಿ, ಉಪಾಧ್ಯಕ್ಷೆ ಶೋಭಾ ಮಾದರ, ಸದಸ್ಯರಾದ ಅಶೋಕ ಚಿಕ್ಕೊಪ್ಪ, ಫಕೀರಪ್ಪ ಸಣ್ಣಗೌಡರ, ಪ್ರಭಾವತಿ ಗುರನಗೌಡರ, ಜಾನವ್ವ ಆಡಿನ, ಸುರೇಶ ಮುಗಳಿ, ಕೆಎಂಎಫ್ ನಿರ್ದೇಶಕ ಶಂಕರ ಇಟ್ನಾಳ ಎಪಿಎಂಸಿ ಅಧ್ಯಕ್ಷ ನೀಲಕಂಠ ಸಿದ್ದಬಸನ್ನವರ, ಕಾಂಗ್ರೆಸ್ ಮುಖಂಡ ವಿಠ್ಠಲ ದೇವರಡ್ಡಿ, ಪ್ರಕಾಶ ವಾಲಿ, ವಿಠ್ಠಲ ಬಂಟನೂರ, ನಿಖಿಲ ಪಾಟೀಲ, ಪ್ರಭು ಪ್ರಭುನವರ್, ಶಿವಪ್ಪ ಗುರನಗೌಡ್ರ, ಪಿಡಿಓ ಎಚ್. ಕೆ. ಚೌರಡ್ಡಿ, ರಾಜಶೇಖರ್ ಅಣ್ಣಿಗೇರಿ, ಶುಭಾನಿ ಕುದರಿ, ಬಸನಾಯ್ಕ ಚಿಕಾಕಿ ಅಧಿಕಾರಿಗಳು, ಕಾರ್ಯಕರ್ತರು ಗ್ರಾಪಂ ಸಿಬ್ಬಂದಿ ಇತರರಿದ್ದರು.

## ಗದುಗಿನ ದಸರಾ ಮೈಸೂರನ್ನು ನೆನಪಿಸುವಂತಿದೆ

**ಗದಗ:** ಐತಿಹಾಸಿಕ ನಾಡಹಬ್ಬವಾದ ದಸರಾ ಉತ್ಸವ ಗದುಗಿನಲ್ಲಿ ಎಸ್‌ಎಸ್‌ಕೆ ಸಮಾಜದಿಂದ ಅದ್ದೂರಿಯಾಗಿ ಆಚರಿಸುತ್ತಿರುವುದು ನೋಡಿದರೆ ಮೈಸೂರ ದಸರಾ ಉತ್ಸವವೆ ಕಣ್ಮುಂದೆ ಬಂದಂತಾಯಿತು ಎಂದು ಎಸ್‌ಬಿಐನ ಪ್ರಾದೇಶಿಕ ಕಚೇರಿಯ ಅಧಿಕಾರಿ ಎ. ನಾಗರಾಜ ಅವರು ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ ಉತ್ಸವ –2025 ರ ವಿಜಯದಶಮಿಯ ದಿನದಂದು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು ಇಂದಿನ ಒತ್ತಡದ ಬದುಕಿನಲ್ಲಿ ನೆಮ್ಮದಿ, ಸುಖ, ಶಾಂತಿ ದೂರವಾಗುತ್ತಿರುವ ಸಂದರ್ಭದಲ್ಲಿ ಒತ್ತಡ ರಹಿತ ಬದುಕಿಗಾಗಿ ತಾಯಿ ಜಗನ್ಮಾತೆಯ ಧ್ಯಾನಿಸುವದು ಅಗತ್ಯವಾಗಿದೆ ಎಂದು ಹೇಳಿದರು. ಇನ್ನೋರ್ವ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮುಳಗುಂದನಾಕಾದ ಎಸ್‌ಬಿಐನ ವ್ಯವಸ್ಥಾಪಕರಾದ ಲೋಕೇಶ ಜಿ.ಎಸ್. ಅವರು ಸಾಂದರ್ಭಿಕವಾಗಿ ಮಾತನಾಡಿದರು. ಪಂಚ ಕಮಿಟಿಯ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಎಸ್‌ಎಸ್‌ಕೆ ಸಮಾಜದಿಂದ ಕಳೆದ ಎರಡು ದಶಕಗಳಿಂದ ದಸರಾ ದರ್ಬಾರವನ್ನು ಅದ್ದೂರಿಯಾಗಿ ಆಚರಿಸಿಕೊಂಡು ಬರುತ್ತಿದೆ. ಅದರಂತೆ ಈ ಬಾರಿ ಸಮಾಜ ಬಾಂಧವರ ಸಹಕಾರದಿಂದ ಧಾರ್ಮಿಕ ಕಾರ್ಯಕ್ರಮಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಪ್ರಸಾದ ಸೇವೆ, ದಾನಿಗಳಿಗೆ ಸನ್ಮಾನ ಕಾರ್ಯಕ್ರಮ ಸೇರಿದಂತೆ ಇತರೆ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯಲು ಎಲ್ಲರ ಸಹಕಾರ ಪ್ರಮುಖ ಕಾರಣವಾಗಿದೆ ಎಂದು ಹೇಳಿದರು.

ಎಸ್‌ಎಸ್‌ಕೆ ಸಮಾಜದ ಪಂಚ ಕಮೀಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಅಧ್ಯಕ್ಷತೆ ವಹಿಸಿದ್ದರು.
ವೇದಿಕೆ ಮೇಲೆ ಉಪಾಧ್ಯಕ್ಷ ರಾಜು ಬದಿ, ರವಿ ಶಿದ್ಲಿಂಗ, ಪರಶುರಾಮ ಬದಿ ಉಪಸ್ಥಿತರಿದ್ದರು.

ಪಂಚ ಕಮೀಟಿ ಸದಸ್ಯರಾದ ಸುರೇಶಕುಮಾರ ಬದಿ, ಬಲರಾಮ ಬಸವಾ, ಮಾರುತಿ ಪವಾರ, ಮೋತಿಲಾಲಸಾ ಪೂಜಾರಿ, ಪ್ರಕಾಶ ಬಾಕಳೆ, ಅಂಬಾಸಾ ಖಟವಟೆ, ತರುಣ ಸಂಘದ ರಾಘು ಬಾರಡ, ಶ್ರೀಕಾಂತ ಬಾಕಳೆ, ಶ್ರೀಕಾಂತ ಅರಸಿದ್ದಿ, ಜಗದೀಶ ಪವಾರ, ನಾಗರಾಜ ಖೋಡೆ, ಉಮಾಬಾಯಿ ಬೇವಿನಕಟ್ಟಿ, ಗೀತಾಬಾಯಿ ಹಬೀಬ ಸೇರಿದಂತೆ ಮುಂತಾದವರಿದ್ದರು.



## ಶಾಂತಿಯುತವಾಗಿ ಆರ್‌ಎಸ್‌ಎಸ್ ಪಥಸಂಚಲನ ಆಚರಿಸಿ

**ಬಾಗಲಕೋಟೆ:** ಅಕ್ಟೋಬರ 5 ರಂದು ಬಾಗಲಕೋಟೆ ನಗರದಲ್ಲಿ ಜರುಗಲಿರುವ ಆರ್. ಎಸ್.ಎಸ್. ಪಥ ಸಂಚಲನವನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸುವಂತೆ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಕರೆ ನೀಡಿದರು.

ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಈ ಕುರಿತು ಜರುಗಿದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ನಗರದಲ್ಲಿ ವ್ಯಕ್ತಿಗತವಾಗಿ ಯಾರ ಭಾವನೆಗೂ ಧಕ್ಕೆ ತರುವಂತ ಹಾಗೂ ಕೋಮು ಸೌಹಾರ್ದತೆ ಕದಡುವ ಘೋಷಣೆ ಹಾಗೂ ಭಾವಚಿತ್ರವುಳ್ಳ ಬಂಟಿಂಗ್ಸ್, ಬ್ಯಾನರ್‌ಗಳನ್ನು ಹಾಕದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಆರ್.ಎಸ್.ಎಸ್ ಒಂದು ಶಿಸ್ತಿನ ಸಂಘವಾಗಿದ್ದು, ಶಿಸ್ತಿನಿಂದಲೇ ಪಥಸಂಚಲವನ್ನು ಉತ್ಸವದಂತೆ ಆಚರಿಸಿ, ಸಂಭ್ರಮ ತರುವ ಕೆಲಸವಾಗಬೇಕು ಎಂದರು. ಸಂಚಲನದ ಹಿಂದೆ ಹಾಗೂ ಮುಂದೆ ಸಂಘದ ಪ್ರಮುಖ ಸ್ವಯಂ ಸೇವಕರು ಶಾಂತಿ ಕಾಪಾಡಲು ನಿಗಾ ವಹಿಸುವ ಜವಾಬ್ದಾರಿ ಹೊರಬೇಕೆಂದು ತಿಳಿಸಿದ ಅವರು ಪಥ ಸಂಚಲನದ ಮಾರ್ಗದಲ್ಲಿ ಸ್ವಚ್ಛತೆ ಜೊತೆ ರಸ್ತೆಯಲ್ಲಿಯೂ ತಗ್ಗುದಿನ್ನೆ ಮುಚ್ಚುವಂತೆ ಹಾಗೂ ಕಡ್ಡಾಯವಾಗಿ ವಿದ್ಯುತ್ ಸಂಪರ್ಕ ಕಡಿತಗೊಳ್ಳದಂತೆ ನೋಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ ಮಾತನಾಡಿ ಬಾಗಲಕೋಟೆ ನಗರದಲ್ಲಿ ಈ ಬಾರಿಯು ಆರ್.ಎಸ್.ಎಸ್ ಪಥ ಸಂಚಲನವನ್ನು ಸೌಹಾರ್ದತೆಯಿಂದ ಆಚರಿಸುವಂತೆ ಕೋರಿದರು. ಜಿಲ್ಲೆಯ ಜನರು ಶಾಂತಿ–ಸೌಹಾರ್ದತೆಯಿಂದ ಆಚರಿಸಿ ಏಕತಾ ಮನೋಭಾವ ಮೆರೆಯಬೇಕೆಂದು ಕೋರಿದರು.

ಪಥ ಸಂಚಲನವು ಸಂಜೆ 4 ಗಂಟೆಗೆ ಪ್ರತ್ಯೇಕ ಎರಡು ಮಾರ್ಗದಲ್ಲಿ ಸಂಚರಿಸಿ, ಕೊನೆಗೆ ಶ್ರೀ ಬಸವೇಶ್ವರ ಮಹಾವಿದ್ಯಾಲಯದ ಮೈದಾನದಲ್ಲಿ ಸೇರಲಿದೆ. ಡಿವಾಯ್‌ಎಸ್ಪಿ ಗಜಾನನ ಸುತಾರ, ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರ, ನಗರಸಭೆ ಪೌರಾಯುಕ್ತ ವಾಸಣ್ಣ ಆರ್, ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ಶಾಂತಿ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

## ಸಮೀಕ್ಷೆ ಪೂರ್ಣ: ಶಿಕ್ಷಕ ಗುಡೇನಕಟ್ಟಿಗೆ ಸನ್ಮಾನ

**ಧಾರವಾಡ:** ನಿಗದಿತ ಅವಧಿಗಿಂತ ಮುಂಚಿತವಾಗಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ಕಾರ್ಯವನ್ನು ಗಣತಿದಾರರಾದ ಪಿ.ಎಫ್. ಗುಡೇನಕಟ್ಟಿ ಇವರು ವಾರ್ಡ್ ನಂ. 7 ರ 129 ಮನೆಗಳ ಗುರಿ ನೀಡಲಾಗಿತ್ತು. ಅದರಂತೆ ಮಹಾವೀರ ನಗರ, ರಾಮರಹೀಮ್ ಕಾಲನಿಯ ಕರವೀರ ಕಾಲನಿ, ಆಜಾದ ಕಾಲನಿ, ಸಾಯಿ ಲೇಔಟ್, ಚರಂತಿಮಠ ಗಾರ್ಡನ್ ಹತ್ತಿರದ ಬ್ಲಾಕ್‌ನಲ್ಲಿ ಒಟ್ಟು 134 ಮನೆಗಳ ಗಣತಿಯನ್ನು ಪೂರ್ಣಗೊಳಿಸಿ, ಶೇ.100 ರಷ್ಟು ಸಾಧನೆ ಮಾಡಿದ್ದಾರೆ. ಇವರನ್ನು ಶುಕ್ರವಾರ ಮಧ್ಯಾಹ್ನ ಮಹಾನಗರಪಾಲಿಕೆ ಧಾರವಾಡದ ಅಮೃತಮಹೋತ್ಸವ ಸಭಾಂಗಣದಲ್ಲಿ ತಹಶೀಲ್ದಾರ್ ಡಾ.ಡಿ.ಎಚ್. ಹೂಗಾರ, ಪಾಲಿಕೆ ವಲಯ ಸಹಾಯಕ ಆಯುಕ್ತರಾದ ಶಂಕರ ಪಾಟೀಲ, ಬಿಇಓ ಅಶೋಕ ಸಿಂದಗಿ, ಸಮನ್ವಯಾಧಿಕಾರಿ ಮಂಜು ಅಡವೇರ್ ಹಾಗೂ ಮೇಲ್ವಿಚಾರಕರಾದ ಜಿ.ಬಿ. ಶೆಟ್ಟರ್, ಸುಮಿತಾ ಹಿರೇಮಠ, ಎಸ್.ಬಿ.ಅರಮನಿ, ಎಂ.ಆರ್. ಕಬ್ಬೇರ, ಮಹೇಶ ಬಾಳಗಿ, ಆಸಿಫ್ ಸವಣೂರ, ವಿ.ಎಂ. ಪಾಟೀಲ, ಇರ್ಫಾನ್ ಕವಲಗೇರಿ,ಇತರರು ಉಪಸ್ಥಿತರಿದ್ದರು.



## ಹಿರಿಯ ನಾಗರಿಕರ ದಿನ: ವೃದ್ಧಾಶ್ರಮಕ್ಕೆ ಭೇಟಿ




**ಕಾರವಾರ:** ಮೇರಾ ಯುವ ಭಾರತ (ನೆಹರು ಯುವ ಕೇಂದ್ರ) ಕಾರವಾರದ ವತಿಯಿಂದ ಅ.2 ರಂದು ಗಾಂಧಿ ಜಯಂತಿ ಹಾಗೂ ಹಿರಿಯ ನಾಗರಿಕರ ದಿನದ ಅಂಗವಾಗಿ ಕಾರವಾರ ತಾಲೂಕಿನ ಸಿದ್ದರ ಗ್ರಾಮದಲ್ಲಿರುವ ಸುರಭಿ ವೃದ್ಧಾಶ್ರಮಕ್ಕೆ ಮೇರಾ ಯುವ ಭಾರತದ (ನೆಹರು ಯುವ ಕೇಂದ್ರ) ಉಪನಿದೇಶಕ ಲೋಕೇಶಕುಮಾರ ಭೇಟಿ ನೀಡಿ ಹಿರಿಯರಿಗೆ ಹಣ್ಣು ಹಂಪಲುಗಳನ್ನು ವಿತರಿಸಿದರು.

ವೃದ್ಧಾಶ್ರಮದಲ್ಲಿ ಸುಮಾರು 36 ಮಂದಿ ಹಿರಿಯರು ಇದ್ದು, ವೃದ್ಧಾಶ್ರಮದಲ್ಲಿರುವ ಹಿರಿಯ ನಾಗರಿಕರ (ತಮ್ಮವರಿಂದ ಪರಿತ್ಯಕ್ತರಾದ) ಜೊತೆಯಲ್ಲಿ ಯುವಜನರು ತಮ್ಮನ್ನು ಪರಿಚಯಿಸಿಕೊಂಡು ಅವರ ಜೀವನದ ಕಥೆಯನ್ನು ಅಲಿಸಿ, ಅವರೊಂದಿಗೆ ಕೆರಮ್ ಆಟವಾಡಿದರು, ಹಿರಿಯರು ಹಾಡು ಹೇಳಿ ಯುವಜನರ ಜೊತೆಯಲ್ಲಿ ಕುಣಿದು ಮನರಂಜನೆಯನ್ನು ನೀಡಿದರು.

ಸರಕಾರಿ ಕಲಾ ಮತ್ತು ವಿಜ್ಞಾನ ಮಹಾವಿದ್ಯಾಲಯ ಕಾರವಾರ ಹಾಗೂ ಶಿವಾಜಿ ಬಿ ಎಡ್, ಮಹಾವಿದ್ಯಾಲಯ ಬಾಡ, ಕಾರವಾರ ಕಾಲೇಜಿನಿಂದ ಸುಮಾರು 16 ಯುವ ಮಿತ್ರರು (ಮೇರಾ ಯುವ ಭಾರತ ಕಾರ್ಯಕರ್ತರು) ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಸ್ವಸ್ತಿಕಾ ಮಹಾಲಕ್ಷ್ಮೀಕರ ಕಾರವಾರ ಇವರು ಹಿರಿಯರ ಮಾನಸಿಕ ಸ್ಥಿತಿಯನ್ನು ಸಮಾಲೋಚನೆ ಮಾಡಿದರು, ಸುರಭಿ ವೃದ್ಧಾಶ್ರಮದ ಅಡುಗೆಯವರಾದ ಜಾಹ್ನವಿ , ಉಷಾ ಮತ್ತು ವಿವೇಕ ರಾಣೆ ಶೋಶಿಯಲ್ ವರ್ಕರ ಇವರು ಸಹಕರಿಸಿದರು.

ಲೆಕ್ಕಾಧಿಕಾರಿ ಮೀರಾ ನಾಯ್ಕ, ಶಿವಂ ನಾಯ್ಕ, ಯುವ ನೀತಿ, ಜಿಲ್ಲಾ ಪಂಚಾಯತ ಕಾರವಾರ, ಶಿವಪ್ರಸಾದ, ಫಹದ, ಪರಮಾನಂದ, ಅಬ್ದುಲ, ಯಶೋದಾ ಮುಂತಾದವರು ಪಾಲ್ಗೊಂಡಿದ್ದರು.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ: ಹೆಸರು ನೋಂದಾಯಿಸಲು ಸೂಚನೆ

**ಕೊಪ್ಪಳ:** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ನಾಟಕ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ದಪಡಿಸಲಾಗುತ್ತಿದ್ದು, ಅರ್ಹ ಮತದಾರರಿಂದ ಹೆಸರು ನೋಂದಾಯಿಸಲು ಸೂಚಿಸಿದೆ.

ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಚುನಾವಣಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೊಪ್ಪಳ ಜಿಲ್ಲೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ಹಾಗೂ ವಿವಿಧ ಅಧಿಕಾರಿಗಳನ್ನು ಸಹಾಯಕ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ನಿಯೋಜಿತ ಅಧಿಕಾರಿಗಳನ್ನಾಗಿ ನೇಮಿಸಿರುತ್ತದೆ.

**ಅರ್ಹತಾ ದಿನಾಂಕ:** 01.11.2025 ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ನೂತನವಾಗಿ ಸಿದ್ದಪಡಿಸುವ ಕಾರ್ಯವು ಸೆಪ್ಟೆಂಬರ್ 30 ರಿಂದ ಪ್ರಾರಂಭವಾಗಿರುತ್ತದೆ. ಭಾರತ ಚುನಾವಣಾ ಆಯೋಗವು ದಿನಾಂಕ 12.09.2025 ರ ಪತ್ರದನ್ವಯ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಹೊಸದಾಗಿ ಸಿದ್ಧಪಡಿಸಲಾಗುತ್ತಿರುವುದರಿಂದ ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19 ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಾಗಿರುತ್ತದೆಂದು ನಿರ್ದೇಶನ ನೀಡಿರುತ್ತಾರೆ.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ದಪಡಿಸಿಕೊಳ್ಳಲು ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ. ಅರ್ಜಿ ನಮೂನೆ 19 ರಲ್ಲಿ ಅರ್ಜಿಯನ್ನು ಸ್ವೀಕರಿಸಲು ನವೆಂಬರ್ 6ರ ಗುರುವಾರ ಕೊನೆಯ ದಿನವಾಗಿದೆ. ಕರಡು ಮತದಾರರ ಪಟ್ಟಿಯನ್ನು ನವೆಂಬರ್ 25 ರ ಮಂಗಳವಾರದಂದು ಪ್ರಕಟಿಸಲಾಗುವುದು. ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ನವೆಂಬರ್ 25 ರಿಂದ ಡಿಸೆಂಬರ್ 10 ರವರೆಗೆ ಅವಕಾಶ ಕಲ್ಪಸಿದೆ. ಅಂತಿಮ ಮತದಾರರ ಪಟ್ಟಿಯನ್ನು ಡಿಸೆಂಬರ್ 30 ರಂದು ಪ್ರಕಟಿಸಲಾಗುವುದು.

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಅನುಸರಿಸುವುದು ಕಡ್ಡಾಯವಾಗಿದೆ. ಭಾರತದ ಪ್ರಜೆಯಾಗಿರುವ, ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025 ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ದಿಷ್ಟ ಪಡಿಸಿದಂತಹ ರಾಜ್ಯದೊಳಗಿನ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹರಾಗಿರುತ್ತಾರೆ. ಹಾಗೆಯೇ ನಿರ್ದಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಆಯಾ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ಲಭ್ಯವಿರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಗುಚ್ಚಗಳಲ್ಲಿ (ಬಲ್ಕ್) ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಮತದಾರರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬದ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸಿದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳತಕ್ಕದ್ದು.

ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದು. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1 ನೇ ನಂಬರ್ 2025 ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಟ 3 ವರ್ಷ ಬೋಧನಾ ವೃತಿಯಲ್ಲಿ ನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2 ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು.

ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತುಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಗುಚ್ಚಗಳಲ್ಲಿ (ಬಲ್ಕ್) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಆಯೋಗವು ಮುಂಬರುವ ದಿನಗಳಲ್ಲಿ ನಮೂನೆ 19 ರ ಅರ್ಜಿಗಳನ್ನು ERMS ನಲ್ಲಿ ಅಳವಡಿಸಲು ಉದ್ದೇಶಿಸಿದೆ.

ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಾರ್ಯಾಲಯದಲ್ಲಿ ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸತಕ್ಕದ್ದು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಈ ಮೂಲಕ ಎಲ್ಲಾ ಅರ್ಹ ಮತದಾರರಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳಾದ ಡಾ.ಸುರೇಶ ಬಿ.ಇಟ್ನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 7ರಂದು ವಾಲ್ಮೀಕಿ ಜಯಂತಿ ಆಚರಣೆ

**ಬಾಗಲಕೋಟೆ:** ಜಿಲ್ಲಾಡಳಿತ ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಬಾಗಲಕೋಟೆ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಸಮಾಜ ಮತ್ತು ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅಕ್ಟೋಬರ 7 ರಂದು ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಡಳಿತ ಭವನದಿಂದ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಗುತ್ತದೆ. ಮೆರವಣಿಗೆ ಎಲ್.ಐಸಿ ಕಚೇರಿ, ಎಸ್.ಪಿ ಕಚೇರಿ ಮುಖಾಂತರ ಮಹರ್ಷಿ ವಾಲ್ಮೀಕಿ ಭವನಕ್ಕೆ ಮುಕ್ತಾಯಗೊಳ್ಳಲಿದೆ. ನಂತರ 10 ಗಂಟೆಗೆ ವೇದಿಕೆ ಕಾರ್ಯಕ್ರಮ ವಾಲ್ಮೀಕಿ ಭವನದಲ್ಲಿ ನಡೆಯಲಿದ್ದು, ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ನವದೆಹಲಿಯ ಕರ್ನಾಟಕ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ವಿಧಾನ ಸಭೆ, ವಿಧಾನ ಪರಿಷತ್ ಶಾಸಕರು, ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ಧಾರವಾಡ ವಿದ್ಯಾರಣ್ಯ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಶರಣಮ್ಮ ಗೊರೇಬಾಳ ಉಪನ್ಯಾಸ ನೀಡಲಿದ್ದಾರೆ.

## 9ರಂದು ಮಕ್ಕಳಿಗಾಗಿ ವಿವಿಧ ಸ್ಪರ್ಧೆ


**ಬಾಗಲಕೋಟೆ:** ಮಹಾತ್ಮಾಗಾಂಧಿ ಜಯಂತಿ ಅಂಗವಾಗಿ ಜಿಲ್ಲಾ ಬಾಲಭವನದಲ್ಲಿ ಅಕ್ಟೋಬರ 9 ರಂದು 5 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಚಿತ್ರಕಲೆ, ಪ್ರಬಂಧ ಲೇಖನ, ರಸಪ್ರಶ್ನೆ ಹಾಗೂ ರಂಗೋಲಿ ಸ್ಪರ್ಧೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಮಕ್ಕಳು ಅಕ್ಟೋಬರ 8 ರೊಳಗಾಗಿ ಹೆಸರು ನೊಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ನೊಂದಣಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ–209, ನವನಗರ ಬಾಗಲಕೋಟೆ ಸಂಪರ್ಕಿಸುವಂತೆ ಪ್ರಕಟಣೆಯು ತಿಳಿಸಿದೆ.

## ಪ್ರಥಮ ಬಾರಿಗೆ ಗಾಂಧೀ ಜಯಂತಿ ಆಚರಣೆ

**ಜಮಖಂಡಿ:** ನಗರದ ಮೈಗೂರ ರಸ್ತೆಯಲ್ಲಿರುವ ತಾಲೂಕಾ ಛಾಯಾಚಿತ್ರಗ್ರಾಹಕರ ಸಂಘದ ನೂತನ ಕಛೇರಿಯಲ್ಲಿ ಪ್ರಥಮ ಬಾರಿಗೆ 156ನೇ ಗಾಂಧಿ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಸಂಘದ ನೂತನ ಅಧ್ಯಕ್ಷ ಹಾಶೀಂ ಜಮಖಂಡಿ, ಉಪಾಧ್ಯಕ್ಷ ಸಿದ್ದು ಗಡದಿ. ಕಾರ್ಯದರ್ಶಿ ರಮೇಶ ಹಲವಾಯಿ, ಖಜಾಂಚಿ ಶ್ರೀಶೈಲ ಮಾಳಿ, ಮಾಜಿ ಅಧ್ಯಕ್ಷ ಈರನಗೌಡ ಪಾಟೀಲ, ಆನಂದ ಪುಕಾಳೆ, ಶೇಖರ ಹರಕಂಗಿ, ಸಂಜಯ ಕಬ್ಬೂರಿ ಇದ್ದರು.



# ಸಕ್ಕರೆ ಕಾರ್ಖಾನೆಯ ದ್ವಿತೀಯ ಬಾಯ್ಲರ ಪ್ರದೀಪಣಾ ಪೂಜಾ ಸಮಾರಂಭ

**ಮರಕುಂಬಿ(ಬೈಲಹೊಂಗಲ):** ಇನಾಮದಾರ ಶುಗರ್ಸ ಲಿ., ಹಿರೇಕೊಪ್ಪ ಮರಕುಂಬಿ ಸಕ್ಕರೆ ಕಾರ್ಖಾನೆಯಲ್ಲಿ ದ್ವಿತೀಯ ವರ್ಷದ ಬಾಯ್ಲರ್ ಪ್ರದೀಪಣಾ ಪೂಜಾ ಹಾಗೂ ಕೇನ್ ಕ್ಯಾರಿಯರ್ ಪೂಜಾ ಕಾರ್ಯಕ್ರಮವನ್ನು ಬುಧವಾರ ರಂದು ಹಮ್ಮಿಕೊಳ್ಳಲಾಗಿತ್ತು. ಸದರಿ ಕಾರ್ಯಕ್ರಮದಲ್ಲಿ ಮಹಾಗಣಪತಿ, ಸರಸ್ವತಿ ಹಾಗೂ ಲಕ್ಷ್ಮೀ ಪೂಜೆಯನ್ನು ವೇದಮೂರ್ತಿ ದಯಾನಂದ ಮುಪ್ಪಯ್ಯನವರಮಠ ಹಾಗೂ ಸಂಗಡಿಗರು ನೇರವೇರಿಸಿದರು. ಸದರಿ ಕಾರ್ಯಕ್ರಮದಲ್ಲಿ ಮುರಗೋಡದ ಶ್ರೀ ನೀಲಕಂಠ ಸ್ವಾಮಿಜಿಗಳು, ಬೈಲಹೊಂಗಲ ಮೂರುಸಾವಿರಮಠದ ಪರಮಪೂಜ್ಯರಾದ ಪ್ರಭು ನೀಲಕಂಠ ಸ್ವಾಮಿಗಳು,ಇಂಚಲ ಸಾಧುಸಂಸ್ಥಾನ ಮಠದ ಶ್ರೀ ಪೂರ್ಣಾನಂದ ಸ್ವಾಮಿಜಿಗಳು, ಸಂಗೊಳ್ಳಿಯ ಹಿರೇಮಠದ ಶಿವಾಚಾರ್ಯ ಸ್ವಾಮಿಜಿ, ಹೂಲಿಅಜ್ಜನಮಠದ ಉಮೇಶ್ವರ ಶಿವಾಚಾರ್ಯಸ್ವಾಮಿಜಿಗಳ ಸಾನಿಧ್ಯದಲ್ಲಿ ಪೂಜಾ ನೇರವೇರಿಸಲಾಯಿತು.

ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಸ್ಥಳಿಯ ಉದ್ದಿಮೆದಾರರು, ಯುವಮುಖಂಡರು ಹಾಗೂ ಕಾರ್ಖಾನೆಯ ನಿರ್ದೇಶಕರಾದ ವಿಜಯ ಮೆಟಗುಡ್ಡ ಅವರು ಮಾತನಾಡಿ, ಇನಾಮದಾರ ಸಕ್ಕರೆ ಕಾರ್ಖಾನೆ ಅತಿ ಕಡಿಮೆ ಅವಧಿಯಲ್ಲಿ ನಿರ್ಮಾಣಗೊಂಡು ಪ್ರಾಯೋಗಿಕ ಕಬ್ಬು ನುರಿಸುವ ಹಂಗಾಮು ಪ್ರಾರಂಭಿಸಿ ಸುಮಾರು 3.67 ಮೆಟ್ರಿಕ್ ಟನ್ ಕಬ್ಬು ನುರಿಸಿ ಕಬ್ಬು ಪೂರೈಸಿದ ಸುತ್ತಲಿನ ರೈತಭಾಂದವರಿಗೆ ನಿಗದಿತ ಅವಧೀಯಲ್ಲಿ ಕಬ್ಬಿಣ ಬಿಲ್ಲು ಬಟವಟೆ ಮಾಡಿ ರಿಯಾಯಿತಿ ದರದಲ್ಲಿ ಸಕ್ಕರೆ ವಿತರಿಸಲಾಗಿದೆ ಎಂದು ತಿಳಿಸಿದರು. ಮುಂದುವರೆದು ಈ ಸಂದರ್ಭದಲ್ಲಿ ಸದರಿ ಕಾರ್ಖಾನೆಯ ಕಾರ್ಯಾರಂಭ ಮಾಡಲು ಶ್ರಮಿಸಿದ ದಿ. ಡಿ. ಬಿ ಇನಾಮದಾರ ಹಾಗೂ ಕಾರ್ಖಾನೆಯ ಅಧ್ಯಕ್ಷರಾದ ಡಾ ಪ್ರಭಾಕರ ಕೋರೆ ಅವರ ಶ್ರಮ ಹಾಗೂ ಸಹಕಾರವನ್ನು ಸ್ಮರಿಸಿದರು. ಅದೇ ರೀತಿ



ಕಾರ್ಖಾನೆಯಲ್ಲಿ ಸ್ಥಳಿಯ ಯುವಕರಿಗೆ ಆದ್ಯತೆ ನೀಡಲಾಗಿದ್ದು, ಕಾರ್ಮಿಕರಿಗೆ ಆರೋಗ್ಯ ಕಾರ್ಡ (ಹೆಲ್ತ್ ಕಾರ್ಡ) ವಿತರಿಸಿದ್ದು ಅದೇ ರೀತಿ ಕಬ್ಬು ಪೂರೈಸಿದ ರೈತ ಭಾಂದವರಿಗೂ ಕೂಡ ಹೆಲ್ತ್ ಕಾರ್ಡ, ರೈತರಿಗೊಸ್ಕರ ಯಾತ ನೀರಾವರಿ, ಹನಿ ನೀರಾವರಿ ಒಳ್ಳೆಯ ಕಬ್ಬಿಣ ಸಸಿಗಳನ್ನು ವಿತರಿಸುವ ಯೋಜನೆ ಹಾಕಿಕೊಳ್ಳಲಾಗಿದೆ ಎಂದು ತಿಳಿಸಿದರು. ಸುತ್ತಲಿನ ರೈತ ಭಾಂದವರೂ ಕಾರ್ಖಾನೆಗೆ ಹೆಚ್ಚಿನ ಪ್ರಮಾಣದಲ್ಲಿ ಕಬ್ಬು ಪೂರೈಸಿ ಕಾರ್ಖಾನೆಯ ಹಾಗೂ ರೈತ ಭಾಂದವರ ಏಳಿಗೆಗಾಗಿ ಸಹಕರಿಸಬೇಕೆಂದು ಕೋರಿದರು.

ತದನಂತರ ಇನೋರ್ವ ಕಾರ್ಖಾನೆಯ ನಿರ್ದೇಶಕರಾದ ವಿಕ್ರಮ ಇನಾಮದಾರ ಅವರು ಮಾತನಾಡಿ ಕಳೆದ ಹಂಗಾಮಿಗಿಂತ ಈ ಬಾರಿಯ ಹಂಗಾಮು ಅತಿ ಉತ್ಕೃಷ್ಟ ರೀತಿಯಲ್ಲಿ ನಡೆಯುತ್ತದೆ ನಮ್ಮ ಧ್ಯೇಯ ರೈತರ ಹಿತಾಶಕ್ತಿಯನ್ನು ಕಾಪಾಡಿಕೊಂಡು ರೈತರನ್ನು ಸಮಾಜದ ಒಳ್ಳೆಯ ಸ್ಥಾನಮಾನದಲ್ಲಿ ನೋಡುವುದಾಗಿದೆ ಎಂದರು.

ಸಮಾರಂಭದಲ್ಲಿ ದಿವ್ಯ ಸಾನಿಧ್ಯವನ್ನು ವಹಿಸಿದ ಮುರಗೋಡ ಮಹಾಂತ ದುರದುಂಡೀಶ್ವರ ಮಠದ ಶ್ರೀ ಮ.ನಿ.ಪ್ರ.ಸ್ವ ನೀಲಕಂಠ ಸ್ವಾಮಿಜಿಗಳು ಆಶೀರ್ವಚನ ನೀಡಿದರು. ಬೈಲಹೊಂಗಲ ಪ್ರಭು ನೀಲಕಂಠ ಸ್ವಾಮಿಜಿಗಳು ರೈತರ ಏಳಿಗೆ ಹಾಗೂ ಹಿತದೃಷ್ಠಿಯಿಂದ ಈ ಕಾರ್ಖಾನೆಯು ಉತ್ತಮ ಕಾರ್ಯವನ್ನು ಮಾಡುತ್ತಾ ಬಂದಿದೆ ಹಾಗೂ ಕಾರ್ಖಾನೆಯು ಇನ್ನು ಹೆಚ್ಚಿನ ಅಭಿವೃದ್ಧಿಯನ್ನು ಹೊಂದಲಿ ಎಂದರು. ತದ ನಂತರ ಇಂಚಲ ಮಠದ ಶ್ರೀಗಳು ಮಾತನಾಡಿ ದಿ. ಡಿ.ಬಿ ಇನಾಮದಾರ ಅವರನ್ನು ನೇನಿಸಿಕೊಂಡು ಅವರ ಚಿಂತನೆಯಂತೆ ಡಾ ಪ್ರಭಾಕರ ಕೋರೆ ಅವರ ಸಹಕಾರದಿಂದ ವಿಜಯ ಮೆಟಗುಡ್ಡ ಹಾಗೂ ವಿಕ್ರಮ ಇನಾಮದಾರ ಅವರು ಅಚ್ಚುಕಟ್ಟಾಗಿ ಕಾರ್ಖಾನೆಯನ್ನು ನಡೆಸಿಕೊಂಡು ಹೋಗುತ್ತಿದ್ದಾರೆ, ಭಗವಂತ ಅವರಿಗೆ ಇನ್ನೂ ಹೆಚ್ಚಿನ ಶಕ್ತಿಯನ್ನು ಕೊಟ್ಟು ಈ ಭಾಗದ ರೈತಭಾಂದವರನ್ನು ಮುಂದಿನ ಹಂತಕ್ಕೆ ಕರೆದುಕೊಂಡು ಹೋಗಬೇಕೆಂದು ಸಲಹೆ ಇತ್ತರು. ಸಂಗೊಳ್ಳಿ ಹಿರೇಮಠದ ಶ್ರೀಗಳು ಮಾತನಾಡಿ ಈ ಭಾಗದ ರೈತರ ಹಿತದೃಷ್ಠಿಯಿಂದ ಪ್ರಾರಂಭವಾದ ಕಾರ್ಖಾನೆಯು ದ್ವಿತೀಯ ವರ್ಷದ ಕೇನ ಕ್ಯಾರಿಯರ ಪೂಜೆ ಹಾಗೂ ಬಾಯ್ಲರ ಪ್ರದೀಪಣಾ ಪೂಜೆಯನ್ನು ಮಾಡಿದ್ದಾರೆ ಕಾರ್ಖಾನೆಯು ಸಿಬ್ಬಂದಿಗಳ ಜೊತೆ ಹಾಗೂ ರೈತ ಭಾಂದವರ ಜೊತೆ ಒಳ್ಳೆಯ ಸಂಬಂಧವನ್ನು ಇಟ್ಟುಕೊಂಡು ನಡೆಯುತ್ತಾ ಬಂದಿದೆ ಇದು ತುಂಬಾ ಸಂತೋಷದ ಸಂಗತಿ ಕಾರ್ಖಾನೆಯು ಇನ್ನು ಹೆಚ್ಚಿನ ಶ್ರೇಯೋಭಿವೃದ್ಧಯನ್ನು ಹೊಂದಲಿ ಎಂದು ಹೇಳಿದರು. ತದನಂತರ ಪ್ರಾಸ್ತವಿಕ ಮಾತನಾಡಿದ ಕಾರ್ಖಾನೆಯ ಮುಖ್ಯ ಆಡಳಿತ ಅಧಿಕಾರಿಗಳಾದ ರವೀಂದ್ರ ಚ ಪಟ್ಟಣಶೆಟ್ಟಿಯವರು ಕಾರ್ಖಾನೆಯ ಸುತ್ತಮುತ್ತಲಿನ ಅಂದಾಜು 2000 ಏಕರೆಗೆ ಯಾತ ನೀರಾವರಿ ಹಾಗೂ ಹನಿ ನೀರಾವರಿ ಯೋಜನೆಯನ್ನು ಕೈಗೊಂಡಿದ್ದು ಸದರಿ ಯೋಜನೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು. ಹಾಗೂ ಕಾರ್ಖಾನೆಯಲ್ಲಿ ಬರುವ ಹಂಗಾಮಿನಲ್ಲಿ ಅಂದಾಜು 150 ದಿನಗಳ ಕಬ್ಬು ನುರಿಸುವ ಯೋಜನೆ ಹಾಕಿಕೊಂಡಿದ್ದು ರೈತ ಭಾಂದವರು ಸಹಕರಿಸಲು ಕೋರಿದರು ಹಾಗೂ ಕಾರ್ಖಾನೆಯ ವತಿಯಿಂದ ಎಲ್ಲ ಕಾರ್ಮಿಕ ಸಿಬ್ಬಂದಿಗಳ ನಿಗದಿತ ಅವಧಿಯಲ್ಲಿ ವೇತನ ವಿತರಿಸಲಾಗುತ್ತಿದೆ ಎಂದು ತಿಳಿಸಿದರು ಎಲ್ಲ ಸಿಬ್ಬಂದಿಗಳು ಕಾರ್ಮಿಕರು ತಮ್ಮದೇ ಕಾರ್ಖಾನೆ ಎಂದು ಕೆಲಸವನ್ನು ನಿರ್ವಹಿಸಬೇಕೆಂದು ಕರೆ ಇತ್ತರು.

ಇದೇ ಸಂದರ್ಭದಲ್ಲಿ ಕಬ್ಬು ವಿಭಾಗದ ಮುಖ್ಯಸ್ಥರಾದ ಬಿ.ಎ.ಶೇಗುಣಸಿ ಕಾರ್ಖಾನೆಯಿಂದ ಕೈಗೊತ್ತಿಕೊಂಡ ಯಾತ ನೀರಾವರಿ ಹಾಗೂ ನೀರಾವರಿ ಯೋಜನೆಯ ಪ್ರಗತಿಯನ್ನು ವಿವರಿಸಿದರು.

ಈ ಸಮಾರಂಭದಲ್ಲಿ ಹಿರಿಯರಾದ ಶ್ರೀಶೈಲ ಮೆಟಗುಡ್ಡ, ಮಾಜಿ ಶಾಸಕರಾದ ಜಗದೀಶ ಮೆಟಗುಡ್ಡ, ವಾಸನಗೌಡ ಪಾಟೀಲ್, ಪ್ರಮುಲ ಪಾಟಿಲ, ಶಿವಾನಂದ್ ಬಡ್ಡಿಮನಿ, ಗುರು ಮೆಟಗುಡ, ಸುನೀಲ ಮೆಟಗುಡ್ಡ, ಜಯರಾಜ ಮೆಟಗುಡ್ಡ, ಸುನಿಲ ಮರಕುಂಬಿ. ನಾಮದೇವ ಸಿಂಗಣ್ಣವರ ಹಾಗೂ ಕಾರ್ಖಾನೆಯ ಎಲ್ಲ ವಿಭಾಗದ ಮುಖ್ಯಸ್ಥರು, ಸಿಬ್ಬಂದಿಗಳು ಕಾರ್ಮಿಕರು ಸುತ್ತಮುತ್ತಲಿನ ರೈತ ಬಾಂಧವರು, ಮಾಧ್ಯಮದ ಪ್ರತಿನಿಧಿಗಳು ಉಪಸ್ಥಿತರಿದ್ದರು. ಸದರಿ ಕಾರ್ಯಕ್ರಮವನ್ನು ಕಾರ್ಖಾನೆಯ ಮಾನವ ಸಂಪನ್ಮೂಲ ಅಧಿಕಾರಿಗಳಾದ ವೀರಯ್ಯಾ ವಿರಕ್ತಿಮಠ ಅವರು ನಿರೂಪಿಸಿ ವಂದಿಸಿದರು.

## ವಿದ್ಯಾರ್ಥಿಗಳ ಬದುಕಿಗೆ ಕೌಶಲ್ಯ ಅತ್ಯಗತ್ಯ



**ಇಂಡಿ:** ವಿದ್ಯಾರ್ಥಿಗಳ ಬದುಕಿಗೆ ಕೌಶಲ್ಯಗಳು ಅತ್ಯಗತ್ಯ. ಅವು ಉದ್ಯೋಗದ ಯಶಸ್ಸಿಗೆ ಸಹಕರಿಸುತ್ತವೆ. ಕೌಶಲ್ಯಗಳೊಂದಿಗೆ ಜ್ಞಾನವನ್ನು ಸಂಯೋಜಿಸಿದಾಗ ವಿದ್ಯಾರ್ಥಿಗಳು ಸಾಧನೆಯ ಉತ್ತುಂಗವನ್ನು ತಲುಪಲು ಸಾಧ್ಯ ಎಂದು ಉಪನ್ಯಾಸಕ ರವಿಕುಮಾರ ಅರಳಿ ಹೇಳಿದರು.

ಶನಿವಾರದಂದು ಪಟ್ಟಣದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಹಮ್ಮಿಕೊಂಡ ವಾರ್ಷಿಕ ಘಟಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜ್ಞಾನವು ಕೌಶಲ್ಯದೊಂದಿಗೆ ಕಾರ್ಯ ಪ್ರವೃತ್ತವಾದಾಗ ಮಾತ್ರ ಸಾಧನೆಯ ಶಿಖರವನ್ನು ಏರಲು ಸಾಧ್ಯ. ಕೌಶಲ್ಯದಲ್ಲಿರುವ ಅಧಮ್ಯ ಅದ್ಭುತ ಶಕ್ತಿಯು ಎಲ್ಲರಿಗೂ ಒಲಿಯುವಂತೆ ಮಾಡುವ ಶಕ್ತಿ ಶಿಕ್ಷಣದಲ್ಲಿದೆ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಶಿಕ್ಷಣದ ಅವಿಭಾಜ್ಯ ಅಂಗವೇ ಕೌಶಲ್ಯ. ಸ್ಪರ್ಧಾತ್ಮಕ ಜಗತ್ತನ್ನು ಎದುರಿಸುವ ಧೈರ್ಯ, ಸ್ಥೈರ್ಯ ಕೌಶಲ್ಯಾಧಾರಿತ ಶಿಕ್ಷಣದಿಂದ ಸಿದ್ದಿಸುತ್ತದೆ ಎಂದು ಹೇಳಿದರು.


ಸಂಸ್ಥೆಯ ಪ್ರಾಚಾರ್ಯ ಪಿ ವೈ ರಜನಿಕರ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದಿನ ಶರವೇಗದಲ್ಲಿ ಸಾಗುತ್ತಿರುವ ಅಭಿವೃದ್ಧಿಯ ಎಲ್ಲಾ ಕಾರ್ಯ ಚಟುವಟಿಕೆಗಳಿಗೆ ಕೌಶಲ್ಯತೆಯು ಅಗತ್ಯವಾಗಿದ್ದು, ಹೊಸ ಹೊಸ ವಿಧಾನಗಳನ್ನು ಅಳವಡಿಸಿಕೊಂಡು ವಿದ್ಯಾರ್ಥಿಗಳು ಮುನ್ನಡೆಯಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಉಪನ್ಯಾಸಕರಾದ ಜಿ ಎಸ್ ಬಾಗೇಳ್ಳಿ, ರಮೇಶ ಮೇತ್ರಿ, ಬಿ ಕೆ ಶಿವೂರ, ಸಂತೋಷ ಹಟ್ಟಿ, ಭಾಗ್ಯಜ್ಯೋತಿ, ರವಿ ಹಾದಿಮನಿ, ಎಂ ಎಂ ಜಹಗೀರದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ದಸರಾ ಮಹೋತ್ಸವ: ರಸಮಂಜರಿ ಕಾರ್ಯಕ್ರಮ

**ರಾಯಬಾಗ:** ಶ್ರೀ ಗುರುಶಾಂತೇಶ್ವರ ಸಂಸ್ಥಾನ ಹಿರೇಮಠ್ ಹುಕ್ಕೇರಿ ಶಾಖೆ ರಾಯಭಾಗದಲ್ಲಿ ರಾಯಬಾಗ ದಸರಾ ಮಹೋತ್ಸವದ ಅಂಗವಾಗಿ ಬನ್ನಿ ಮುಡಿಯುವ ಕಾರ್ಯಕ್ರಮ ಹಾಗೂ ರಸಮಂಜರಿ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪರಮಪೂಜ್ಯ ಶ್ರೀ ಮಾದಣ್ಣ ಮಧು ಗೊಂಡೇಶ್ವರ ಸಿದ್ದ ಸಿರಿ ಆಶ್ರಮ ಕುಂಚನೂರು ಮಠ ಜಕನೂರು ಹಾಗೂ ಶ್ರೀ ದಿವಾಕರ್ ಭಟ್ ಖ್ಯಾತ ಜ್ಯೋತಿಷಿಗಳು ವಿರಾಜಪೇಟೆ ವಹಿಸಿದ್ದರು ಈ ಕಾರ್ಯಕ್ರಮದ ಉದ್ಘಾಟನೆಯನ್ನು ರಾಯಬಾಗ ಮತಕ್ಷೇತ್ರದ ಜನಪ್ರಿಯ ಶಾಸಕರಾದ ಡಿ ಎಂ ಐಹೊಳೆ ಕಾರ್ಯಕ್ರಮವನ್ನುಉದ್ಘಾಟಿಸಿದರು.

ಸದಾಶಿವ ಘೋರ್ಪಡೆ ಹಾಗೂ ಸದಾನಂದ ಹಳಿಂಗಳಿ ಆಗಮಿಸಿದ್ದರು ಅರುಣ ಡಿ ಐಹೊಳೆ ಇವರ ನೇತೃತ್ವದಲ್ಲಿ ಈ ಕಾರ್ಯಕ್ರಮ ಜರುಗಿತು ಪೂಜ್ಯಶ್ರೀ ದಿವಾಕರ್ ಭಟ್ ಅವರು ತಾಯಿ ಚಾಮುಂಡೇಶ್ವರಿಯನ್ನು ಹೇಗೆ ನವರಾತ್ರಿಯಲ್ಲಿ ಪೂಜಿಸಬೇಕು ಎಂದು ಮಾರ್ಮಿಕವಾಗಿ ವಿವರಿಸಿದರು ಹಾಗೂ ಕುಂಚನೂರು ಮಠದ ಶ್ರೀಗಳು ಕೂಡ ತಾಯಿ ಚಾಮುಂಡೇಶ್ವರಿಯು ಮಹಿಷಾ ಸೂರನನ್ನು ಹೇಗೆ ಸಂಹರಿಸಿದಳು ಎಂದು ದೃಷ್ಟಾಂತದ ಮೂಲಕ ಆಶೀರ್ವಚನವನ್ನು ನೀಡಿದರು. ಉದ್ಘಾಟಕರಾದ ಡಿಎಂ ಐಹೊಳೆ ಸಾಹೇಬರು ಹುಕ್ಕೇರಿ ಶಾಖೆಯ ಈ ಮಠವು ಸ್ಥಾಪನೆಯಾಗಿ ಸುಮಾರು ಹತ್ತು ವರ್ಷಗಳು ಗತಿಸಿದವು ಎಲ್ಲ ಭಕ್ತಾದಿಗಳು ಶ್ರೀಮಠಕ್ಕೆ ಆಗಮಿಸಿ ದೇವರ ಅನುಗ್ರಹ ಪಡೆದುಕೊಳ್ಳಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಶಿವಾನಂದ ಐಹೊಳೆ ಮಹೇಶ್ ಕರಮಡಿ ಸುರೇಶ್ ಕೊಕ್ಕಟೆ ವಿವೇಕಾನಂದ ಯಮಕನಮರಡಿ. ದಯಾನಂದ ಬಂಬಲಾಡಿ ಸುಭಾಷ್ ಮಲ್ಲಪ್ಪಗೋಳ ಕಿರಣ ತೊಳೆ ಎಸ್ ಎಸ್ ಕಾಂಬಳೆ ನಿಂಗಯ್ಯ ಶಾಸ್ತ್ರೀ ಹಲವಾರು ಭಕ್ತರು ಪಾಲ್ಗೊಂಡಿದ್ದರು ಕಾರ್ಯಕ್ರಮದ ಸ್ವಾಗತ ಮತ್ತು ನಿರೂಪಣೆಯನ್ನು ಬಿ ಬಿ ಪೂಜಾರ ನಿರ್ವಹಿಸಿದರು.



## ಪಟ್ಟಾಭಿಷೇಕ: ನಾಳೆ ಬಾಳೆಹೊನ್ನೂರಿಗೆ ಭಕ್ತರ ಪ್ರಯಾಣ

**ತೇರದಾಳ:** ಇಲ್ಲಿನ ಹಿರೇಮಠಕ್ಕೆ ನೇಮಕಗೊಂಡಿರುವ ಗಂಗಾಧರ ದೇವರ ಶಿಕ್ಷಣ ಪೂರ್ಣಗೊಂಡ ಹಿನ್ನಲೆಯಲ್ಲಿ ಅವರಿಗೆ ಪಟ್ಟಾಭಿಷೇಕ ಮಾಡುವ ಉದ್ದೇಶದಿಂದ ಪಟ್ಟಾಭಿಷೇಕ ದಿನಾಂಕ ನಿಗದಿಗಾಗಿ ರಂಭಾಪುರಿ (ಬಾಳೆಹೊನ್ನೂರ) ಪೀಠದ ಜಗದ್ಗುರು ವೀರಸೋಮೇಶ್ವರ ಶಿವಾಚಾರ್ಯ ಭಗವಾತ್ಪಾದಕರನ್ನು ಬೇಟಿ ಆಗಲು ಅ.6ರಂದು ತೆರಳಲು ಶ್ರೀಮಠದ ಭಕ್ತ ಸಮೂಹ ನಿರ್ಧರಿಸಿದೆ.

ಶುಕ್ರವಾರ ಕಲ್ಲಟ್ಟಿ ಗಲ್ಲಿ ಗಂಗಾಧರ ಮಠದಲ್ಲಿ ನಡೆದ ಸಭೆಯಲ್ಲಿ ಭಕ್ತರು ತೀರ್ಮಾನಿಸಿದರು. ಶ್ರೀಮಠಕ್ಕೆ ನಡೆದುಕೊಳ್ಳುವ ಪ್ರತಿ ಸಮುದಾಯದಿಂದ ಒಂದು ವಾಹನದಂತೆ ಬರುವ ಕುರಿತು ವಿಷಯ ಮಂಡಿಸಲಾಯಿತು.

ಅಂದಾಜು 15ಕ್ಕೂ ಅಧಿಕ ವಾಹನಗಳು ರಂಭಾಪುರಿಗೆ ತೆರಳಲಿವೆ. ಪಟ್ಟಾಭಿಷೇಕ ದಿನಾಂಕ ನಿಗದಿಗೊಂಡ ಬಳಿಕ ಕಾರ್ಯಕ್ರಮಕ್ಕೆ ಪಂಚ ಪೀಠಾಧೀಶರನ್ನು ಆಹ್ವಾನಿಸುವ ಬಗ್ಗೆ ಭಕ್ತರು ಹಿರಿಯರಿಗೆ ಮನವಿ ಮಾಡಿದರು. ಪಟ್ಟಣದ ಹಿರಿಯ ಮುಖಂಡ ಪ್ರವೀಣ ನಾಡಗೌಡ ಸೇರಿದಂತೆ ಬಹುತೇಕ ಸಮಾಜದವರು ಸಭೆಯಲ್ಲಿ ಪಾಲ್ಗೊಂಡಿದ್ದರು.



## ಪ್ರತಿ ದಿನದ ಗುರಿ ಸಾಧನೆಗೆ ಮುಂದಾಗಿ: ಸಿಇಓ ಪಾಟೀಲ

**ಹುಬ್ಬಳ್ಳಿ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಜಿಲ್ಲೆಯಾದ್ಯಂತ ನಡೆಯುತ್ತಿದೆ. ಸಮೀಕ್ಷೆ ಕೆಲಸ ಯಾವುದೇ ಕಾರಣಕ್ಕೂ ವಿಳಂಬವಾಗದಂತೆ ಎಚ್ಚರ ವಹಿಸಬೇಕಾಗುತ್ತದೆ. ಪ್ರತಿ ದಿನದ ಗುರಿಯನ್ನು ಸಾಧಿಸಲು ಮೇಲ್ವಿಚಾರಕರು ಮುಂದಾಗಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಹೇಳಿದರು.

ಶುಕ್ರವಾರ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಪ್ರಗತಿ ಕುರಿತು ಮೇಲ್ವಿಚಾರಕರ ಸಭೆಯಲ್ಲಿ ಅವರು ಮಾತನಾಡಿದರು. ಈಗಾಗಲೇ ಸಮೀಕ್ಷೆ ಕಾರ್ಯ ಸೆಪ್ಟೆಂಬರ್ 22 ರಿಂದ ಪ್ರಾರಂಭವಾಗಿದೆ. ಆದರೆ ಸಮೀಕ್ಷೆದಾರರು ಈವರೆಗೆ ಶೇ.50 ರಷ್ಟು ಸಾಧನೆ ಮಾಡಿರುವುದಿಲ್ಲ. ಹೀಗಾಗಿ ಗಣತಿ ಕಾರ್ಯವನ್ನು ವೇಗವಾಗಿ ಮಾಡಬೇಕಿದೆ. ನೆಟವರ್ಕ್ ಸಿಗುವ ಜಾಗದಲ್ಲಿ ಸಮೀಕ್ಷೆ ನಡೆಸಲು ಮುಂದಾಗಬೇಕು. ಎಲ್ಲರೂ ತಮ್ಮ ಜವಾಬ್ದಾರಿ ಅರಿತು ಕೆಲಸ ನಿರ್ವಹಿಸಬೇಕು ಎಂದು ಅವರು ತಿಳಿಸಿದರು. ನೂರಕ್ಕೆ ನೂರರಷ್ಟು ಗುರಿ ಸಾಧಿಸುವ



ಭರದಲ್ಲಿ ತಪ್ಪು ಮಾಹಿತಿಯನ್ನು ಸಂಗ್ರಹಿಸಬಾರದು. ಒಂದು ವೇಳೆ ತಪ್ಪು ನೀಡಿದರೆ ಮೇಲ್ವಿಚಾರಕರನ್ನು ಅಮಾನತ್ತು ಮಾಡಲಾಗುವುದು. ಅದಕ್ಕೆ ಅವಕಾಶ ಕೊಡದಂತೆ ಕಾರ್ಯ ನಿರ್ವಹಿಸಬೇಕು. ಮುಂದಿನ 5 ದಿನಗಳಲ್ಲಿ ನಿಗದಿ ಪಡಿಸಿದ ಗುರಿಯನ್ನು ಸಾಧಿಸಬೇಕು.

ಸಮೀಕ್ಷೆಗೆ ಮಾಹಿತಿ ನೀಡಲು ನಿರಾಕರಿಸಿದವರಿಗೆ ಮನವೊಲಿಸಬೇಕಾಗುತ್ತದೆ. ಅವರಿಂದ ನಿಖರ ಮಾಹಿತಿಯನ್ನು ಸಂಗ್ರಹಿಸಲು ಮುಂದಾಗಬೇಕು ಎಂದರು. ಪ್ರತಿ ದಿನ 300 ರಿಂದ 400 ಮನೆಗಳನ್ನು ಸಮೀಕ್ಷೆ ಮಾಡುವಂತೆ ಮೇಲ್ವಿಚಾರಕರು ಕ್ರಮ ವಹಿಸಬೇಕು. ಸಮೀಕ್ಷೆದಾರರು ಯಾವುದೇ ವಿಳಂಬ ಮಾಡದಂತೆ ಸೂಚನೆ ನೀಡಬೇಕಾಗುತ್ತದೆ. ಹೆಚ್ಚುವರಿ ಸಿಬ್ಬಂದಿ ಅವಶ್ಯವಿದ್ದಲ್ಲಿ ಮೇಲಾಧಿಕಾರಿಗಳ ಗಮನಕ್ಕೆ ತರಬೇಕು. ವಿನಾಕಾರಣ ಸಮೀಕ್ಷೆ ವಿಳಂಬವಾಗಬಾರದು ಎಂದು ಸೂಚನೆ ನೀಡಿದರು.

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಾದ ಡಾ.ರುದ್ರೇಶ ಘಾಳಿ ಮಾತನಾಡಿ, ಖಾಲಿ ಮನೆಗಳು, ಹೊರ ರಾಜ್ಯದವರು ಇರುವ ಮನೆಗಳನ್ನು ಗುರುತಿಸಬೇಕು. ಅವರ ಮಾಹಿತಿಯನ್ನು ಸಂಗ್ರಹಿಸಬೇಕಾಗುತ್ತದೆ. ಅಕ್ಟೋಬರ್ 8 ರಿಂದ ಶಾಲೆಗಳು ಪುನಾರಂಭವಾಗಲಿವೆ. ಆ ನಿಟ್ಟಿನಲ್ಲಿ ಮೇಲ್ವಿಚಾರಕರು ಕಾರ್ಯಪ್ರವೃತರಾಗಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಪ್ರೊಬೇಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ, ಹುಬ್ಬಳ್ಳಿ ಶಹರ ತಹಶೀಲ್ದಾರರಾದ ಮಹೇಶ ಗಸ್ತೆ, ಹುಬ್ಬಳ್ಳಿ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಡಾ.ರಾಮಚಂದ್ರ ಹೊಸಮನಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಭಾನುಮತಿ ಎಚ್, ಹುಬ್ಬಳ್ಳಿ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಂ.ಫಡ್ನೇಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ನಾಗರತ್ನಾ ಕ್ಯಾಸನೂರ ಸೇರಿದಂತೆ ಅಧಿಕಾರಿಗಳು, ಮೇಲ್ವಿಚಾರಕರು ಇತರರು ಉಪಸ್ಥಿತರಿದ್ದರು.

## ಯಶಸ್ವಿ ಸಮೀಕ್ಷೆಗೈದ ಶಿಕ್ಷಕರಿಗೆ ಸನ್ಮಾನ



**ಯರಗಟ್ಟಿ:** ತಾಲೂಕಿನಾದ್ಯಂತ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯವನ್ನು ಚುರುಕಾಗಿ ನಡೆಸಿ ಕಡಿಮೆ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಿದ ಯರಗಟ್ಟಿ ತಾಲ್ಲೂಕಿನ ನಾಲ್ಕು ಜನ ಶಿಕ್ಷಕರನ್ನು ತಹಶೀಲ್ದಾರ ಎಮ್ ವ್ಹಿ ಗುಂಡಪ್ಪಗೋಳ ಸನ್ಮಾನಿಸಿದರು.

ತಹಶೀಲ್ದಾರ ಕಚೇರಿ ಸಭಾಭವನದಲ್ಲಿ ಜರುಗಿದ ಸಾಮಾಜಿಕ ಮತ್ತು ಶೈಕ್ಷಣಿ ಸಮೀಕ್ಷೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಮೀಕ್ಷೆಯಲ್ಲಿ ಪಾಲ್ಗೊಂಡ ತಾಲ್ಲೂಕು ಅಧಿಕಾರಿಗಳಿಂದ ಸಮೀಕ್ಷೆಯಲ್ಲಿ ಕಂಡು ಬರುವ ಸಮಸ್ಯೆಗಳನ್ನು ಆಲಿಸಿದರು. ನಂತರ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಮಸ್ಯೆ ಹಾಗೂ ಪರಿಹಾರಗಳ ಕುರಿತು ಚರ್ಚೆ ನಡೆಸಿದರು. ಕಡಿಮೆ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಿದ ತಾಲ್ಲೂಕಿನ ನಾಲ್ಕು ಜನ ಸಮೀಕ್ಷೆದಾರರಿಗೆ ಸನ್ಮಾನಿಸಲಾಯಿತು.ತಹಶೀಲ್ದಾರ ಗುಂಡಪ್ಪಗೋಳ ಮಾತನಾಡಿ, ತಾಲೂಕಿನಲ್ಲಿ ಒಟ್ಟು 23015 ಕುಟುಂಬಗಳಿದ್ದು, ಸಮೀಕ್ಷೆ ಕೈಗೊಳ್ಳಲು 216 ಸಮೀಕ್ಷೆದಾರರನ್ನು ನೇಮಕ ಮಾಡಲಾಗಿದೆ. ಇಲ್ಲಿಯವರೆಗೆ 17934 ಕುಟುಂಬಗಳ ಸಮೀಕ್ಷೆ ಮಾಡಿ ಶೇ.78% ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು. ಈ ವೇಳೆ ಉಪ ತಹಶೀಲ್ದಾರ ಸಂತೋಷ ಜಾದವ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಮೇಶ ಅವರಾದಿ, ಎಸ್. ಎಸ್. ಸಸಾಲಟ್ಟಿ, ಶಿಕ್ಷಕರಾದ ಎ. ಎ. ಮಕ್ತುಮನ್ನವರ, ಎಂ. ಎಂ. ಚಿಲದ, ಎಸ್. ಬಿ. ಮಿಕಲಿ, ಎಸ್. ಬಿ. ಜಂಬಗಿ, ಎಲ್. ಎಂ. ಕುಮಕಾಗೋಳ, ಎಸ್. ಸಿ. ಚಿಲಕಂಡಿ, ಕೆ. ಎ. ನಾಗನೂರ, ಎಫ್. ಎಚ್. ಜಮಾದಾರ, ಬಿ. ಎಸ್. ಸಿದ್ದಬಸನವರ, ಎಸ್.ಜಿ. ಸುಣಗಾರ, ಅರ್ಜುನ ಕಾಮಣ್ಣವರ ಸೇರಿದಂತೆ ಅನೇಕರು ಇದ್ದರು.

## ಕುಡಿಯುವ ನೀರು ಪೂರೈಕೆ: ನಾಳೆ ಮುಖ್ಯಮಂತ್ರಿಗಳಿಂದ ಶಂಕುಸ್ಥಾಪನೆ

**ಕೊಪ್ಪಳ:** ನಗರದ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಕೊಪ್ಪಳ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಪಟ್ಟಣ ಪಂಚಾಯತ್ ಕನಕಗಿರಿ ಹಾಗೂ ಪುರಸಭೆ ಕಾರಟಗಿ ಇವರ ಸಂಯುಕ್ತಾಶ್ರಯದಲ್ಲಿ ರೂ.204.57 ಕೋಟಿಗಳ ವೆಚ್ಚದ "ಅಮೃತ್ 2.0" ಯೋಜನೆಯಡಿ ತುಂಗಭದ್ರಾ ಜಲಾಶಯ ಮೂಲದಿಂದ ಕನಕಗಿರಿ ಮತ್ತು ಕಾರಟಗಿ ಪಟ್ಟಣಗಳಿಗೆ ಕುಡಿಯುವ ನೀರು ಸರಬರಾಜು ಕಲ್ಪಿಸುವ ಯೋಜನೆಗೆ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಅಕ್ಟೋಬರ್ 6 ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ಕೊಪ್ಪಳದ ಹೊಸಪೇಟೆ ರಸ್ತೆಯ ಮಾರುತಿ ಸುಜುಕಿ ಶೋರೂಮ್ ಎದುರಿನ ಅಗಡಿ ಬಡಾವಣೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಂಕುಸ್ಥಾಪನಾ ನೆರವೇರಿಸಲಿದ್ದು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವ(ಬೆಂಗಳೂರು ಹೊರತು ಪಡಿಸಿ) ಬಿ.ಎಸ್. ಸುರೇಶ್, ಪೌರಾಡಳಿತ ಮತ್ತು ಹಜ್ ಸಚಿವ ರಹೀಮ್ ಖಾನ್, ಕುಷ್ಟಗಿ ಶಾಸಕರು ಹಾಗೂ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ, ಯಲಬುರ್ಗಾ ಶಾಸಕರು ಹಾಗೂ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರಡ್ಡಿ ಹಾಗೂ ಕ.ನ.ನೀ.ಸ ಮತ್ತು ಒಳಚರಂಡಿ ಮಂಡಳಿ ಬೆಂಗಳೂರಿನ ಅಧ್ಯಕ್ಷರಾದ ಶಿವಲೀಲಾ ವಿನಯ್ ಕುಲಕರ್ಣಿ ಅವರು ಕಾರ್ಯಕ್ರಮದ ಘನುಪಸ್ಥಿತಿ



ವಹಿಸುವರು.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಶರೀಲ್ ಜಿ.ನಮೋಶಿ, ಡಾ.ಚಂದ್ರಶೇಖರ ಬಿ.ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ ನಬೀಸಾಬ ದೋಟಿಹಾಳ, ಕನಕಗಿರಿ ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಹುಸೇನಬೀ ಶ್ಯಾಮಿದಸಾಬ ಚಳ್ಳಮರದ, ಕಾರಟಗಿ ಪುರಸಭೆ ಅಧ್ಯಕ್ಷರಾದ ರೇಖಾ ರಾಜಶೇಖರ್ ಆನೆಹೊಸೂರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಕೃಷ್ಣಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ ಮೋಹನ್ ರಾಜ್, ಬೆಂಗಳೂರು ನಗರಾಭಿವೃದ್ಧಿ ಇಲಾಖೆಯ ಸರಕಾರದ ಕಾರ್ಯದರ್ಶಿ ದೀಪಾ ಚೋಳನ್, ಕ.ನ.ನೀ.ಸ ಮತ್ತು ಒಳಚರಂಡಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಡಾ.ಸೆಲ್ವಮಣಿ ಆರ್, ಪೌರಾಡಳಿತ ನಿರ್ದೇಶನಾಲಯ ನಿರ್ದೇಶಕ ಪ್ರಭುಲಿಂಗ ಕವಳಿಕಟ್ಟಿ, ಕ.ನ.ನೀ.ಸ ಮತ್ತು ಒಳಚರಂಡಿ ಮಂಡಳಿಯ ಜಂಟಿ ವ್ಯವಸ್ಥಾಪಕ ನಿರ್ದೇಶಕ ಜ್ಞಾನೇಂದ್ರ ಕುಮಾರ್ ಗಂಗ್ವಾರ್, ಜಿಲ್ಲಾಧಿಕಾರಿ ಡಾ. ಸುರೇಶ ಬಿ.ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ದಿ ಅವರು ಆಗಮಿಸುವರು.

ಕ.ನ.ನೀ.ಸ ಮತ್ತು ಒಳ ಚರಂಡಿ ಮಂಡಳಿ, ಕಲಬುರಗಿಯ ಮುಖ್ಯ ಅಭಿಯಂತರರಾದ ಪ್ರವೀಣ್ ಲಿಂಗಯ್ಯ, ರಾಯಚೂರಿನ ಕಾರ್ಯಪಾಲಕ ಅಭಿಯಂತರರಾದ ಗುರುರಾಜು ಹೆಚ್.ಈ, ಕೊಪ್ಪಳದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಎಮ್ ಸುಕುಮುನಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಎಮ್. ಗುಂಡೂರ್, ಕನಕಗಿರಿಯ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಗಳಾದ ಲಕ್ಷ್ಮಣ ಕಟ್ಟಿಮನಿ ಹಾಗೂ ಕಾರಟಗಿಯ ಪುರಸಭೆ ಮುಖ್ಯಾಧಿಕಾರಿ ಸಾಬಣ್ಣ ಕಟ್ಟಿಕಾರ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

**ಕಾರವಾರ;** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಕಾರವಾರ ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕಾರ್ಯಕ್ರಮವು ಅ.7 ರಂದು ಬೆಳಗ್ಗೆ 10.30 ಗಂಟೆಗೆ ಕಾರವಾರದ ದೈವಜ್ಞ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ. ಕಾರ್ಯಕ್ರಮವನ್ನು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್ ವೈದ್ಯ ಉದ್ಘಾಟಿಸಲಿದ್ದು, ಕರ್ನಾಟಕ ಮಾರ್ಕೆಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಡಳಿತ ಸುದಾರಣಾ ಆಯೋಗದ ಅಧ್ಯಕ್ಷರಾದ ಆರ್.ವಿ.ದೇಶಪಾಂಡೆ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ದಿನಕರ ಕೆ. ಶೆಟ್ಟಿ, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೆಕರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದು, ಮಹರ್ಷಿ ವಾಲ್ಮೀಕಿ ಕುರಿತು ಶಿಕ್ಷಕ ಚಂದ್ರಶೇಖರ ನಾಯಕ ದೊರೆ ಉಪನ್ಯಾಸ ನೀಡಲಿದ್ದಾರೆ. ಸಭಾ ಕಾರ್ಯಕ್ರಮದ ಪೂರ್ವದಲ್ಲಿ ಬೆಳಗ್ಗೆ 9.30 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ಮೆರವಣಿಗೆ ಕಾರ್ಯಕ್ರಮ ನಡೆಯಲಿದೆ.

## ನಿಧನ ವಾರ್ತೆ

### ಶಿವನಾಯಕ ಸಂಗನಾಯ್ಕರ



**ಬೈಲಹೊಂಗಲ:** ತಾಲೂಕಿನ ಮುತವಾಡ ಗ್ರಾಮದ ಹಿರಿಯ ರೈತ ಶ್ರೀ. ಶಿವನಾಯಕ ಸಂಗನಾಯ್ಕರ ಇವರು ನಿಧಾನವಾಗಿದ್ದಾರೆ. 80 ವರ್ಷದ ಶಿವನಾಯಕ ಸಂಗನಾಯ್ಕರ ಅವರು ತಮ್ಮ ಹಿಂದೆ ಮೂವರು ಪುತ್ರರು ಮೂವರು ಪುತ್ರಿಯರು ಮತ್ತು ಅಪಾರ ಬಂಧು ಬಳಗವನ್ನು ಬಿಟ್ಟಗಲಿದ್ದಾರೆ.

# ವಿದ್ಯಾರ್ಥಿಗಳ ಗೋಳಾಟ, ಬಸ್‌ಗಾಗಿ ಪರದಾಟ

**ಬಸ್ ತಡೆದು ಪ್ರತಿಭಟನೆ: ಮನವೊಲಿಸಲು ಪಟ್ಟಣದ ಮುಖಂಡರ ಹರಸಾಹಸ, ಮನವಿ ಸಲ್ಲಿಸಿದ ವಿದ್ಯಾರ್ಥಿಗಳು.**

**ಮುಗಳಖೋಡ:** ನಮಗೆ ತುಂಬಾ ತೊಂದರೆಯಾಗುತ್ತಿದೆ. ಸರಿಯಾದ ಸಮಯಕ್ಕೆ ಬಸ್ ಬರುತ್ತಿಲ್ಲ, ಬಂದರು ಸಹ ನಿಲ್ಲುತ್ತಿಲ್ಲ, ಇದರಿಂದ ಸರಿಯಾದ ಸಮಯಕ್ಕೆ ಕಾಲೇಜ್ ಗೆ ಹೋಗಲು ಆಗುತ್ತಿಲ್ಲ ಎಂದು ವಿದ್ಯಾರ್ಥಿಗಳು ತಮ್ಮ ಗೋಳಾಟವನ್ನು ತೋಡಿಕೊಳ್ಳುತ್ತಾ, ಆಕ್ರೋಷಿತರಾಗಿ ರಸ್ತೆ ಸಂಚಾರ ಬಸ್ ಗಳನ್ನು ತಡೆದು ಹೋರಾಟ ನಡೆಸಿದ ಘಟನೆ ರಾಯಬಾಗ ತಾಲೂಕಿನ ಮುಗಳಖೋಡ ಕ್ರಾಸ್ ನಲ್ಲಿ ನಡೆದಿದೆ.

ಮುಗಳಖೋಡ ಪಟ್ಟಣದ ಕ್ರಾಸ್ ನಲ್ಲಿ ರಾಜ್ಯ ಹೆದ್ದಾರಿ ತಡೆ ನಡೆಸಿ, ವಾಹನಗಳನ್ನು ನಿಲ್ಲಿಸಿದ ವಿದ್ಯಾರ್ಥಿಗಳು ಸುಮಾರು 2 ಗಂಟೆಗಳ ಕಾಲ ಧರಣಿ ನಡೆಸಿದರು. ಮುಗಳಖೋಡ ಪಟ್ಟಣದಿಂದ ಮೂಡಲಗಿ ಹಾಗೂ ಹಾರೂಗೇರಿ, ಮುಗಳಖೋಡ ಹೋಗುವ ಶಾಲಾ-ಕಾಲೇಜು ವಿದ್ಯಾರ್ಥಿಗಳು ನಮಗೆ ಬೆಳಗ್ಗೆ 8 ಗಂಟೆಯಿಂದ 9:30 ರ ವರೆಗೆ ಬಸ್ ಸೌಲಭ್ಯ ಇಲ್ಲದೇ ಇರುವುದರಿಂದ ತರಗತಿಗಳಿಗೆ ಹಾಜರಾಗಲು ತುಂಬಾ ತೊಂದರೆಯಾಗುತ್ತಿದೆ. ಕಾಲೇಜ್ ಗೆ ಹೋಗಲು ಮತ್ತು ಪರೀಕ್ಷೆಯಲ್ಲಿ ಸರಿಯಾಗಿ ಸಮಯಕ್ಕೆ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ತಮ್ಮ ಅಳಲನ್ನು ತೋಡಿಕೊಂಡರು.

ಈ ವೇಳೆ ವಿದ್ಯಾರ್ಥಿಗಳ ಮನವೊಲಿಸಲು ಸಾರಿಗೆ ಇಲಾಖೆ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ ಹಾಗೂ ಸ್ಥಳೀಯ ಮುಖಂಡರು ಹರಸಾಹಸಪಟ್ಟರು. ಪೋಲಿಸರು ಪ್ರತಿಭಟನೆಯನ್ನು ತಿಳಿ ಗೊಳಿಸಿದ ನಂತರ ಅಂತಿಮವಾಗಿ ಸಾರಿಗೆ ಇಲಾಖೆ ಅಧಿಕಾರಿಗೆ ಮನವಿ ಸಲ್ಲಿಸಿದ ವಿದ್ಯಾರ್ಥಿಗಳು ಕೂಡಲೇ ಈ ಸಮಸ್ಯೆ ಪರಿಹರಿಸಬೇಕು. ಆಗದೇ ಹೋದಲ್ಲಿ ಮತ್ತೆ ರಸ್ತೆಗಿಳಿದು ಹೋರಾಟ ನಡೆಸುತ್ತೇವೆ ಎಂದು ಎಚ್ಚರಿಕೆ ನೀಡಿ ಹೋರಾಟ ಕೈ ಬಿಟ್ಟಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ವಿದ್ಯಾರ್ಥಿಗಳಿಗೆ ಸರಿಯಾಗಿ ಬಸ್ಸಿನ ವ್ಯವಸ್ಥೆ ಕಲ್ಪಿಸಿಕೊಡುತ್ತಾರಾ ಎಂದು ಕಾದು ನೋಡಬೇಕಿದೆ.

ಈ ವಿಚಾರವಾಗಿ ಪಟ್ಟಣದ ಹಲವಾರು ಹಿರಿಯರು, ಪ್ರಮುಖರು ಮಾತನಾಡಿ ಬಸ್ಸಿನ ಸಮಸ್ಯೆ ಹೇಳಿಕೊಂಡರು. ಈ ಸಂದರ್ಭದಲ್ಲಿ ಪಟ್ಟಣದ ಹಿರಿಯರು, ಮುಖಂಡರು, ವಿದ್ಯಾರ್ಥಿಗಳ ಪಾಲಕರು ಸೇರಿದಂತೆ ಮುಗಳಖೋಡ, ಹಾರೂಗೇರಿ, ಮೂಡಲಗಿ ಕಾಲೇಜಿಗೆ ತೆರಳುವ ವಿದ್ಯಾರ್ಥಿಗಳು ಇದ್ದರು.



ಬೆಳಗ್ಗೆ 9:30 ಗಂಟೆಗೆ ತರಗತಿಗಳು ಪ್ರಾರಂಭವಾಗುತ್ತವೆ. ನಾವು ಮನೆಯಿಂದ 7 ಗಂಟೆಗೆ ಹೊರಟು ಬಸ್ಸಿಗಾಗಿ ಕಾಯುತ್ತಾ ಕುಳಿತರು 9 ಗಂಟೆಯಾದರೂ ಬಸ್ಸು ಬರುತ್ತಿಲ್ಲ. ಬಂದಿರುವ ಬಸ್ಸು ನಿಲ್ಲುತ್ತಿಲ್ಲ. ಹೀಗಾದರೆ ನಮ್ಮ ಕಾಲೇಜು ಪೂರ್ಣಗೊಳ್ಳುವುದಿಲ್ಲ. ಪ್ರತಿದಿನ ಒಂದು ಎರಡು ತರಗತಿಗಳು ಮಿಸ್ ಆಗುತ್ತವೆ. ನಮ್ಮ ಗೋಳು ಕೇಳುವವರು ಯಾರು? ಹೀಗೆ ಮುಂದುವರೆದರೆ ಎಲ್ಲ ವಿದ್ಯಾರ್ಥಿಗಳು ಸೇರಿ ಪ್ರತಿಭಟನೆ ಮುಂದುವರಿಸುತ್ತೇವೆ.

**ಸೃಷ್ಟಿ**
**ಕಾಲೇಜು ವಿದ್ಯಾರ್ಥಿನಿ**

**ಜುಗೂಳ-ಮಂಗಾವತಿ ಗ್ರಾಮಗಳಲ್ಲಿ ಅತೀವೃಷ್ಟಿಯಿಂದಾದ ಬೆಳೆ ಹಾನಿ ವಿಕ್ಷಿಸಿದ ಬಿಜೆಪಿ ನಾಯಕರು**


# ರಾಜ್ಯ ಕಾಂಗ್ರೆಸ್ ಸರಕಾರ ಸತ್ತು ಹೋಗಿದೆ: ಆರ್.ಅಶೋಕ

**ಅಥಣಿ:** ಸದ್ಯಕ್ಕೆ ಕಣ್ಣು, ಕಿವಿ ಹಾಗೂ ಬಾಯಿ ಇಲ್ಲದಂತಾಗಿರುವ ರಾಜ್ಯದ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಸುತ್ತು ಹೋಗಿದ್ದು, ಅತಿವೃಷ್ಟಿಯಿಂದ ಕಂಗಾಲಾಗಿರುವ ರೈತರ ಗೋಳು ಕೇಳುವವರೆ ಇಲ್ಲದಂತಾಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ರಾಜ್ಯ ಸರ್ಕಾರದ ವಿರುದ್ಧ ಗುಡುಗಿದ್ದಾರೆ.

ಅವರು, ಶುಕ್ರವಾರ ದಿ. 03 ರಂದು ಸಂಜೆ ತಾಲೂಕಿನ ಜುಗೂಳ ಮತ್ತು ಮಂಗಾವತಿ ಗ್ರಾಮಗಳಲ್ಲಿ ಅತಿವೃಷ್ಟಿಯಿಂದ ಹಾಳಾಗಿರುವ ಬೆಳೆಗಳನ್ನು ವಿಕ್ಷಣೆ ಮಾಡಿ, ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದರು. ರಾಜ್ಯದಲ್ಲಿ ಅತೀವೃಷ್ಟಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ನೂರಾರು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದರೂ ಸರ್ಕಾರ ಮೌನ ವಹಿಸಿದೆ ಎಂದು ಆರೋಪಿಸಿದ ಅವರು, ರೈತರ ಅಳಲು ಕೇಳದ ಸರ್ಕಾರ ಕಿವುಡಾಗಿದೆ. ರಾಜ್ಯದಲ್ಲಿ ಜನಸಾಮಾನ್ಯರು ತೊಂದರೆಗಿಡಾಗಿದ್ದರೂ ಕೂಡ ಸರ್ಕಾರ ಕಣ್ಣು ಮುಚ್ಚಿ ಕುಳಿತುಕೊಂಡಿದೆ. ಹೀಗಾಗಿ, ಸರ್ಕಾರ ಸತ್ತು ಹೋಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಮಾತನಾಡಿ, ತಾಲೂಕಿನ ಜುಗೂಳ ಹಾಗೂ ಮಂಗಾವತಿ ಗ್ರಾಮಗಳಲ್ಲಿ ಪ್ರವಾಹದ ಹಿನ್ನಿರಿನಿಂದ ಸುಮಾರು 3 ಸಾವಿರಕ್ಕೂ ಅಧಿಕ ಪ್ರಮಾಣದ ಭೂಮಿಯಲ್ಲಿ ನೀರು ನಿಂತಿದ್ದು, ರೈತರ ಪರಿಸ್ಥಿತಿ ಚಿಂತಾಜನಕವಾಗಿದೆ. ಈ ಕುರಿತು ಸರ್ಕಾರದ ಗಮನ ಸೆಳೆದು, ನಿಂತಿರುವ ನೀರನ್ನು ಹೋಗಲಾಡಿಸಲು ಯೋಜನೆ ರೂಪಿಸುವಂತೆ ಒತ್ತಾಯಿಸಲಾಗುವುದು. ಮಹಾರಾಷ್ಟ್ರದಲ್ಲಿ ಅತೀ ಹೆಚ್ಚು ಮಳೆಯಾಗಿ ಕೃಷ್ಣಾ ನದಿಯ ನದಿಯ ನೀರು ಹೆಚ್ಚಾಗಿ ಈ ಭಾಗದ ರೈತರ ಜಮೀನುಗಳಿಗೆ ಅಪಾರ ಪ್ರಮಾಣದ ನೀರು ನುಗ್ಗಿ ಬೆಳೆಹಾನಿಯಾಗಿದೆ. ಇದರಿಂದ ರೈತರು ಆರ್ಥಿಕ ಸಂಕಷ್ಟ ಎದುರಿಸಿತ್ತಿದ್ದು, ಸರ್ಕಾರ ಎಚ್ಚೆತ್ತುಕೊಂಡು ಪರಿಹಾರ ನೀಡುವಂತೆ ಆಗ್ರಹಿಸಿದರು.

ಈ ವೇಳೆ ಸಂಸದ ರಮೇಶ ಜಿಗಜಿಣಗಿ, ಶಾಸಕರಾದ ಶಶಿಕಲಾ ಜೊಲ್ಲೆ, ದುರ್ಯೋದನ ಐಹೊಳೆ, ನಿಖಿಲ ಕತ್ತಿ, ಎನ್. ರವಿಕುಮಾರ, ಮಾಜಿ ಸಚಿವ ಶ್ರೀಮಂತ ಪಾಟೀಲ, ಬಿಜೆಪಿ ಮುಖಂಡ ಶೀತಲಗೌಡ ಪಾಟೀಲ, ಕಾಗವಾಡ ಮಂಡಲ ಬಿಜೆಪಿ ಅಧ್ಯಕ್ಷ ಅರುಣಕುಮಾರ ಗಣೇಶವಾಡಿ, ಕೆಎಂಎಫ್ ಮಾಜಿ ನಿರ್ದೇಶಕ ಅಪ್ಪಾಸಾಹೇಬ ಅವತಾಡೆ, ದಾದಾ ಪಾಟೀಲ, ಸೇರಿದಂತೆ ಅಧಿಕಾರಿಗಳು, ರೈತ ಮುಖಂಡರು ಉಪಸ್ಥಿತರಿದ್ದರು.



# ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಬೆಳಗಾವಿ ಜಿಲ್ಲೆಗೆ ಗರಿ ಇದ್ದಂತೆ

**ಬೆಳಗಾವಿ:** ಕರ್ನಾಟಕಕ್ಕೆ ಎರಡನೇ ರಾಜಧಾನಿ ಎಂದು ಗುರುತಿಸಿಕೊಂಡಿರುವ ಬೆಳಗಾವಿ ನಗರ ವೇಗವಾಗಿ ಬೆಳೆಯುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕಾಳಜಿಯಿಂದ ಕರ್ನಾಟಕದ ಜೊತೆಗೆ ಬೆಳಗಾವಿ ಕೂಡ ಅಭಿವೃದ್ಧಿ ಹೊಂದುತ್ತಿದ್ದು, ಇಲ್ಲಿನ ಜನರ ಬಹುವರ್ಷಗಳ ಬೇಡಿಕೆಯಾಗಿದ್ದ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಇಂದು ಲೋಕಾರ್ಪಣೆಗೊಂಡಿದ್ದು ಈ ಭಾಗದ ಜನರಿಗೆ ಖುಷಿ ತಂದಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬಿಮ್ಸ್) ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ನಿರ್ಮಿಸಲಾಗಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ಉದ್ಘಾಟನೆ, ಬೆಳಗಾವಿ ಸ್ಮಾರ್ಟ್ ಸಿಟಿ ಅನುದಾನದಲ್ಲಿ ನಿರ್ಮಾಣಗೊಂಡ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬೆಳಗಾವಿ ಬಸ್ ನಿಲ್ದಾಣದ ಉದ್ಘಾಟನೆ ಹಾಗೂ ಚನ್ನಮ್ಮ ವಿಶ್ವವಿದ್ಯಾಲಯದ ವಿವಿಧ ಕಟ್ಟಡಗಳ ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಸಚಿವರು ಮಾತನಾಡಿದರು. ಈ ರಾಜ್ಯಕ್ಕೆ, ಬಡವರಿಗೆ, ರೈತರಿಗೆ, ಹಿಂದುಳಿದವರಿಗೆ ಅತೀ ಹೆಚ್ಚು ಜನಪರ ಯೋಜನೆಗಳನ್ನು ಜಾರಿಗೆ ತಂದವರೆಂದರೆ ಅದು ಸಿದ್ದರಾಮಯ್ಯನವರು.



ಈ ಹಿಂದೆ 2013ರಿಂದ 2018ರ ವರೆಗೆ ಅವರ ಆಡಳಿತ ವೈಖರಿಯನ್ನು ನಾವು- ನೀವೆಲ್ಲ ಕಂಡಿದ್ದೇವೆ. ಅವರು ಮಾಡಿದ ಅಭಿವೃದ್ಧಿ ಕಾರ್ಯಗಳು ನಮ್ಮ ಕಣ್ಮುಂದಿದೆ. ಈ ಅವಧಿಯಲ್ಲಿ ಘೋಷಣೆ ಮಾಡಲಾಗಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವುದರ ಜೊತೆಗೆ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿದ್ದಾರೆ ಎಂದರು.

ಸಚಿವ ಶರಣಪ್ರಕಾಶ್ ಪಾಟೀಲ್ ಅವರ ಕಾಳಜಿಯಿಂದಾಗಿ ಇಂದು ಜಿಲ್ಲಾ ಕೇಂದ್ರಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ನಿರ್ಮಾಣವಾಗುತ್ತಿವೆ. ಜಿಲ್ಲಾಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಬಡವರಿಗೆ ಅನುಕೂಲ ಆಗಬೇಕು. ಸರ್ಕಾರಿ ಆಸ್ಪತ್ರೆಗಳಲ್ಲೂ ಉತ್ತಮ ಚಿಕಿತ್ಸೆ ಸಿಗಲಿದೆ ಎಂಬುದನ್ನು ಬಿಮ್ಸ್ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಸಾಬೀತು ಮಾಡಿ ತೋರಿಸಬೇಕು ಎಂದು ಸಚಿವರು ಕರೆ ನೀಡಿದರು. ಜನರ ತೆರಿಗೆ ಹಣದಿಂದ ನಿರ್ಮಾಣಗೊಂಡಿರುವ ನಗರ ಬಸ್ ನಿಲ್ದಾಣ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣವನ್ನು ಸ್ವಚ್ಛತೆಯನ್ನು ಎಲ್ಲರೂ ಕಾಪಾಡಿಕೊಳ್ಳಬೇಕು ಎಂದರು.

ಸಮಾರಂಭದಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಸಚಿವರಾದ ಡಾ.ಶರಣ್‌ಪ್ರಕಾಶ್ ಪಾಟೀಲ್, ರಾಮಲಿಂಗಾರೆಡ್ಡಿ, ಡಾ.ಎಂ.ಸಿ.ಸುಧಾಕರ್, ಶಾಸಕರಾದ ಆಸೀಫ್ ಸೇಠ್, ಅಶೋಕ್ ಪಟ್ಟಣ್, ಭರಮಗೌಡ ಕಾಗೆ, ಮಹಾಂತೇಶ್ ಕೌಜಲಗಿ, ಬಾಬಾ ಸಾಹೇಬ್ ಪಾಟೀಲ್, ವಿಧಾನಪರಿಷತ್ ಸದಸ್ಯರಾದ ಚನ್ನರಾಜ್ ಹಟ್ಟಿಹೊಳಿ, ನಾಗರಾಜ್ ಯಾದವ್, ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಿನಯ್ ನಾವಲಗಟ್ಟಿ, ಕೆಎಲ್‌ಇ ಸಂಸ್ಥೆಯ ಅಧ್ಯಕ್ಷರಾದ ಡಾ.ಪ್ರಭಾಕರ್ ಕೋರೆ, ಬಿಮ್ಸ್ ಸಿಬ್ಬಂದಿ ವರ್ಗ, ಚನ್ನಮ್ಮ ವಿವಿ ಸಿಬ್ಬಂದಿ, ಕೆಎಸ್‌ಆರ್‌ಟಿಸಿ ಸಿಬ್ಬಂದಿ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

## ನೀರಾವರಿ ಯೋಜನೆ ತರುವ ಕನಸು ಇತ್ತು

ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್ ನಮ್ಮ ಗ್ರಾಮೀಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲೇ ನಿರ್ಮಾಣವಾಗುತ್ತಿದೆ. ರಾಜಕೀಯ ಕಾರಣಕ್ಕಾಗಿ ಆ ಕ್ಯಾಂಪಸ್ ಆಯ್ಕೆ ಮಾಡಿದ್ದಾರಾದರೂ, ವಿಶ್ವವಿದ್ಯಾಲಯವನ್ನು ಒಂದು ಮಾದರಿಯಾಗಿ ಅಭಿವೃದ್ಧಿಪಡಿಸಲು ನಾನು ಪ್ರಯತ್ನಿಸುತ್ತೇನೆ. ಅಲ್ಲಿ ನನಗೆ ನೀರಾವರಿ ಯೋಜನೆ ತರುವ ಕನಸಿತ್ತು. ಆದರೆ, ಅಭಿವೃದ್ಧಿಯಲ್ಲಿ ರಾಜಕೀಯ ಮಾಡಲು ನನಗೆ ಬರುವುದಿಲ್ಲ. ಅದರಲ್ಲೂ ಶಿಕ್ಷಣ ಸಂಸ್ಥೆಗಳಲ್ಲಿ ರಾಜಕೀಯ ತರುವುದಕ್ಕೆ ನಾನು ಅವಕಾಶ ನೀಡುವುದಿಲ್ಲ ಎಂದರು. ವಿಶ್ವವಿದ್ಯಾಲಯಕ್ಕೆ ಆಗಬೇಕಾದ ಎಲ್ಲ ಕೆಲಸಗಳನ್ನೂ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಆದಷ್ಟು ಬೇಗ ವಿಶ್ವವಿದ್ಯಾಲಯ ಉದ್ಘಾಟನೆಯಾಗುವ ದಿಸೆಯಲ್ಲಿ ಪ್ರಯತ್ನಿಸಲಾಗುವುದು. ಮುಖ್ಯಮಂತ್ರಿಗಳಿಂದಲೇ ನೂತನ ವಿಶ್ವವಿದ್ಯಾಲಯ ಕ್ಯಾಂಪಸ್ ಉದ್ಘಾಟಿಸಲಾಗುವುದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

# ನಾಳೆ ಕೊಪ್ಪಳಕ್ಕೆ ಮುಖ್ಯಮಂತ್ರಿ ಸಚಿವರಿಂದ ಸಿದ್ಧತೆ ಪರಿಶೀಲನೆ

**ಕೊಪ್ಪಳ:** ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 6ರಂದು ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ನಡೆಯಲಿರುವ ಜಿಲ್ಲಾ ವ್ಯಾಪ್ತಿಯ ರೂ. 2000 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ಫಲಾನುಭವಿಗಳಿಗೆ ಸವಲತ್ತು ವಿತರಣಾ ಕಾರ್ಯಕ್ರಮದ ನಿಮಿತ್ತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ತಂಗಡಗಿ ಅವರು ಶನಿವಾರ ಸಿದ್ಧತೆಗಳನ್ನು ಪರಿಶೀಲಿಸಿದರು. ಅ. 6ರ ಕಾರ್ಯಕ್ರಮಕ್ಕೆ ಕೊಪ್ಪಳ ನಗರದ ಹೊಸಪೇಟೆ ರಸ್ತೆಯ ಮಾರುತಿ ಸುಜೂಕಿ ಶೋ ರೂಂ ಎದುರುಗಡೆಯ ಅಗಡಿ ಲೇಔಟನಲ್ಲಿ ನಿರ್ಮಿಸಲಾಗಿರುವ ಮುಖ್ಯ ವೇದಿಕೆ, ಮಾಧ್ಯಮದ ಗ್ಯಾಲರಿ, ಗಣ್ಯರು, ಸಾರ್ವಜನಿಕರಿಗೆ ಕೂಡುವ ಆಸನಗಳ ವ್ಯವಸ್ಥೆ, ಕುಡಿಯುವ ನೀರು, ವಾಹನಗಳ ಪಾರ್ಕಿಂಗ್ ವ್ಯವಸ್ಥೆ, ವಿವಿಧ ಇಲಾಖೆಗಳ ಪ್ರದರ್ಶನ ಮಳಿಗೆಗಳು ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಸಚಿವರು ವೀಕ್ಷಣೆ ಮಾಡಿ, ಅಧಿಕಾರಿಗಳೊಂದಿಗೆ ಚರ್ಚಿಸಿದರು.


ಇದೇ ವೇಳೆ ಸಚಿವರು ಮಾತನಾಡಿ, ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಫಲಾನುಭವಿಗಳು ಒಳಗೊಂಡಂತೆ ಸುಮಾರು ಒಂದು ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರುವ ನಿರೀಕ್ಷೆಯಿದ್ದು, ಎಲ್ಲರಿಗೂ ಕುಡಿಯುವ ನೀರು ಮತ್ತು ಊಟದ ವ್ಯವಸ್ಥೆ ಅಚ್ಚುಕಟ್ಟಾಗಿ ಆಗಬೇಕು. ಕಾರ್ಯಕ್ರಮಕ್ಕೆ ಬರುವ ಜನರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಸಂಬಂಧಿಸಿದ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಕಾರ್ಯಕ್ರಮಕ್ಕೆ ಪೊಲೀಸ್ ಇಲಾಖೆಯಿಂದ ಅಗತ್ಯ ಭದ್ರತೆಯನ್ನು ಒದಗಿಸಬೇಕು ಎಂದು ಸೂಚನೆ ನೀಡಿದರು.

# ಹಾನಿಗೊಳಗಾದ ರೈತರಿಗೆ ಸೂಕ್ತ ಪರಿಹಾರ ನೀಡಲು ಆಗ್ರಹ

**ಮುದ್ದೇಬಿಹಾಳ :** ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರ ಒಂದರಲ್ಲಿ 1.24 ಲಕ್ಷ ಸಾವಿರ ಹೆಕ್ಟೇರ್ ಭೂಮಿ ಸರ್ವೆ ಆಗಬೇಕು ಪ್ರತಿ ಎಕರೆ ಭೂಮಿಗೆ ರೈತರಿಗೆ ಪರಿಹಾರ ಕೊಡಬೇಕು ಒಂದೆರಡು ಎಕರೆಗೆ ಅಲ್ಲಾ ಮತಕ್ಷೇತ್ರದಲ್ಲಿ ಸಂಪೂರ್ಣ ಪಾರದರ್ಶಕ ಸರ್ವೆ ಮಾಡಿ ಪರಿಹಾರ ಒದಗಿಸಬೇಕೆಂದು ಬಿಜೆಪಿ ರೈತ ಮೋರ್ಚಾದ ರಾಜಾಧ್ಯಕ್ಷ ಹಾಗೂ ಮಾಜಿ ಶಾಸಕ ಎ.ಎಸ್ ಪಾಟೀಲ್ ನಡಹಳ್ಳಿ ರಾಜ್ಯ ಕಾಂಗ್ರೆಸ್ ಸರಕಾರಕ್ಕೆ ಆಗ್ರಹಿಸಿದರು.

ಶುಕ್ರವಾರ ಸಂಜೆ ತಮ್ಮ ತೋಟದ ಮನೆಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಸರ್ವೆ ಮಾಡಿದ ಮಾಹಿತಿಯನ್ನು ಗ್ರಾಪಂ ಗಳಲ್ಲಿ ಅಂಟಿಸಬೇಕು ಆನ್ಲೈನ್ ನಲ್ಲಿ ಸರ್ವೆ ನಂಬರ್, ರೈತರ ಹೆಸರು ಪರಿಹಾರದ ಮಾಹಿತಿ ಒದಗಿಸಬೇಕು ನಮ್ಮ ವಿಜಯಪುರ ಜಿಲ್ಲೆಯಲ್ಲಿ ಇಬ್ಬರೂ ಸಚಿವರು ಒಬ್ಬರು ಜಿಲ್ಲೆಯ ಉಸ್ತುವಾರಿ ಸಚಿವರಿದ್ದಾರೆ ಕಾಂಗ್ರೆಸ್ ಪಕ್ಷದ ಶಾಸಕರಿದ್ದು ಅಧಿಕಾರಿಗಳಿಗಿಂತ ಹೆಚ್ಚಿನ ಜವಾಬ್ದಾರಿ ಇವರ ಮೇಲಿದೆ ರೈತರಿಗೆ ನ್ಯಾಯ ಒದಗಿಸುವ ಕೆಲಸವನ್ನು ಮಾಡಬೇಕು ರೈತರು ಇದು ನಿಮ್ಮ ಹಕ್ಕಾಗಿದೆ ಯಾವ ಮುಲಾಜಿಲ್ಲದೆ ಪರಿಹಾರವನ್ನು ಪಡೆಯಬೇಕು ಬೆಳೆಹಾನಿ ಕುರಿತು ಸಮೀಕ್ಷೆ ಮಾಡಿಸಿ ನಿಮ್ಮ ಬೆಳಹಾನಿ ಕುರಿತು ಆನ್ಲೈನ್ ನಲ್ಲಿ ಚೆಕ್ ಮಾಡಿಕೂಳ್ಳಿ ಎಂದು ಕರೆ ನೀಡಿದರು. ಇದು ರಾಜಕಾರಣ ಮಾಡುವ ಸಂದರ್ಭವಲ್ಲಾ ರೈತರು ಕಷ್ಟದಲ್ಲಿದ್ದಾರೆ ಅವರಿಗೆ ಸಹಾಯ ಮಾಡಬೇಕು ಈ ಮುಂಚೆ ಪತ್ರಿಕಾಗೋಷ್ಠಿ ನಡೆಸಿ ಅತಿವೃಷ್ಟಿ ಗೆ ಹಾನಿಗೆ ಒಳಗಾದ ರೈತರಿಗೆ ಬೆಳೆ ಪರಿಹಾರ ನೀಡಲು ದಸರಾ ಹಬ್ಬದ ವರಗೆ ಗಡವು ನೀಡಿದ್ದೆ ಅವರು ಪರಿಹಾರ ಒದಗಿಲ್ಲ ಹೀಗಾಗಿ ಮತಕ್ಷೇತ್ರದ ಪ್ರತಿ ಹಳ್ಳಿಗಳಿಗೆ ಬೇಟಿ ನೀಡ್ತನೆ ಪ್ರವಾಸ ಮಾಡ್ತನೆ ಡಿಸಿ, ತಹಶಿಲ್ದಾರ ಪ್ರತಿ ಹಳ್ಳಿಗಳಿಗೆ ಹೋಗಬೇಕು ತಲಾಟಿ, ಪಿಡಿಒ ಕಂದಾಯ ಕೃಷಿ ಅಧಿಕಾರಿಗಳು ಗ್ರಾಮೀಣ ಪ್ರದೇಶಗಳಲ್ಲಿ ವಾಸ್ತವ್ಯ ಮಾಡಿ ಸರ್ವೆ ಮಾಡಿಸಬೇಕು ಜಮೀನಿನುಗಳಲ್ಲಿ ನೀರು ನಿಂತಿವೆ ಅಂದರೆ ಒಂದು ವಾರ ಸಮಯ ತಗೆದುಕೂಂಡಾದರೂ ಸರ್ವೆ ಮಾಡಬೇಕು ಇಲ್ಲದೆ ಇದ್ದರೆ ಅಧಿಕಾರಿಗಳನ್ನು ಹೊಣೆ ಮಾಡುವುದಿಲ್ಲ ಸ್ಥಳೀಯ ಶಾಸಕರು ಹೊಣೆ ಮಾಡ್ತನೆ ಒಬ್ಬ ರೈತನು ಪರಿಹಾರದಿಂದ ವಂಚಿತವಾಗಲು ಈ ನಡಹಳ್ಳಿ ಬಿಡುವುದಿಲ್ಲವೆಂದು ಎಚ್ಚರಿಕೆ ನೀಡಿದರು. ಸ್ಥಳೀಯ ಶಾಸಕ ಅಪ್ಪಾಜಿ ನಾಡಗೌಡರು ಚುನಾವಣೆಯಲ್ಲಿ ಮತಹಾಕಿದ ಜನಕ್ಕೆ ಕೃತಜ್ಞತೆ ಹೇಳಲು ಹೋಗಿಲ್ಲ ಈಗಲಾದರೂ ಪ್ರತಿ ಹಳ್ಳಿಗಳಿಗೆ ಹೋಗಿ ರೈತರ ಜೊತೆ ಚರ್ಚೆ ಮಾಡಿ ಸಭೆಗಳನ್ನು ಮಾಡಿ ಹಾನಿಗೂಳಗಾದ ಪ್ರದೇಶದ ರೈತರಿಗೆ ಪರಿಹಾರ ಒದಗಿಸಲು ಈ ಮೂಲಕ ಆಗ್ರಹ ಪಡಿಸುತ್ತೇನೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣನವರ, ಬಿಜೆಪಿ ರೈತ ಮೋರ್ಚಾ ತಾಲ್ಲೂಕು ಅಧ್ಯಕ್ಷ ಎಸ್ ಎಸ್ ಶಿವಣಗಿ, ಯುವ ಮೋರ್ಚಾ ತಾಲ್ಲೂಕು ಅಧ್ಯಕ್ಷ ಗಿರೀಶಗೌಡ ಪಾಟೀಲ್, ಅಶೋಕ ರಾಠೋಡ,ಹರೀಶ ನಾಟಿಕಾರ, ಸಂಜು ಬಾಗೇವಾಡಿ, ನಾಗೇಶ ಕವಡಿಮಟ್ಟಿ, ರೇಖಾ ಕಂಡಗೂಳಿ ಸೇರಿದಂತೆ ಭಾಗವಹಿಸಿದ್ದರು.



ನನ್ನ ಹೋರಾಟದ ಫಲವಾಗಿ ಕುಂಚಗನೂರು ಗ್ರಾಮದಲ್ಲಿ ಮೊಸಳೆ ದಾಳಿಗೆ ಬಲಿಯಾದ ರೈತನಿಗೆ ಇಂದು20 ಲಕ್ಷ ರೂ ಪರಿಹಾರ ಸಿಕ್ಕಿದೆ ಮೃತರೈತನ ಕುಟುಂಬಕ್ಕೆ ಪರಿಹಾರ ಸಿಗದಂತೆ ಮರಣೋತ್ತರ ಪರೀಕ್ಷೆಯ ರಿಪೋರ್ಟ್ ತಡೆಹಿಡಿಯಲಾಯಿತು ಪರಿಹಾರಕ್ಕೆ ನೂರೆಂಟು ನೆಪಮಾಡಿದರು ನಾ ಬಿಡದೆ ಪರಿಹಾರ ಒದಗಿಸಿದ್ದೇನೆ ,ಡೋಣಿ ನದಿಯಲ್ಲಿ ಸಂತೋಷ ಹಡಪದ ಎಂಬ ಯುವಕ ಮೃತಪಟ್ಟರು ಉಸ್ತುವಾರಿ ಸಚಿವರು ಈ ಭಾಗದಲ್ಲಿ ಜೀವಹಾನಿ ಆಗಿಲ್ಲವೆಂದು ಹೇಳಿಕೆ ನೀಡಿದರು, ಮೃತ ಯುವಕನ ಕುಟುಂಬಕ್ಕೆ ಸ್ವಾಂತನ ಹೇಳಲಿಲ್ಲ ಘಟನಾ ಸ್ಥಳಕ್ಕೆ ಸ್ಥಳೀಯ ಶಾಸಕರು ಸಚಿವರು ನೀಡಲಿಲ್ಲ ನಾನು ಭೇಟಿ ಅಧಿಕಾರಿಗಳ ಮೇಲಿನ ಒತ್ತಡ ಹೇರಿದ ಕಾರಣ ಮೃತ ಯುವಕನ ಶವ ಸಿಕ್ಕಿತು.

**ಎ.ಎಸ್ ಪಾಟೀಲ್ ನಡಹಳ್ಳಿ**
**ಮಾಜಿ ಶಾಸಕ**

# ವಿಶೇಷ ಆಭರಣಗಳ ಪ್ರದರ್ಶನ ಕಾರ್ಯಕ್ರಮ ಉದ್ಘಾಟನೆ

**ಬೆಳಗಾವಿ:** ಸಿ. ಕೃಷ್ಣಯ್ಯ ಚೆಟ್ಟಿ ಗ್ರೂಪ್ ಆಫ್ ಜ್ಯುವೆಲ್ಲರ್ಸ್ ಸಂಪ್ರದಾಯವನ್ನು ಆಧುನಿಕ ವಿನ್ಯಾಸಗಳೊಂದಿಗೆ ಬೆರೆಸುವ ವಿಶೇಷ ಆಭರಣಗಳ ಪ್ರದರ್ಶನ ಅ.3 ರಿಂದ ಅ. 6 ವಿಶೇಷ ಪ್ರದರ್ಶನ ಬೆಳಗಾವಿಯ ಓಪಲ್ ಹಾಲ್‌ನಲ್ಲಿರುವ ಹೋಟೆಲ್ ಇಇಎಫ್‌ಎಯಲ್ಲಿ ಏರ್ಪಡಿಸಿದ್ದು, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಬಸವರಾಜ ಕಾರ್ಯಕ್ರಮ ಉದ್ಘಾಟಿಸಿದರು.ಹೋಟೆಲ್ ಬುಕಿಂಗ್

155 ವರ್ಷಗಳಿಂದ, ಸಿ. ಕೃಷ್ಣಯ್ಯ ಚೆಟ್ಟಿ ಗ್ರೂಪ್ ಅತ್ಯುತ್ತಮ ಕಲಾತ್ಮಕತೆ, ಸಾಟಿಯಿಲ್ಲದ ಗುಣಮಟ್ಟ ಮತ್ತು ರಾಜಮನೆತನಗಳು ಮತ್ತು ಅಭಿಜ್ಞರಿಗೆ ಆಭರಣ ವಿನ್ಯಾಸಕಾರನಾಗಿ ಗುರುತಿಸಿಕೊಂಡಿದೆ.

ಈ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಬಸವರಾಜ "ಇಂತಹ ಶ್ರೀಮಂತ ಇತಿಹಾಸ ಹೊಂದಿರುವ ಬ್ರ್ಯಾಂಡ್ ಬೆಳಗಾವಿಗೆ ತನ್ನ ಕಲಾತ್ಮಕತೆಯನ್ನು ಹೊತ್ತುತಂದಿರುವುದನ್ನು ನೋಡುವುದೇ ಸಂತೋಷಕರವಾಗಿದೆ ಎಂದರು.

ಸಿ. ಕೃಷ್ಣಯ್ಯ ಚೆಟ್ಟಿ ಗ್ರೂಪ್‌ನ ಮಳಿಗೆಯ ಮುಖ್ಯಸ್ಥ ನಿಶಾಂತ್ ಮಾತನಾಡಿ, 'ಆಭರಣಗಳು ಅದ್ಭುತವಾಗಿರುವುದರ ಜೊತೆಗೆ ಅರ್ಥಪೂರ್ಣವಾಗಿರಬೇಕು ಎಂದು ಸಿ. ಕೃಷ್ಣಯ್ಯ ಚೆಟ್ಟಿ ಗ್ರೂಪ್ ಯಾವಾಗಲೂ ನಂಬಿದೆ. ಈ ಪ್ರದರ್ಶನವು ಬೆಳಗಾವಿಯ ಜನರೊಂದಿಗೆ ಸಂಪರ್ಕ ಸಾಧಿಸುವ, ನಮ್ಮ ಪರಂಪರೆಯನ್ನು ಹಂಚಿಕೊಳ್ಳುವ ಮತ್ತು ಸಿಕೆಸಿ ಸಂಗ್ರಹದಿಂದ ಹಿಡಿದು ನಮ್ಮ ಸುಸ್ಥಿರ Crash club ನಂತಹ ಹೊಸ ವಿಚಾರಗಳನ್ನು ಅವರಿಗೆ ಪರಿಚಯಿಸುವ ನಮ್ಮ ಮಾರ್ಗವಾಗಿದೆ. ಎಂದರು. ಸಿ. ಕೃಷ್ಣಯ್ಯ ಚೆಟ್ಟಿ ಗ್ರೂಪ್‌ನ crash.club ಇದು ಆಧುನಿಕ ಐಷಾರಾಮಿತನವನ್ನು ಮರು ವ್ಯಾಖ್ಯಾನಿಸುವ ಪ್ರಯೋಗಾಲಯದಲ್ಲಿ ಅಭಿವೃದ್ಧಿಪಡಿಸಿದ ವಜ್ರಗಳ ಕ್ರಾಂತಿಕಾರಿ ಸಂಗ್ರಹವಾಗಿದೆ. ವಿನ್ಯಾಸಗೊಳಿಸಲಾದ crash.club ವಜ್ರಗಳು ವಿಜ್ಞಾನ, ಕಲಾತ್ಮಕತೆ ಮತ್ತು ಸುಸ್ಥಿರತೆಯ ಪ್ರತೀಕದಂತಿದೆ. ಪ್ರತಿಯೊಂದು ಹರಳನ್ನು ಕುಶಲಕರ್ಮಿಗಳು ಕೈಯಿಂದ ಕೆತ್ತನೆಗೊಳಿಸಿದ್ದಾರೆ ಮತ್ತು ನೈತಿಕ ಐಷಾರಾಮಿತನಕ್ಕೆ ಬ್ರ್ಯಾಂಡ್‌ನ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಬೆಳಗಾವಿಯಲ್ಲಿನ ಈ ಪ್ರದರ್ಶನವು ಕೇವಲ ಪ್ರದರ್ಶನಕ್ಕೆ ಸೀಮಿತವಾಗಿಲ್ಲ ಕಲಾತ್ಮಕತೆ, ಪರಂಪರೆಯ ಪ್ರದರ್ಶನ. ಇಲ್ಲಿ ಸಂದರ್ಶಕರು 155 ವರ್ಷಗಳಷ್ಟು ಹಳೆಯ ಸಿ. ಕೃಷ್ಣಯ್ಯ ಚೆಟ್ಟಿ ಗ್ರೂಪ್ ಆಭರಣಗಳ ಭವಿಷ್ಯವನ್ನು ಹೇಗೆ ರೂಪಿಸುತ್ತಿದೆ ಎಂಬುದನ್ನು ವೀಕ್ಷಿಸುತ್ತಾರೆ' ಎಂದು ಸಿ. ಕೃಷ್ಣಯ್ಯ ಚೆಟ್ಟಿ ಗ್ರೂಪ್‌ನ ಪಿಆರ್ ಮುಖ್ಯಸ್ಥ ತೇಜಸ್ ಕಲ್ರಾ ಹೇಳಿದರು.

ಬೆಳಗಾವಿ ಗ್ರಾಹಕರಿಗೆ ಮಾತ್ರ ವಿಶೇಷ ಕೊಡುಗೆಗಳು ಲಭ್ಯವಿದೆ 9% ವರೆಗೆ ರಿಯಾಯಿತಿ ಅಂದರೆ ಕೆಳಗಿನಂತೆ ಆಫರ್ ಬೆಳ್ಳಿ ಆಭರಣಗಳ ಮೇಲೆ 2% ರಿಯಾಯಿತಿ ಚಿನ್ನದ ಆಭರಣಗಳ ಮೇಲೆ 4% ರಿಯಾಯಿತಿ, ವಜ್ರದ ಆಭರಣಗಳ ಮೇಲೆ 6% ರಿಯಾಯಿತಿ ಮತ್ತು 18.69 ಲಕ್ಷ ಮತ್ತು ಅದಕ್ಕಿಂತ ಹೆಚ್ಚಿನ ಮೌಲ್ಯದ ವಜ್ರದ ಆಭರಣಗಳ ಖರೀದಿಗಳ ಮೇಲೆ 9% ರಿಯಾಯಿತಿಯಿದೆ.



**ಹೊಸಳ್ಳಿ-ಹಿಟ್ನಾಳ್ ಮಧ್ಯ ಭಾಗದ ರಾಷ್ಟ್ರೀಯ ಹೆದ್ದಾರಿ-50ರ ಮೇಲ್ಸೇತುವೆ ಉದ್ಘಾಟನೆ**

# ರಸ್ತೆ ಅಪಘಾತಗಳನ್ನು ಶೂನ್ಯಕ್ಕೆ ತರಲು ಕ್ರಮ

**ಕೊಪ್ಪಳ:** ಜಿಲ್ಲೆಯ ಅಸುರಕ್ಷಿತ ರಸ್ತೆ ಕ್ರಾಸ್‌ಗಳಲ್ಲಿ ಫ್ಲೈಓರ್ ನಿರ್ಮಾಣ ಮತ್ತು ವಾಹನಗಳ ಸಂಚಾರದ ಮೇಲೆ ನಿಗಾವಹಿಸಲು ಅಪಘಾತ ವಲಯಗಳಲ್ಲಿ ಸಿಸಿ ಟಿವಿ ಅಳವಡಿಸಿ ರಸ್ತೆ ಅಪಘಾತಗಳನ್ನು ಶೂನ್ಯಕ್ಕೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ತಾಲ್ಲೂಕಿನ ಹೊಸಳ್ಳಿ ಮತ್ತು ಹಿಟ್ನಾಳ್ ಮಧ್ಯ ಭಾಗದಲ್ಲಿರುವ ರಾಷ್ಟ್ರೀಯ ಹೆದ್ದಾರಿ-50ರ ಮೇಲ್ಸೇತುವೆ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಎನ್.ಹೆಚ್-50 ಮತ್ತು 63 ರಸ್ತೆಗಳಲ್ಲಿ ಬಹಳಷ್ಟು ವಾಹನಗಳ ಸಂಚಾರ ದಟ್ಟನೆ ಹೆಚ್ಚಾಗಿದೆ. ಈ ಎರಡು ರಸ್ತೆಗಳ ಮಧ್ಯದಲ್ಲಿ ಸುಮಾರು 15 ಕಿಮೀ ಈ ಮಾರ್ಗದಲ್ಲಿ ಒಂದು ವರ್ಷಕ್ಕೆ ಸುಮಾರು 190 ರಸ್ತೆ ಅಪಘಾತಗಳು ಸಂಭವಿಸುತ್ತಿದ್ದು, ಇದರಲ್ಲಿ 50 ರಿಂದ 60 ಜನ ಸಾವನ್ನಪ್ಪುತ್ತಿದ್ದರು. ಇದನ್ನು ಅರಿತ ಹಿಂದಿನ ಸಂಸದರಾದ ಕರಡಿ ಸಂಗಣ್ಣನವರು 120 ಕೋಟಿ ರೂ.ಗಳನ್ನು ಮಂಜೂರು ಮಾಡಿಸಿ, ನಿಂಗಾಪುರ, ಹೊಸಳ್ಳಿ, ಶಹಪುರ ಹಾಗೂ ಮೆಥಗಲ್ ಸೇರಿ ಒಟ್ಟು ಐದು ಕಡೆಗಳಲ್ಲಿ ಮೇಲ್ಸೇತುವೆ ನಿರ್ಮಾಣಕ್ಕಾಗಿ ಟೆಂಡರ್ ಕರೆದು ಅಡಿಗಲ್ಲು ಹಾಕಿದ್ದರು. ಅವುಗಳನ್ನು ಒಂದೊಂದಾಗಿ ಪೂರ್ಣಗೊಳಿಸಲಾಗುವುದು. ರಸ್ತೆ ಅಪಘಾತಗಳ ಸಂಖ್ಯೆಯನ್ನು ಮತ್ತಷ್ಟು ಕಡಿಮೆಯಾಗಿಸಲು ಹೊಸ ಸಕ್ಯೂರಿಟಿ ಸಿಸ್ಟಮ್ ಮಾಡಬೇಕೆಂದು ಸಿಸಿ ಟಿವಿ ಅಳವಡಿಸಲಾಗಿದೆ ಎಂದರು. ವಾಹನಗಳಿಗೆ ವೇಗತ ಮಿತಿ ನಿಗದಿಪಡಿಸಿ ಭಾರಿ ವಾಹನಗಳಿಗೆ ವೇಗ ಮಿತಿ 60 ಕಿಮೀ ಹಾಗೂ ಕಾರ್ ಮತ್ತು ಬಸ್‌ಗಳಿಗೆ 70 ಕಿಮೀ ಮಿತಿ ನಿಗದಿ ಮಾಡಿ, ಓವರ್ ಸ್ಪೀಡ್‌ನಲ್ಲಿ ಹೋಗುವಂತಹ ವಾಹನಗಳಿಗೆ ಹೊಸ ಟೆಕ್ನಾಲಜಿ ಪ್ರಕಾರ ವಾಹನಗಳ ನಂಬರ್ ಮೇಲೆಯೇ ತ್ವರಿತವಾಗಿ ದಂಡ ಹಾಕುವ ಕೆಲಸ ಮಾಡಲಾಗುವುದು. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ಮಾಡಿ, ಈ ನಿಯಮಗಳನ್ನು ಜಾರಿಗೊಳಿಸಲಾಗುವುದು. ಟಿಪ್ಪರ ವಾಹನವೊಂದರ ಓವರ್ ಸ್ಪೀಡ್‌ನಿಂದಾಗಿ ಇತ್ತೀಚೆಗೆ ಕಿರ್ಲೋಸ್ಕರ್ ಕಂಪನಿ ಹತ್ತಿರ 129 ಕುರಿಗಳು ಸಾವನಪ್ಪಿದ್ದವು. ಕಿರ್ಲೋಸ್ಕರ್ ಮತ್ತು ಹೊಸಪೇಟೆ ಸ್ಟೀಲ್ಸ್ ಕಂಪನಿ ಹತ್ತಿರವೂ ಸಿಸಿ ಟಿವಿ ಅಳವಡಿಸಲು ಆಯಾ ಕಂಪನಿಗಳಿಗೆ ಸೂಚನೆ ನೀಡಲಾಗಿದೆ. ಈ ರಸ್ತೆಯಲ್ಲಿ ಅಪಘಾತಗಳನ್ನು ಶೂನ್ಯಕ್ಕೆ ತರುವ ಉದ್ದೇಶ ಹೊಂದಲಾಗಿದೆ. ಹೊಸಳ್ಳಿ ಮತ್ತು ಹಿಟ್ನಾಳ್ ಮಧ್ಯ ಭಾಗದ ಎನ್.ಹೆಚ್-50ರ ಮೇಲ್ಸೇತುವೆಯನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ 19.43 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದ್ದು, ಸಾರ್ವಜನಿಕರ ಬಳಕೆಗೆ ಇಂದು ಅನುವು ಮಾಡಿಕೊಡಲಾಗಿದೆ. ಈ ಮೇಲ್ಸೇತುವೆಯಲ್ಲಿ ಶೀಘ್ರದಲ್ಲಿಯೇ ಲೈಟಿಂಗ್ ವ್ಯವಸ್ಥೆಯನ್ನು ಮಾಡಲಾಗುವುದು ಎಂದು ಹೇಳಿದರು.

ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ವಾಹನಗಳ ಸಂಚಾರಕ್ಕೆ ಅನುಕೂಲ ಮತ್ತು ಅಪಘಾತಗಳನ್ನು ತಡೆಗಟ್ಟಲು ಹೊಸಳ್ಳಿ-ಹಿಟ್ನಾಳ್ ಮಧ್ಯ ಭಾಗದ ರಾಷ್ಟ್ರೀಯ ಹೆದ್ದಾರಿ-50ರಲ್ಲಿ ಮೇಲ್ಸೇತುವೆ ನಿರ್ಮಾಣವಾಗಿರುವುದು ಸಂತಸ ತಂದಿದೆ ಎಂದರು.

ಮಾಜಿ ಸಂಸದರಾದ ಕರಡಿ ಸಂಗಣ್ಣ ಅವರು ಮಾತನಾಡಿದರು.ಕಾರ್ಯಕ್ರಮದಲ್ಲಿ ಹೊಸಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಸುರೇಶ್, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಕೊಪ್ಪಳ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಾಲಚಂದ್ರನ್, ಮುಖಂಡರಾದ ಗೂಳಪ್ಪ ಹಲಗೇರಿ, ವೀನಗೌಡ ಪಾಟೀಲ್, ಯಂಕಪ್ಪ, ಕೆ.ಎಂ.ಸೈಯದ್, ವಿಶ್ವನಾಥ ರಾಜಣ್ಣ, ಗುತ್ತಿಗೆದಾರ ಶರಣಬಸವರಾಜ ಆಲೂರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



# ನಾಳೆ ಹಿರಿಯ ನಾಗರಿಕರ ದಿನಾಚರಣೆ

**ಬಾಗಲಕೋಟೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಅಕ್ಟೋಬರ 6 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಜರಗುವ ಕಾರ್ಯಕ್ರಮವನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮವನ್ನು ಉದ್ಘಾಟಿಸುವರು. ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್. ಮೇಟಿ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ನವದೆಹಲಿಯ ಕರ್ನಾಟಕ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ವಿಧಾನ ಸಭೆ, ವಿಧಾನ ಪರಿಷತ್ ಶಾಸಕರು, ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

# ಇಂದಿನಿಂದ ರಾಜ್ಯಮಟ್ಟದ ಚಿತ್ರಕಲಾ ಶಿಬಿರ

**ತಾಳಿಕೋಟೆ:** ದೃಶ್ಯಬಿಂಬ ಕಲಾ ಪ್ರತಿಷ್ಠಾನ (ರಿ) ವಿಜಯಪುರ ಇವರ ಸಹಯೋಗದಲ್ಲಿ ಶ್ರೀ ಖಾಸ್ಗತೇಶ್ವರ ಮಠದ ಶ್ರೀಗಳ ಪವಾಡಗಳಾಧಾರಿತ ರಾಜ್ಯ ಮಟ್ಟದ ಚಿತ್ರಕಲಾ ಶಿಬಿರವನ್ನು ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 11-30 ಗಂಟೆಗೆ ಜರುಗಲಿರುವ ಈ ರಾಜ್ಯಮಟ್ಟದ ಚಿತ್ರಕಲಾ ಶಿಬಿರವನ್ನು ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ಉದ್ಘಾಟಿಸಲಿದ್ದು ಕಾರ್ಯಕ್ರಮದ ಅಧ್ಯಕ್ಷತೆಯನ್ನು ದೃಶ್ಯಬಿಂಬ ಕಲಾ ಪ್ರತಿಷ್ಠಾನದ ಅಧ್ಯಕ್ಷ ಸತೀಶ ಕೇಮಶೆಟ್ಟಿ ಅವರು ವಹಿಸುವರು

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :205, Postal Reg No. PMG/KA/NK/BM/135/25-27 / POST AT Vantamury Colony Post Office